ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 13 ಸಂಚಿಕೆ : 94
27–9–2025 ಶನಿವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 94

**ಸಂಪಾದಕೀಯ.....**

## ಧರ್ಮಸ್ಥಳ ಪ್ರಕರಣಗಳ ಸತ್ಯಾಸತ್ಯತೆ ಹೊರಬರಬೇಕು



ಕಳೆದ ಎರಡು ದಶಕಗಳಿಂದ ಧರ್ಮಸ್ಥಳ ಮತ್ತು ಅದರ ಸುತ್ತಮುತ್ತ ನಡೆದ ಹಲವಾರು ಅಪರಾಧ ಪ್ರಕರಣಗಳು ಇಂದಿಗೂ ಕತ್ತಲೆಯಲ್ಲೇ ಉಳಿದಿವೆ. ಅತ್ಯಾಚಾರ, ಕೊಲೆ, ಅಸಹಜ ಸಾವು, ದಲಿತರ ಭೂಮಿ ಕಬಳಿಕೆ, ಆರ್ಥಿಕ ದೌರ್ಜನ್ಯ ? ಇಂತಹ ಅನೇಕ ಪ್ರಕರಣಗಳ ಪೈಕಿ ಕೆಲವೇ ಕೆಲವು ತನಿಖೆಗೆ ಒಳಪಟ್ಟರೂ, ಹೆಚ್ಚಿನವು "ಸಿ ರಿಪೋರ್ಟ್" ಹೆಸರಿನಲ್ಲಿ ಮುಚ್ಚಲ್ಪಟ್ಟಿವೆ. ಇತ್ತೀಚೆಗೆ ಧರ್ಮಸ್ಥಳ ದೌರ್ಜನ್ಯ ವಿರೋಧಿ ವೇದಿಕೆ ನಡೆಸಿದ "ನ್ಯಾಯ ಸಮಾವೇಶ" ಈ ಪೈಕಿ ಮರೆಯಾದ ಸತ್ಯಗಳನ್ನು ಜನರ ಮುಂದಿಟ್ಟಿದೆ. ಈ ಹೋರಾಟವು ಕೇವಲ ಕೆಲವು ಪ್ರಕರಣಗಳ ನ್ಯಾಯಕ್ಕಾಗಿ ಮಾತ್ರವಲ್ಲ, ಇಡೀ ವ್ಯವಸ್ಥೆಯ ಪಾರದರ್ಶಕತೆಗೆ ಸಂಬಂಧಿಸಿದೆ.

ಸೌಜನ್ಯ ಕೊಲೆ ಪ್ರಕರಣದ ತನಿಖೆಯ ದೋಷಗಳನ್ನು ವಕೀಲ ಬಾಲನ್ ಅವರ ಮಾತುಗಳು ಸ್ಪಷ್ಟಪಡಿಸುತ್ತವೆ. ಅಪಹರಣ ನಡೆದ ಸ್ಥಳ, ಅತ್ಯಾಚಾರ ನಡೆದ ಸ್ಥಳ, ಕೊಲೆ ನಡೆದ ಸ್ಥಳಗಳಲ್ಲಿ ಮಹಜರು ನಡೆಸದೆ ಕೇವಲ ಮೃತದೇಹ ಸಿಕ್ಕ ಸ್ಥಳವನ್ನೇ ದಾಖಲು ಮಾಡಿರುವುದು ತನಿಖೆಯ ಗಂಭೀರ ಲೋಪ. ಮರಣೋತ್ತರ ಪರೀಕ್ಷೆಯಲ್ಲಿಯೂ ಸಾಕ್ಷ್ಯಗಳನ್ನು ಕಾಪಾಡದೆ ಹಾಳು ಮಾಡಿರುವುದು ನಿರ್ಲಕ್ಷ್ಯವಲ್ಲ, ಬದಲಿಗೆ ಅಪರಾಧವನ್ನು ಮುಚ್ಚಿಹಾಕುವ ಉದ್ದೇಶಿತ ಕ್ರಮವೆಂಬ ಅನುಮಾನ ಮೂಡುತ್ತದೆ. ಇಂತಹ ತನಿಖೆಯ ಮೇಲೆ ಜನರು ಹೇಗೆ ವಿಶ್ವಾಸ ಇಡಲಿ?

ಪದ್ಮಲತಾ, ವೇದವಲ್ಲಿ ಮಾವುತ ನಾರಾಯಣ, ಯಮುನಾ ಹತ್ಯೆ ಪ್ರಕರಣಗಳು ಮತ್ತು ಭೂ ಕಬಳಿಕೆ ಪ್ರಕರಣಗಳ ವಿಚಾರದಲ್ಲೂ ಇದೇ ರೀತಿಯ ನಿರ್ಲಕ್ಷ್ಯ ಕಂಡುಬಂದಿದೆ. ನ್ಯಾಯಾಲಯಕ್ಕೆ ತಲುಪುವುದಕ್ಕೂ ಮುನ್ನವೇ ಬಹುತೇಕ ಪ್ರಕರಣಗಳು ಮುಚ್ಚಲ್ಪಡುವುದು, ಪೊಲೀಸರು ಮತ್ತು ಆಡಳಿತ ವ್ಯವಸ್ಥೆಯ ತಟಸ್ಥತೆಯನ್ನು ಪ್ರಶ್ನಾರ್ಥಕವಾಗಿಸುತ್ತದೆ. ಧರ್ಮಸ್ಥಳದ ಪ್ರಕರಣಗಳ ಬಗ್ಗೆ ಧ್ವನಿ ಎತ್ತಿದವರ ಮೇಲೆ "ಧರ್ಮದ ವಿರುದ್ಧ" ಹೋರಾಟ ನಡೆಸುತ್ತಿದ್ದಾರೆ ಎಂಬ ಸುಳ್ಳು ಆರೋಪಗಳು ಬಿದ್ದಿವೆ. ವಾಸ್ತವವಾಗಿ, ಹೋರಾಟಗಾರರು ಯಾವುದೇ ಧರ್ಮದ ವಿರುದ್ಧವಲ್ಲ, ಅನ್ಯಾಯದ ವಿರುದ್ಧ ಹೋರಾಡುತ್ತಿದ್ದಾರೆ. ಆದರೆ, ಸಮಾಜದ ನ್ಯಾಯಪ್ರಿಯ ಧ್ವನಿಗಳನ್ನು ಮಣಿಸಲು ಧರ್ಮದ ಹೆಸರನ್ನು ಬಳಸಿ ದೌರ್ಜನ್ಯಗಳನ್ನು ಮುಚ್ಚಿಹಾಕುವ ಪ್ರವೃತ್ತಿ ಅಪಾಯಕಾರಿ. ಇದು ಕೇವಲ ವ್ಯಕ್ತಿಗಳ ಮಾನ ಹರಣವಲ್ಲ, ಪ್ರಜಾಸತ್ತಾತ್ಮಕ ಚಟುವಟಿಕೆಯ ಮೇಲಿನ ದಾಳಿ.

ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ಸಾರ್ವಜನಿಕ ಒತ್ತಡದಿಂದ ನ್ಯಾಯದ ಚಲನವಲನ ಸಾಧ್ಯವಾಯಿತು. ಅದೇ ರೀತಿಯಾಗಿ ಧರ್ಮಸ್ಥಳ ಪ್ರಕರಣಗಳಿಗೂ ಜನಶಕ್ತಿ ಅಗತ್ಯ. ಆದರೆ, ಜನರ ಧ್ವನಿ ಎದ್ದಾಗ ಮಾತ್ರ ಸರ್ಕಾರ ಜಾಗೃತವಾಗುವುದು ದುರ್ಬಲ ವ್ಯವಸ್ಥೆಯ ಲಕ್ಷಣ. ರಾಜ್ಯವು ತನ್ನ ಪ್ರಾಥಮಿಕ ಕರ್ತವ್ಯವನ್ನೇ ನಿರ್ಲಕ್ಷಿಸುತ್ತಿದೆ ಎಂದರ್ಥ.

ವ್ಯವಸ್ಥೆಯ ಮೇಲಿನ ವಿಶ್ವಾಸವನ್ನು ಉಳಿಸಿಕೊಳ್ಳಬೇಕಾದರೆ ಸರ್ಕಾರ ತಕ್ಷಣವೇ ಧರ್ಮಸ್ಥಳ ಪ್ರಕರಣಗಳ ಕುರಿತು ಪ್ರತ್ಯೇಕ, ಸ್ವತಂತ್ರ, ರಾಜಕೀಯ ಪ್ರಭಾವರಹಿತ ವಿಶೇಷ ತನಿಖಾ ತಂಡ (SIT) ರಚಿಸಬೇಕು. ತನಿಖೆಯ ಎಲ್ಲಾ ಹಂತಗಳನ್ನೂ ಸಾರ್ವಜನಿಕವಾಗಿ ಪಾರದರ್ಶಕಗೊಳಿಸಬೇಕು. ಅಪರಾಧಿಗಳನ್ನು ಮಾತ್ರವಲ್ಲ, ತನಿಖೆಯನ್ನು ನಿರ್ಲಕ್ಷ್ಯದಿಂದ ಮುಚ್ಚಿದ ಅಧಿಕಾರಿಗಳ ಮೇಲೂ ಕಾನೂನು ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ, ನ್ಯಾಯಾಂಗ ವ್ಯವಸ್ಥೆಯ ಮೇಲಿನ ಸಮಾಜದ ನಂಬಿಕೆ ಕುಸಿಯುವುದು ಖಚಿತ. ಈ ಹೋರಾಟವು ಕೇವಲ ಧರ್ಮಸ್ಥಳದ ಸಮಸ್ಯೆಯಲ್ಲ. ಇದು ಸಮಾಜದ ನ್ಯಾಯಕ್ಕಾಗಿ ನಡೆಯುತ್ತಿರುವ ಹೋರಾಟ. ದಲಿತರ ಭೂಮಿ ಕಬಳಿಕೆ, ಮಹಿಳೆಯರ ಮೇಲೆ ದೌರ್ಜನ್ಯ, ಆರ್ಥಿಕ ದುರ್ನೀತಿ ? ಇವೆಲ್ಲವು ಒಂದು ವಿಶಾಲ ವ್ಯವಸ್ಥೆಯ ಅನ್ಯಾಯದ ಪ್ರತಿಬಿಂಬ. ಈ ಪ್ರಕರಣಗಳಲ್ಲಿ ನ್ಯಾಯ ದೊರೆಯದಿದ್ದರೆ, ದೌರ್ಜನ್ಯಕ್ಕೆ ಒಳಗಾದ ಸಾಮಾನ್ಯ ಜನರ ಧ್ವನಿಯೇ ಮಣಿಯುತ್ತದೆ. ಜನರಿಗೆ ನ್ಯಾಯ ಸಿಗದ ಪ್ರಜಾಪ್ರಭುತ್ವವು ಕೇವಲ ಕಾಗದ ಮೌಲ್ಯಗಳಾಗಿಯೇ ಉಳಿಯುತ್ತದೆ.

ಧರ್ಮಸ್ಥಳದ ಪ್ರಕರಣಗಳು ನಮಗೆ ಒಂದು ಕಠಿಣ ಪ್ರಶ್ನೆಯನ್ನು ಎತ್ತುತ್ತವೆ. ನ್ಯಾಯವು ಎಲ್ಲರಿಗೂ ಸಮಾನವಾಗಿದೆಯೇ? ಪ್ರಭಾವಿಗಳ ಅಪರಾಧ ಮುಚ್ಚಿಹಾಕಲ್ಪಡುವ ಸಮಾಜದಲ್ಲಿ ಸಾಮಾನ್ಯ ಜನರ ಹಕ್ಕುಗಳು ಹೇಗೆ ಉಳಿಯಬಹುದು? ಈ ಪ್ರಶ್ನೆಗೆ ಸರ್ಕಾರ ಮತ್ತು ನ್ಯಾಯಾಂಗವು ನಿಷ್ಠೆಯಿಂದ ಉತ್ತರಿಸಬೇಕಾಗಿದೆ. ಧರ್ಮಸ್ಥಳದ ಪ್ರಕರಣಗಳು ಕೇವಲ ಕೆಲವು ಹೋರಾಟಗಾರರ ಚಿಂತೆಯಲ್ಲ, ಇದು ಸಮಾಜದ ಆತ್ಮದ ಪ್ರಶ್ನೆ. ಆದ್ದರಿಂದ, ಸರ್ಕಾರವು ತಡಮಾಡದೆ ಸಂಪೂರ್ಣ ತನಿಖೆ ನಡೆಸಿ ಸತ್ಯವನ್ನು ಹೊರತೆರೆಯಬೇಕು. ನ್ಯಾಯ ದೊರಕದ ಸಮಾಜದಲ್ಲಿ ಧರ್ಮವೂ, ಪ್ರಜಾಸತ್ತ್ವವೂ ಅರ್ಥಹೀನವಾಗುತ್ತವೆ.

**–ಮಲ್ಲಿಕಾರ್ಜುನ್ ಕಬ್ಬೂರು**
ಸಂಪಾದಕರು

## ನಾಳೆ ಉಚಿತ ಆರೋಗ್ಯ ತಪಾಸಣಾ ಶಿಬಿರ

**ದಾವಣಗೆರೆ:** ನಗರದ ಡಿಸಿಎಂ ಸೌನ್‌ಶಿಪ್‌ನ ಶಕ್ತಿನಗರ ಮುಖ್ಯರಸ್ತೆಯಲ್ಲಿರುವ ವಿಜಯ ಹೆಲ್ತ್ ಸೆಂಟರ್‌ನಲ್ಲಿ ಸೆ.28ರಂದು ಬೆಳಿಗ್ಗೆ 10ರಿಂದ ಬಿಪಿ, ಸಕ್ಕರೆ ಖಾಯಿಲೆ ಮತ್ತು ಮಕ್ಕಳ ಆರೋಗ್ಯ ಉಚಿತ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಶಿಬಿರದಲ್ಲಿ ಬಿ.ಪಿ. ಮತ್ತು ಶುಗರ್ ಪರೀಕ್ಷೆ, ವೈದ್ಯರೊಂದಿಗ ಸಮಾಲೋಚನೆ, ಮಕ್ಕಳ ಆರೋಗ್ಯ ಮತ್ತು ಜ್ವರ, ಶೀತ, ಕೆಮ್ಮಿನಿಂದ ಬಳಲುತ್ತಿರುವವರಿಗೆ ತಜ್ಞವೈದ್ಯರು ತಪಾಸಣೆ ನಡೆಸಲಿದ್ದಾರೆ. ಮಕ್ಕಳ ತಜ್ಞ ಡಾ. ಹೆಚ್.ಸಿ. ಸುದೀಪ್ ಕುಮಾರ್, ಡಾ. ಚಿರಾಗ್ ಭಾಗವಹಿಸಲಿದ್ದಾರೆ.

### ಶಾಲಾ, ಕಾಲೇಜು, ಆಸ್ಪತ್ರೆ ಮತ್ತು ಪಂಚಾಯಿತಿಗಳಲ್ಲಿ ಕಾನೂನು ಸಲಹಾ ಕೇಂದ್ರಗಳ ಉದ್ಘಾಟನೆ

# ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸಮಾನ ನ್ಯಾಯ

### ಕಾನೂನು ಸಲಹಾ ಕೇಂದ್ರಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ ನ್ಯಾಯಮೂರ್ತಿ ರವಿ ವಿ.ಹೊಸಮನಿ

**ದಾವಣಗೆರೆ:** ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸಮಾನ ನ್ಯಾಯ ಒದಗಿಸುವ ದೃಷ್ಟಿಯಿಂದ ಜಿಲ್ಲೆಯಲ್ಲಿ 900 ಕ್ಕೂ ಹೆಚ್ಚು ಕಾನೂನು ಸಲಹಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಹೈಕೋರ್ಟ್ ನ್ಯಾಯಾಧೀಶರು ಹಾಗೂ ದಾವಣಗೆರೆ ಜಿಲ್ಲಾ ಆಡಳಿತಾತ್ಮಕ ನ್ಯಾಯಮೂರ್ತಿಗಳಾದ ರವಿ ವಿ.ಹೊಸಮನಿ ತಿಳಿಸಿದರು.



ನಗರದ ಜಿಲ್ಲಾ ಪಂಚಾಯತ್‌ನ ಎಸ್.ಎಸ್.ಮಲ್ಲಿಕಾರ್ಜುನ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಕಾನೂನು ಸಲಹಾ ಕೇಂದ್ರಗಳ ಉದ್ಘಾಟನಾ ಕಾರ್ಯಕ್ರಮ ನೆರವೇರಿಸಿ ಅವರು ಮಾತನಾಡಿದರು.

ಜನಸಾಮಾನ್ಯರಿಗೆ ಕಾನೂನು ಅರಿವು ಮೂಡಿಸಿ ನ್ಯಾಯ, ಹಕ್ಕುಗಳು ಮತ್ತು ಸರ್ಕಾರದ ಜನ ಕಲ್ಯಾಣ ಯೋಜನೆಗಳ ಕುರಿತು ಜಾಗೃತಿ ಮೂಡಿಸಿ ಅರ್ಹರಿಗೆ ತಲುಪುವಂತೆ ಮಾಡಲು ಗ್ರಾಮ ಮಟ್ಟದಿಂದ ಮತ್ತು ಪ್ರೌಢಶಾಲೆ, ಪದವಿ ಪೂರ್ವ ಕಾಲೇಜು ಸೇರಿದಂತೆ ಸರ್ಕಾರಿ ಆಸ್ಪತ್ರೆಗಳಲ್ಲಿ ಕಾನೂನು ಜಾಗೃತಿಗಾಗಿ ಜಿಲ್ಲೆಯಲ್ಲಿ ಕಾನೂನು ಸಲಹಾ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ ಎಂದು ತಿಳಿಸಿದರು.

ಸಮಾಜದಲ್ಲಿ ಎಲ್ಲರೂ ಒಂದೇ ಸಮನಾಗಿಲ್ಲವಾದ್ದರಿಂದ ಸಂವಿಧಾನ ಪೀಠಿಕೆಯನ್ವಯ ವಿದ್ಯಾರ್ಥಿಗಳು, ಹಿರಿಯ ನಾಗರೀಕರು, ಅಂಗವಿಕಲರು, ಮಹಿಳೆಯರು, ತೃತೀಯ ಲಿಂಗಿಗಳಿಗೂ ಸಮಾನ ನ್ಯಾಯ, ಸರ್ಕಾರದ ಯೋಜನೆಗಳನ್ನು ಒದಗಿಸುವ ನಿಟ್ಟಿನಲ್ಲಿ ಸಲಹಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಆದರೆ ಇಂದಿಗೂ ಕೆಲವರಿಗೆ ಸಮರ್ಪಕವಾಗಿ ಕಾನೂನಾತ್ಮಕ ನ್ಯಾಯ ಲಭಿಸುತ್ತಿಲ್ಲ, ಇಂತಹವರಿಗೆ ಪಾರದರ್ಶಕವಾಗಿ ಸ್ಥಳೀಯ ಮಟ್ಟದಲ್ಲಿ ನ್ಯಾಯ ದೊರಕಿಸಿಕೊಡುವ ಹಿತದೃಷ್ಟಿಯಿಂದ ಸಲಹಾ ಕೇಂದ್ರಗಳನ್ನು ಸ್ಥಾಪಿಸಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡಿಸಕೊಳ್ಳುವಂತೆ ತಿಳಿಸಿದರು. ಸಂವಿಧಾನದ ಉದ್ದೇಶ, ಮೂಲಭೂತ ಹಕ್ಕುಗಳು ಎಲ್ಲರಿಗೂ ಸಲ್ಲಬೇಕು, ತನ್ನ ಹಕ್ಕುಗಳನ್ನು ಪ್ರತಿಪಾದನೆ ಮಾಡಿ ಪಡೆದುಕೊಳ್ಳಲು ಪ್ರತಿಯೊಬ್ಬ ನಾಗರಿಕನು ಕಾನೂನನ್ನು ಅರಿತವನಾಗಿರಬೇಕು. ಆಗ ಮಾತ್ರ ತನ್ನ ಹಕ್ಕುಗಳ ಪ್ರಯೋಜನ ಪಡೆಯಲು ಸಾಧ್ಯವಾಗಲಿದೆ. ಸರ್ಕಾರ ಕಾನೂನುಗಳನ್ನು ರಚನೆ ಮಾಡಿದೆ, ಆ ಕಾನೂನುಗಳು ಎಲ್ಲಾ ಜನರಿಗೂ ತಲುಪುತ್ತಿಲ್ಲವೆಂಬುದನ್ನು ಮನಗಂಡು ಏನು ಅರಿಯದ ಜನರಿಗೆ ಕಾನೂನಿನ ಅರಿವು ಮೂಡಿಸಲು ಈ ಕೇಂದ್ರಗಳಿಂದ ಸಹಕಾರಿ ಯಾಗಲಿದೆ ಎಂದರು. ಭಾರತ ಸಂವಿಧಾನದ ಪೀಠಿಕೆ ಅದ್ಭುತವಾಗಿದೆ, ಯಾಕೆಂದರೆ ಅದರಲ್ಲಿ ಅಡಗಿರುವ ಉದ್ದೇಶ ಕಾರಣವಾಗಿದೆ. ಯಾವುದೇ ಒಂದು ಯೋಜನೆಯನ್ನು ಜಾರಿಗೊಳಿಸುವ ಮೊದಲು ಎಲ್ಲರನ್ನು ಒಟ್ಟುಗೂಡಿಸಿಕೊಂಡು ಆ ಯೋಜನೆಯನ್ನು ಜಾರಿಗೊಳಿಸಬೇಕು. ಆದರೆ ಒಬ್ಬ ವ್ಯಕ್ತಿಗೆ ಎರಡು ಬಾರಿ ಆ ಯೋಜನೆ ತಲುಪಬಾರದು, ತಲುಪಿದರೆ ಆ ಯೋಜನೆ ವಿಫಲವಾದಂತೆ ಎಂದರು. ಜನರಿಗೆ ಇರುವ ಸಮಸ್ಯೆಗಳ ಬಗ್ಗೆ ಅಥವಾ ಯಾವ ವಿಷಯದ ಬಗ್ಗೆ ಕಾನೂನು ಸಲಹೆ ಅಗತ್ಯವಿರುತ್ತದೆ ಅಂತಹವರು ಉಚಿತ ಸಹಾಯವಾಣಿ ಸಂಖ್ಯೆಗೆ 15100 ಗೆ ಕರೆಮಾಡಿ ಮಾಹಿತಿ ಮತ್ತು ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದು ಎಂದರು.

ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಮಾತನಾಡಿ, ಜಿಲ್ಲೆಯಾದ್ಯಂತ ಈವರೆಗೂ ಪೋಕ್ಸೋ, ಬಾಲ್ಯವಿವಾಹ, ಬಾಲಕಾರ್ಮಿಕ ಪದ್ಧತಿ, ಮಹಿಳಾ ರಕ್ಷಣೆ, ಶಾಲಾ ಮಕ್ಕಳಿಗೆ ಪೌಷ್ಠಿಕ ಆಹಾರ ನೀಡುವುದು, ರಸ್ತೆ ಸುರಕ್ಷತೆ ಸೇರಿದಂತೆ ಹಲವಾರು ಜಾಗೃತಿ ಕಾರ್ಯಗಾರ ಆಯೋಜಿಸಿ ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಲ್ಲಿ ಸಾಕಷ್ಟು ಅರಿವು ಮೂಡಿಸಲಾಗಿದೆ. ರಸ್ತೆ ಸುರಕ್ಷತೆ ಕಾರ್ಯಗಾರದಿಂದ ಜಿಲ್ಲೆಯಲ್ಲಿ ಕಳೆದ ವರ್ಷಕ್ಕೆ ಹೋಲಿಸಿದರೆ ಶೇ.30ರಷ್ಟು ಅಪಘಾತ ಪ್ರಕರಣ ಇಳಿಕೆಯಾಗಿದೆ. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಿಂದ ಪ್ರಾರಂಭಿಸಿರುವ ಕಾನೂನು ಸಲಹಾ ಕೇಂದ್ರಗಳಿಂದ ಅತ್ಯುತ್ತಮ ಕಾರ್ಯವಾಗಲಿದೆ. ಇದರಿಂದ ಜಿಲ್ಲೆಯಲ್ಲಿನ ಕಟ್ಟಕಡೆಯ ವ್ಯಕ್ತಿಗೂ ಸ್ಥಳೀಯ ಮಟ್ಟದಲ್ಲಿಯೇ ತನ್ನ ಹಕ್ಕು ಮತ್ತು ನ್ಯಾಯ ಪಡೆಯಲು ಸಹಕಾರಿಯಾಗಿದೆ. ಅದರಂತೆ ಜಿಲ್ಲೆಯ ಎಲ್ಲಾ ಅಧಿಕಾರಿಗಳು ತಂಡೋಪ ತಂಡವಾಗಿ ಕಾರ್ಯನಿರ್ವಹಿಸಿ ಪ್ರತಿಯೊಬ್ಬರಿಗೂ ನ್ಯಾಯ ಒದಗಿಸುವಲ್ಲಿ ಪ್ರಾಮಾಣಿಕವಾಗಿ ಶ್ರಮಿಸುತೇವೆ ಎಂದರು.

### ಜಾತಿ ಗಣತಿ: ಇಲ್ಲಿಯವರೆಗೆ ಕೇವಲ ಶೇ. 2 ರಷ್ಟು ಪ್ರಗತಿ

## ಪ್ರತಿದಿನ ಶೇ. 10 ರಷ್ಟು ಸಮೀಕ್ಷೆಗೆ ಸಿಎಂ ಸೂಚನೆ, ಗಡುವಿನೊಳಗೆ ಪೂರ್ಣ

**ಬೆಂಗಳೂರು:** "ಜಾತಿ ಗಣತಿ" ಎಂದೇ ಜನಪ್ರಿಯವಾಗಿ ಕರೆಯಲ್ಪಡುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಮೇಲೆ ಪರಿಣಾಮ ಬೀರುವ ತಾಂತ್ರಿಕ ಸಮಸ್ಯೆಗಳನ್ನು "ಬಹುತೇಕ ಬಗೆಹರಿಸಲಾಗಿದೆ" ಮತ್ತು ಸಮೀಕ್ಷೆಯು ಈಗ ಪೂರ್ಣ ಪ್ರಮಾಣದಲ್ಲಿ ಮುಂದುವರಿ ಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ಹೇಳಿದ್ದಾರೆ.

ನಿಗದಿತ ಅವಧಿಯೊಳಗೆ ಸಮೀಕ್ಷೆ ಪೂರ್ಣಗೊಳ್ಳಲಿದೆ ಎಂದು ಪ್ರತಿಪಾದಿಸಿದ ಸಿಎಂ ಸಿದ್ದರಾಮಯ್ಯ ಅವರು ಯಾವುದೇ ಕಾರಣಕ್ಕೂ ಜಾತಿ ಗಣತಿ ವಿಸ್ತರಿಸುವುದಿಲ್ಲ ಎಂದು ಒತ್ತಿ ಹೇಳಿದರು.



ಜಾತಿ ಗಣತಿಗೆ ಸಂಬಂಧಿಸಿದಂತೆ ಇಂದು ಗೃಹ ಕಚೇರಿ ಕೃಷ್ಣಾದಲ್ಲಿ ಜಿಲ್ಲಾಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿದ ಸಿಎಂ, "ಸಮೀಕ್ಷೆಯ ನಿಧಾನಗತಿ", ತಾಂತ್ರಿಕ ದೋಷಗಳು ಮತ್ತು ಸರ್ವರ್ ಸಮಸ್ಯೆಗಳು ದತ್ತಾಂಶ ಸಂಗ್ರಹಣೆಯ ಮೇಲೆ ಪರಿಣಾಮ ಬೀರುತ್ತಿರುವ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿದರು.

ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಈ ಸಭೆಯಲ್ಲಿ ಸಚಿವರು, ಹಿರಿಯ ಅಧಿಕಾರಿಗಳು, ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂದನ್ ಆರ್ ನಾಯಕ್, ಡಿಸಿಗಳು ಮತ್ತು ಜಿಲ್ಲಾ ಪಂಚಾಯತ್ ಸಿಇಒಗಳು ಭಾಗವಹಿಸಿದ್ದರು.

"ಸಮೀಕ್ಷಾ ಕಾರ್ಯವು ಸೆಪ್ಟೆಂಬರ್ 22 ರಂದು ಪ್ರಾರಂಭವಾಗಿದ್ದು, ನಿಗದಿಯಂತೆ ಅಕ್ಟೋಬರ್ 7 ರೊಳಗೆ ಪೂರ್ಣಗೊಳ್ಳಲಿದೆ. ಕೆಲವು ತಾಂತ್ರಿಕ ಸಮಸ್ಯೆಗಳಿವೆ, ಅವೆಲ್ಲವನ್ನೂ ಬಹುತೇಕ ಪರಿಹರಿಸಲಾಗಿದೆ. ಆದ್ದರಿಂದ, ಇಂದಿನಿಂದ ಸಮೀಕ್ಷೆಯ ಪೂರ್ಣ ಪ್ರಮಾಣದಲ್ಲಿ ನಡೆಯಲಿದೆ" ಎಂದು ಸಿದ್ದರಾಮಯ್ಯ ಹೇಳಿದರು.

ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ, ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಸಿಇಒಗಳು ಸಮೀಕ್ಷೆಯನ್ನು "ಬಹಳ ಗಂಭೀರವಾಗಿ" ಪರಿಗಣಿಸುವಂತೆ ಮತ್ತು ಗಡುವಿನೊಳಗೆ ಪೂರ್ಣಗೊಳ್ಳುವಂತೆ ನೋಡಿಕೊಳ್ಳಲು ಸೂಚಿಸಲಾಗಿದೆ ಎಂದು ಹೇಳಿದರು.

## ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿನ ವಿಳಂಬ ಖಂಡಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ತಿನಿಂದ ಪ್ರತಿಭಟನೆ

**ದಾವಣಗೆರೆ.ಸೆ.26:** ಸರ್ಕಾರಿ ಪದವಿ ಕಾಲೇಜುಗಳಿಗೆ ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿನ ವಿಳಂಬ ಖಂಡಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ತಿನಿಂದ ನಗರದಲ್ಲಿ ಶುಕ್ರವಾರ ಪ್ರತಿಭಟನೆ ನಡೆಸಲಾಯಿತು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಿಂದ ಪ್ರತಿಭಟನಾ ಮೆರವಣಿಗೆ ಹೊರಟ ಎಬಿವಿಪಿ ಮುಖಂಡರು, ವಿದ್ಯಾರ್ಥಿಗಳು ಉಪವಿಭಾಗಾಧಿಕಾರಿ ಕಚೇರಿಗೆ ತೆರಳಿ ರಸ್ತೆಯಲ್ಲೇ ಧರಣಿ ಸತ್ಯಾಗ್ರಹ ನಡೆಸಿದರು.

2025–26ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ನೇಮಕಾತಿಗೆ ಸಂಬಂಧಿಸಿದಂತೆ ಹೈಕೋರ್ಟ್ ಮಧ್ಯಂತರ ಆದೇಶದನ್ವಯ ಕ್ರಮ ಕೈಗೊಳ್ಳದೇ ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿದೆ. ಇದರಿಂದ ಲಕ್ಷಾಂತರ ವಿದ್ಯಾರ್ಥಿಗಳಿಗೆ ತೀವ್ರ ತೊಂದ–ರೆಯಾಗಿದೆ. ರಾಜ್ಯ ಕಾಲೇಜು ಶಿಕ್ಷಣ ಇಲಾಖೆಯ 432 ಪದವಿ ಕಾಲೇಜುಗಳಲ್ಲಿ 6 ಸಾವಿರ ಖಾಯಂ ಉಪನ್ಯಾಸಕರಲ್ಲಿ 3 ಸಾವಿರಕ್ಕಿಂತ ಹೆಚ್ಚು ಉಪನ್ಯಾಸಕರು ನಿವೃತ್ತಿ ಹೊಂದಿದ್ದು, ಉಳಿದ 3 ಸಾವಿರ ಖಾಯಂ ಉಪನ್ಯಾಸಕರೊಂದಿಗೆ 12 ಸಾವಿರ ಅತಿಥಿ ಉಪನ್ಯಾಸಕರ ನೆರವಿನಿಂದ ಪದವಿ ತರಗತಿಗಳು ನಡೆಯುತ್ತಿದ್ದವು.

ಆದರೆ 2025–26 ನೇ ಸಾಲಿನಲ್ಲಿ ಖಾಲಿ ಇರುವ 12 ಸಾವಿರ ಅತಿಥಿ ಉಪನ್ಯಾಸಕರ ನೇಮಕಾತಿಗೆ ಅರ್ಜಿ ಆಹ್ವಾನಿಸಿದ್ದು, 55 ಸಾವಿರ ಅರ್ಜಿ ಸಲ್ಲಿಕೆಯಾಗಿವೆ. ಈಗಾಗಲೇ ನಮ್ಮ ಎಲ್ಲಾ ವಿಶ್ವವಿದ್ಯಾಲಯಗಳ ತರಗತಿ ಪ್ರಾರಂಭವಾಗಿ 2 ತಿಂಗಳಾದರೂ ದಾವಣಗೆರೆ ವಿಶ್ವವಿದ್ಯಾಲಯ ವ್ಯಾಪ್ತಿಯಲ್ಲಿ ಈವರೆಗೆ ಅತಿಥಿ ಉಪನ್ಯಾಸಕರ ನೇಮಕಾತಿಯಾಗದ ಕಾರಣ ವಿದ್ಯಾರ್ಥಿಗಳಿಗೆ ಸರಿಯಾಗಿ ತರಗತಿ ನಡೆಯುತ್ತಿಲ್ಲ ಎಂದು ಪ್ರತಿಭಟನಾನಿರತರು ದೂರಿದರು.

ಸರ್ಕಾರಗಳು ತಮ್ಮ ಕರ್ತವ್ಯ ಪ್ರಜ್ಞೆ ಮರೆತಂತಿದ್ದು, ಪದವಿ ಹಂತದಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಖಾಯಂ ಉಪನ್ಯಾಸಕರ, ಅರ್ಹ ಉಪನ್ಯಾಸಕರ ನೇಮಕಾತಿಯಲ್ಲಿ ದೃಢವಾದ ನಿಲುವು ತೆಗೆದುಕೊಳ್ಳದಿರುವುದು ಕಳವಳಕಾರಿ ವಿಚಾರ. ಪದವಿ ಕಾಲೇಜುಗಳಿಗೆ ಖಾಯಂ ಉಪನ್ಯಾಸಕರ ನೇಮಕಾತಿ ಮಾಡಿಕೊಳ್ಳುವಷ್ಟು ಯೋಗ್ಯತೆ ರಾಜ್ಯ ಸರ್ಕಾರಕ್ಕೆ ಇಲ್ಲದಿದ್ದರೂ ಕನಿಷ್ಟ ಪಕ್ಷ ಹೈಕೋರ್ಟ್‌ನ ಮಧ್ಯಂತರ ಆದೇಶದಂತೆ ಅರ್ಹ ಅತಿಥಿ ಉಪನ್ಯಾಸಕರ ನೇಮಕಾತಿಗೆ ತಕ್ಷಣ ಕ್ರಮ ವಹಿಸಬೇಕು ಎಂದು ಅವರು ಆಗ್ರಹಿಸಿದರು.

## ಜಿಲ್ಲಾ ಪೊಲೀಸ್ ಅಧೀಕ್ಷಕಿ ಕೆಲಸಕ್ಕೆ ರಾಜೀನಾಮೆ ನೀಡಿ, ಕಾಂಗ್ರೆಸ್ ಸೇರ್ಪಡೆಗೊಳ್ಳಲಿ: ಎಂ.ಪಿ.ರೇಣುಕಾಚಾರ್ಯ

**ದಾವಣಗೆರೆ.ಸೆ.26:** ಕಾಂಗ್ರೆಸ್ ಏಜೆಂಟ್‌ನಂತೆ ವರ್ತಿಸುತ್ತಿರುವ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಂಡು ಜಿಲ್ಲೆಯಲ್ಲಿ ಶಾಂತಿ ಕಾಪಾಡಲು ಆಗದಿದ್ದರೆ ತಮ್ಮ ಕೆಲಸಕ್ಕೆ ರಾಜೀನಾಮೆ ನೀಡಿ ಕಾಂಗ್ರೆಸ್ ಪಕ್ಷ ಸೇರಿಕೊಳ್ಳಲಿ ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಎಸ್ಪಿ ವಿರುದ್ಧ ತೀಕ್ಷ್ಣವಾಗಿ ಹೇಳಿದರು.




ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬುಧವಾರ ದಾವಣಗೆರೆ ಹಳೆ ಭಾಗದ ಕಾರ್ಲ್‌ಮಾರ್ಕ್ಸ್ ನಗರದಲ್ಲಿ ಐ ಲವ್ ಮಹಮದ್ ಫ್ಲೆಕ್ಸ್ ವಿಚಾರಕ್ಕೆ ನಡೆದ ಕಲ್ಲು ತೂರಾಟದ ಘಟನೆಗೆ ಎಸ್ಪಿ ಉಮಾಪ್ರಶಾಂತ್ ಪ್ರತಿಕ್ರಿಯಿಸಿ ಹಿಂದುಗಳ ಮನೆ ಮೇಲೆ ಕಲ್ಲು ತೂರಿಲ್ಲ. ಅಲ್ಲಿ ಯಾವುದೇ ಘಟನೆ ಸಂಭವಿಸಿಲ್ಲ ಎಂದು ಹೇಳಿದ್ದಾರೆ. ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಬೇಕಾದ ಜಿಲ್ಲಾ ಪೊಲೀಸರೇ ಈ ರೀತಿ ಮಾತನಾಡಿ ಹಿಂದೂಗಳ ಧೈರ್ಯ ಕುಗ್ಗಿಸಿ ಪರೋಕ್ಷವಾಗಿ ಮುಸ್ಲಿಂ ಗೂಂಡಗಳಿಗೆ ಬೆಂಬಲ ನೀಡುತ್ತಿದ್ದಾರೆ ಎಂದು ಎಸ್ಪಿ ವಿರುದ್ಧ ಹರಿಹಾಯ್ದರು.

ಹಿಂದೆ ಮಟ್ಟಿಕಲ್ ಫ್ಲೆಕ್ಸ್ ವಿಚಾರಕ್ಕೂ ಹಿಂದೂಗಳ ಮೇಲೆ ಎಫ್‌ಐಆರ್ ದಾಖಲಿಸಿದ್ದರು. ಈಗಲೂ ಗಲಾಟೆ ನಡೆಸಿದ ಮುಸ್ಲಿಂ ಗೂಂಡಾಗಳನ್ನು ಬಿಟ್ಟು, ಹಲ್ಲೆಗೊಳಗಾದ ದೂರುದಾರ ಯುವಕ ರಂಗನಾಥ್‌ನನ್ನು ಗುರುವಾರ ರಾತ್ರಿ ಬಂಧಿಸಿದ್ದಾರೆ. ಜಿಲ್ಲಾ ಪೊಲೀಸ್ ಇಲಾಖೆ ಮತ್ತು ಜಿಲ್ಲಾಡಳಿತ ಕಾಂಗ್ರೆಸ್‌ನ ಕಾಣದ ಕೈಗಳ ಹಿಡಿತಕ್ಕೆ ಸಿಲುಕಿ. ಕಾಂಗ್ರೆಸ್ ಏಜೆಂಟ್‌ರಂತೆ ವರ್ತಿಸುತ್ತಿದ್ದಾರೆ ಆದ್ದರಿಂದ ನೀವುಗಳು ತಮ್ಮ ಕೆಲಸಕ್ಕೆ ರಾಜೀನಾಮೆ ನೀಡಿ ಕಾಂಗ್ರೆಸ್ ಪಕ್ಷಕ್ಕೆ ಸೇರಿಕೊಳ್ಳಿ ಎಂದು ಕಿಡಿಕಾರಿದರು.

ನಮ್ಮ ಮನೆ ಬಾಗಿಲ ಬಳಿ 'ಐ ಲವ್ ಮೊಹಮದ್' ಫ್ಲೆಕ್ಸ್‌ನ್ನು ಹಾಕಬೇಡಿ ಎಂದಿದ್ದಕ್ಕೆ ಸುಮಾರು 400ಕ್ಕೂ ಹೆಚ್ಚು ಮುಸ್ಲಿಂ ಗೂಂಡಾಗಳು ನುಗ್ಗಿ ದಾಂಧಲೆ ನಡೆಸಿ, ಕಲ್ಲುತೂರಾಟ ನಡೆಸಿದ್ದಾರೆ. ನಮ್ಮ ಬಳಿಯೂ ಘಟನೆಯ ವೀಡಿಯೋಗಳಿವೆ. ಮುಸ್ಲಿಂ ಗೂಂಡಾಗಳು ಕೈಯಲ್ಲಿ ಮಾರಕಾಸ್ತ್ರ ಹಿಡಿದು ಓಡಾಡಿರುವ ವಿಡೀಯೋಗಳಿದ್ದರೂ ಅವರ ಮೇಲೆ ಯಾವುದೇ ಕೇಸು ದಾಖಲಿಸಿಲ್ಲ. ಈ ಎಲ್ಲಾ ಘಟನೆಗಳನ್ನು ಗಮನಿಸಿದರೆ ಪೊಲೀಸ್ ಅಧಿಕಾರಿಗಳು ಯಾರ ಪರವಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಮೇಲ್ನೋಟಕ್ಕೆ ತಿಳಿಯುತ್ತದೆ ಎಂದು ಹೇಳಿದರು.

ಜಿಲ್ಲಾ ಮಂತ್ರಿಗಳು ಮುಸ್ಲಿಂ ಮತ ಮಾತ್ರವಲ್ಲ ಹಿಂದೂಗಳು ಮತ ನೀಡಿದ್ದಾರೆ ಎನ್ನುವುದನ್ನು ನೆನಪಿನಲ್ಲಿಡಬೇಕು. ಮಟ್ಟಿಕಲ್ ಗಣೇಶ್ ಮೂರ್ತಿ ವಿಸರ್ಜನೆ ಸಂದರ್ಭದಲ್ಲಿ ನೀಡಿದಂತೆ ಈ ಘಟನೆ ಬಗ್ಗೆಯೂ ಪ್ರತಿಕ್ರಿಯೆ ನೀಡಬೇಕು ಎಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಹಾಲೇಶ್ ನಾಯ್ಕ್, ಬಿ.ಎಂ.ಸತೀಶ್, ಚಂದ್ರಶೇಖರ್ ಪೂಜಾರ್, ಪಂಜು ಪೈಲ್ವಾನ್, ಪ್ರವೀಣ್ ಜಾಧವ್, ರವಿಗೌಡ್ರು, ಚೇತನ್, ಅಜಯ್, ರಾಜು ವೀರಣ್ಣ ಇದ್ದರು.

## ಪತ್ನಿ ಶೀಲ ಶಂಕಿಸಿ ಇಬ್ಬರು ಮಕ್ಕಳನ್ನು ಕೊಂದ ಪಾಪಿ ತಂದೆ

**ಯಾದಗಿರಿ:** ಪಾಪಿ ತಂದೆಯೊಬ್ಬ ತನ್ನ ಪತ್ನಿಯ ಶೀಲ ಶಂಕಿಸಿ ಇಬ್ಬರು ಮಕ್ಕಳನ್ನು ಕುಡುಗೋಲಿನಿಂದ ಕೊಚ್ಚಿ ಬರ್ಬರ ವಾಗಿ ಕೊಲೆ ಮಾಡಿರುವ ಅಮಾ ನವೀಯ ಘಟನೆ ಯಾದಗಿರಿ ತಾಲೂಕಿನ ದುಗನೂರು ಕ್ಯಾಂಪ್ ನಲ್ಲಿ ನಡೆದಿದೆ.



ಆರೋಪಿ ಶರಣಪ್ಪ, ತನ್ನ ಪತ್ನಿ ಹಾಗೂ ತಾಯಿ ಬಹಿರ್ದೆಸೆಗೆ ಹೋದ ವೇಳೆ ಮನೆಯಲ್ಲಿದ್ದ ಮೂರು ವರ್ಷ ಮಗ ಭಾರ್ಗವ್ ಮತ್ತು ಐದು ವರ್ಷದ ಸಾನ್ವಿಯನ್ನು ಕುಡುಗೋಲುನಿಂದ ಕೊಚ್ಚಿ ಕೊಲೆ ಮಾಡಿದ್ದಾನೆ. ಮತ್ತೋರ್ವ ಮಗ ಹೇಮಂತ್(8) ಮೇಲೂ ದಾಳಿ ಮಾಡಿದ್ದು, ಆತನ ಸ್ಥಿತಿ ಚಿಂತಾಜನಕವಾಗಿದೆ. ಘಟನೆ ಬಳಿಕ ಶರಣಪ್ಪ ಪರಾರಿಯಾಗಿದ್ದು, ಕುಟುಂಬಸ್ಥರ ರೋದನೆ ಮುಗಿಲು ಮುಟ್ಟಿದೆ.

ಗಾಯಗೊಂಡ ಹೇಮಂತನಿಗೆ ಯಾದಗಿರಿ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗ್ತಿದೆ.

## ರಸ್ತೆ–ಗುಂಡಿ ಸಮಸ್ಯೆಗಳಿಗೆ ರಾಜ್ಯ ಸರ್ಕಾರವೇ ಕಾರಣ: ಆರೋಪ




**ಹೊನ್ನಾಳಿ:** ಹೊನ್ನಾಳಿ ಮತ್ತು ನ್ಯಾಮತಿ ತಾಲ್ಲೂಕಿನ ರಸ್ತೆಗಳಲ್ಲಿ ಬಿದ್ದಿರುವ ಗುಂಡಿಗಳನ್ನು ಮುಚ್ಚಲು, ಅಥವಾ ರಸ್ತೆಗಳನ್ನು ದುರಸ್ತಿಪಡಿಸಲು ನಮ್ಮ ಶಾಸಕರು ಎಷ್ಟು ಅನುದಾನ ಬಿಡುಗ–ಡೆ ಮಾಡಿದ್ದಾರೆ. ಎಷ್ಟು ಕೆಲಸ ಆಗಿದೆ ಎಂಬುದರ ಬಗ್ಗೆ ಉತ್ತರ ನೀಡಬೇಕು ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಆಗ್ರಹಿಸಿದರು.

ಪಟ್ಟಣದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ರಾಜ್ಯ ಬಿಜೆಪಿ ಅಧ್ಯಕ್ಷರ ಕರೆಯ ಮೇರೆಗೆ ರಾಜ್ಯದ ರಸ್ತೆಗಳ ದುರಸ್ತಿಗೆ ಆಗ್ರಹಿಸಿ ಹಮ್ಮಿಕೊಂಡಿದ್ದ ಸಾಂಕೇತಿಕ ಪ್ರತಿಭಟನೆಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಗುಂಡಿ ಮುಚ್ಚುವ ಸಂಬಂಧ ಕರೆ ನೀಡಿದ ಪ್ರತಿಭಟನೆ ಇಂದು ಸಾಂಕೇತಿಕವಾಗಿದೆ. ಇನ್ನಮುಂದೆ ರಸ್ತೆ ದುರಸ್ತಿಯಾಗುವವರೆಗೆ ನಿರಂತರ ಪ್ರತಿಭನೆಯನ್ನು ಹಮ್ಮಿಕೊಳ್ಳಲಾಗುವುದು ಎಂದ ಅವರು ಕಳೆದ ಎರಡೂವರೆ ವರ್ಷಗಳಲ್ಲಿ ನಮ್ಮ ಭಾಗದ ರಾಜ್ಯ ಹೆದ್ದಾರಿಗೆ ಜಿಲ್ಲಾ ಹೆದ್ದಾರಿಗೆ ಹಾಗೂ ತಾಲ್ಲೂಕಿನ ಹೆದ್ದಾರಿ ಮತ್ತು ಒಳರಸ್ತೆಗಳ ಅಭಿವೃದ್ಧಿಗೆ ಎಷ್ಟು ಅನುದಾನ ತಂದಿದ್ದಾರೆ ಎಂದು ಪ್ರಶ್ನಿಸಿದ ರೇಣುಕಾಚಾರ್ಯ ಕೂಡಲೇ ತಾಲೂಕಿನ ಜನತೆಗೆ ಸ್ಪಷ್ಟ ಅಂಕಿ ಅಂಶಗಳನ್ನು ತಿಳಿಸಬೇಕು ಎಂದರು.

ಗೃಹಲಕ್ಷ್ಮೀ ಯೋಜನೆಗೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಇದೂವರೆಗೂ ಹಣ ಬಿಡುಗಡೆ ಮಾಡಿಲ್ಲ ಶಕ್ತಿ ಯೋಜನೆಯಡಿ ಗ್ರಾಮೀಣ ಪ್ರದೇಶಗಳಿಗೆ ಬಸ್ಸುಗಳನ್ನು ಬಿಟ್ಟಿಲ್ಲ, ಈ ಸೌಭಾಗ್ಯಕ್ಕೆ ರಾಜ್ಯ ಸರಕಾರ ಏಕೆ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದರು ಎಂದು ಪ್ರಶ್ನಿಸಿದರು.

ಸುಳ್ಳು ಪ್ರಚಾರ ಮಾಡುವ ಮೂಲಕ ರಾಜ್ಯ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದಿದೆ ಈಗಾಗಲೇ ಗ್ಯಾರಂಟಿ ಯೋಜನೆಗಳ ಬಗ್ಗೆ ರಾಜ್ಯದ ಜನತೆ ಭ್ರಮನಿರಸನರಾಗಿದ್ದಾರೆ ಎಂದು ಹೇಳಿದರು.

## ಉಪಲೋಕಾಯುಕ್ತರಿಂದ ಕಚೇರಿಗಳಿಗೆ ದಿಢೀರ್ ಭೇಟಿ

**ಚಿಕ್ಕಮಗಳೂರು, ಸೆ.26:** ಗೌರವಾನ್ವಿತ ಉಪಲೋಕಾಯುಕ್ತ ನ್ಯಾಯಮೂರ್ತಿಗಳಾದ ಶ್ರೀ ಕೆ.ಎನ್.ಫಣೀಂದ್ರ ಅವರು ಇಂದು ನಗರಸಭೆ, ಮಲ್ಲೇಗೌಡ ಸಾರ್ವಜನಿಕ ಆಸ್ಪತ್ರೆಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು ಸಾರ್ವಜನಿಕ ದೂರು ಪೆಟ್ಟಿಗೆಯಲ್ಲಿ 2020ರ ದೂರು ಪತ್ರ ಪತ್ತೆಯಾದ ಬಗ್ಗೆ ಅಸಮಾಧಾನ ವ್ಯಕ್ತ ಪಡಿಸಿದ ಅವರು ಆಕ್ಷೇಪ ವ್ಯಕ್ತಪಡಿಸಿದರಲ್ಲದೇ ದೂರು ಪತ್ರಗಳಿಗೆ ಸಂಬಂಧಿಸಿದಂತೆ ಸ್ಪಂದಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.



ನಗರಸಭೆಗೆ ಭೇಟಿ ನೀಡಿದ ಅವರು ಈ ಸಂದರ್ಭದಲ್ಲಿ ದೂರು ಪೆಟ್ಟಿಗೆಯನ್ನು ಗಮನಿಸಿದ ಅವರು ಅದನ್ನು ತೆರೆಯುವಂತೆ ಸೂಚಿಸಿದಾಗ ನಗರಸಭೆಯ ಅಧಿಕಾರಿಗಳು ಪೆಟ್ಟಿಗೆಯ ಕೀ ಕಳೆದು ಹೋಗಿರುವುದಾಗಿ ವಿವರಣೆ ನೀಡಿದರು. ಉಪಲೋಕಾಯುಕ್ತರ ಸೂಚನೆ ಮೇರೆಗೆ ದೂರು ಪೆಟ್ಟಿಗೆಯ ಬೀಗ ಒಡೆದಾಗ 2020 ರಿಂದೀಚೆಗೆ ಸಾರ್ವಜನಿಕರು ಹಾಕಿದ್ದ ಹಲವು ಪತ್ರಗಳು ಪತ್ತೆಯಾದವು ಅವುಗಳನ್ನು ಕೂಡಲೇ ಪರಿಶೀಲಿಸಿ ಅವುಗಳಿಗೆ ಸ್ಪಂದಿಸುವಂತೆ ತಿಳಿಸಿದ ಅವರು ಹಳೆಯ ದೂರು ಪೆಟ್ಟಿಗೆಯನ್ನು ತೆಗೆದು ಹೊಸ ಪೆಟ್ಟಿಗೆಯನ್ನು ಅಳವಡಿಸುವಂತೆ ಹಾಗೂ ನಗರಸಭೆ ಕಚೇರಿಯ ಟೇಬಲ್‌ಗಳ ಮೇಲಿದ್ದ ಕಡತಗಳನ್ನು ಗಮನಿಸಿ ಅವ್ಯವಸ್ಥೆಯನ್ನು ಸರಿಪಡಿಸುವಂತೆ ಸೂಚಿಸಿದರು.

ಅವರು ನಗರದ ರಸ್ತೆಗಳು ಗುಂಡಿಗಳಿಂದ ತುಂಬಿರುವುದನ್ನು ಗಮನಿಸಿದ ಉಪಲೋಕಾಯುಕ್ತರು ಮಳೆ ಕಡಿಮೆಯಾದ ಕೂಡಲೇ ರಸ್ತೆಗಳನ್ನು ದುರಸ್ಥಿ ಪಡಿಸುವಂತೆ ನಿರ್ದೇಶನ ನೀಡಿ, ಸಾರ್ವಜನಿಕರಿಂದ ನಗರಸಭೆಯ ವಿರುದ್ಧವೇ ಹೆಚ್ಚಾಗಿ ದೂರುಗಳು ಕೇಳಿ ಬರುತ್ತಿರುವುದರಿಂದ ಸಾರ್ವಜನಿಕ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಿ ಅವರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವಂತೆ ತಿಳಿಸದರು ಇಲ್ಲದಿದ್ದಲ್ಲಿ ಕಠಿಣ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಅನಂತರ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿದ ಉಪಲೋಕಾಯುಕ್ತರು, ಮೂರು ದಿನಗಳಿಗೊಮ್ಮೆ ಆಸ್ಪತ್ರೆಯ ಬಯೋ ತ್ಯಾಜ್ಯವನ್ನು ಆಗಾಗ್ಗೆ ವಿಲೇವಾರಿ ಮಾಡುವಂತೆ ತಿಳಿಸಿದರಲ್ಲದೆ, ಈ ವಿಚಾರದಲ್ಲಿ ಯಾವುದೇ ಕಾರಣಕ್ಕೂ ವಿಳಂಬ ಧೋರಣೆ ಅನುಸರಿಸುವುದು ಸಲ್ಲದು ಎಂದರು. ಬಳಿಕ ಪ್ರತಿಯೊಂದು ವಾರ್ಡ್‌ಗಳಿಗೆ ತೆರಳಿ ರೋಗಿಗಳ ಯೋಗಕ್ಷೇಮ ವಿಚಾರಿಸಿದರಲ್ಲದೆ, ಆಸ್ಪತ್ರೆಯ ಊಟೋಪಚಾರದ ಬಗ್ಗೆ, ವೈದ್ಯರ ಆರೈಕೆಯ ಬಗ್ಗೆ ವಿವರ ಪಡೆದರು.

# ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಒರಟು ವರ್ತನೆ ನಿಮ್ಮ ಪತ್ನಿಯೊಂದಿಗಿನ ಸಂಬಂಧವನ್ನು ಹಾಳು ಮಾಡಬಹುದು. ಏನಾದರೂ ಬಾಲಿಶವಾದದ್ದನ್ನು ಮಾಡುವ ಮೊದಲು ನಿಮ್ಮ ವರ್ತನೆಯ ಪರಿಣಾಮದ ಬಗ್ಗೆ ಆಲೋಚಿಸಿ. ಸಾಧ್ಯವಾದಲ್ಲಿ ದೂರ ಹೋಗಿ ನಿಮ್ಮ ಮನಸ್ಥಿತಿಯನ್ನು ಬದಲಾಯಿಸಿ. ಇಂದು ಯಾವುದೇ ವಿರುದ್ಧ ಲಿಂಗದ ಸಹಾಯದಿಂದ ನೀವು ವ್ಯಾಪರ ಅಥವಾ ಉದ್ಯೋಗದಲ್ಲಿ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಇದೆ.

### ವೃಷಭ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನಿಮ್ಮ ಖರ್ಚುಗಳಲ್ಲಿ ಅನಿರೀಕ್ಷಿತ ಏರಿಕೆ ನಿಮ್ಮ ಮನಸ್ಸಿನ ಶಾಂತಿಗೆ ಭಂಗ ತರುತ್ತದೆ. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ. ಪ್ರೇಮ ಜೀವನ ಭರವಸೆ ತರುತ್ತದೆ ಇಂದು, ನೀವು ಮತ್ತು ನಿಮ್ಮ ಪ್ರೀತಿ ಸಂಗಾತಿ ಪ್ರೀತಿಯ ಸಾಗರದಲ್ಲಿ ತೇಲುತ್ತೀರಿ ಮತ್ತು ಪ್ರೀತಿಯ ಔನ್ನತ್ಯವನ್ನು ಅನುಭವಿಸುತ್ತೀರಿ.

### ಮಿಥುನ ರಾಶಿ

ನೀವು ಇಂದು ಆರಾಮವಾಗಿ ವಿಶ್ರಾಂತಿ ಪಡೆಯಬೇಕು ನೀವು ಆನಂದಿಸುವ ಮತ್ತು ಆಸಕ್ತಿಗಳು ಮತ್ತು ವಿಷಯಗಳಲ್ಲಿ ತೊಡಗಿಕೊಳ್ಳಿ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ. ಇಂದು ನೀವು ನಿಮ್ಮ ಜೀವನದಲ್ಲಿ ನಿಜವಾದ ಪ್ರೀತಿಯ ಅನುಪಸ್ಥಿತಿಯನ್ನು ಅನುಭವಿಸುತ್ತೀರಿ.

### ಕರ್ಕ ರಾಶಿ

ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ. ನಿಮ್ಮ ನಡೆಯಲ್ಲಿ ಉದಾರ ಮನೋಭಾವ ಹೊಂದಿರಿ ಮತ್ತು ನಿಮ್ಮ ಕುಟುಂಬದ ಸದಸ್ಯರ ಜೊತೆಗೆ ಉತ್ತಮವಾದ ಪ್ರೀತಿಯ ಕ್ಷಣಗಳನ್ನು ಕಳೆಯಿರಿ.

### ಸಿಂಹ ರಾಶಿ

ಗಾಯಗೊಳ್ಳುವುದನ್ನು ತಪ್ಪಿಸಲು ಕುಳಿತುಕೊಳ್ಳುವಾಗ ವಿಶೇಷ ಕಾಳಜಿ ವಹಿಸಿ. ಅಲ್ಲದೇ ಒಳ್ಳೆಯ ನಿಲುವು ಕೇವಲ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುವುದಷ್ಟೇ ಅಲ್ಲದೇ ಆರೋಗ್ಯ ಮತ್ತು ವಿಶ್ವಾಸಾರ್ಹತೆಯನ್ನು ಅಭಿವೃದ್ಧಿಪಡಿಸುವಲ್ಲೂ ಪ್ರಮುಖ ಪಾತ್ರ ವಹಿಸುತ್ತದೆ. ದೀರ್ಘಕಾಲದ ದೃಷ್ಟಿಕೋನದಿಂದ ಹೂಡಿಕೆ ಮಾಡಬೇಕು. ಜೀವನ ಮತ್ತು ಕೆಲಸದೆಡೆಗೆ ಪ್ರತಿಭಾಶಾಲಿಗಳೂ ಮತ್ತು ಪರಿಪೂರ್ಣರೂ ಆಗಿರಿ.

### ಕನ್ಯಾ ರಾಶಿ

ವಿಧಿಯನ್ನು ಆಧರಿಸದಿರಿ ಮತ್ತು ನಿಮ್ಮ ಆರೋಗ್ಯ ಸುಧಾರಿಸಲು ಪ್ರಯತ್ನಿಸಿ ಏಕೆಂದರೆ ಅದೃಷ್ಟವು ಒಂದು ಸೋಮಾರಿ ದೇವತೆಯಾಗಿದ್ದು ಇದು ಎಂದಿಗೂ ತಾನಾಗಿಯೇ ನಿಮ್ಮ ಬಳಿ ಬರುವುದಿಲ್ಲ. ನಿಮ್ಮ ತೂಕವನ್ನು ನಿಯಂತ್ರಿಸಲು ಮತ್ತು ನಿಮ್ಮ ಆರೋಗ್ಯವನ್ನು ಪುನಃ ಪಡೆಯಲು ವ್ಯಾಯಾಮ ಮಾಡಲು ಇದು ಒಳ್ಳೆಯ ಸಮಯ. ಕುಟುಂಬದ ಯಾವುದೇ ಸದಸ್ಯರ ಕಾಯಿಲೆ ಬೀಳುವ ಕಾರಣದಿಂದಾಗಿ ನೀವು ಆರ್ಥಿಕ ತೊಂದರೆಗೊಳಗಾಗಬಹುದು.

### ತುಲಾ ರಾಶಿ

ಅಭದ್ರತೆ / ದಿಗ್ಭ್ರಮೆಯ ಭಾವನೆ ತಲೆತಿರುಗುವಿಕೆಯನ್ನು ಉಂಟುಮಾಡಬಹುದು. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ಒಂದು ಹಳೆಯ ಸಂಪರ್ಕ ನಿಮಗೆ ಕೆಲವು ಸಮಸ್ಯೆಗಳನ್ನು ಸೃಷ್ಟಿಸಬಹುದು ನಿಮ್ಮ ಸಂಗಾತಿ ನಿಮ್ಮ ಸ್ಥಾನವನ್ನು ತಿಳಿದುಕೊಳ್ಳುವಂತೆ ಮಾಡಲು ನೀವು ತೊಂದರೆ ಹೊಂದಿರುತ್ತೀರಿ.

### ವೃಶ್ಚಿಕ ರಾಶಿ

ನಿಮ್ಮ ದೇಹದ ಪುನಃಶ್ಚೇತನಕ್ಕಾಗಿ ಸಂಪೂರ್ಣ ವಿಶ್ರಾಂತಿ ತೆಗೆದುಕೊಳ್ಳದಿದ್ದರೆ ನೀವು ಆಯಾಸ ಹಾಗೂ ನಿರಾಸೆಯಲ್ಲಿ ಸಿಲುಕುತ್ತೀರಿ. ಆವತ್ತಿಗಾಗಿ ಮಾತ್ರ ಬದುಕುವ ಮತ್ತು ಮನೋರಂಜನೆಗಾಗಿ ಹೆಚ್ಚು ಸಮಯ ಮತ್ತು ಹಣ ಖರ್ಚು ಮಾಡುವ ನಿಮ್ಮ ಪ್ರವೃತ್ತಿಯನ್ನು ನಿಯಂತ್ರಿಸಿ. ಜನರು ಮತ್ತು ಅವರ ಉದ್ದೇಶಗಳ ಬಗ್ಗೆ ಅವಸರದ ತೀರ್ಮಾನ ಕೈಗೊಳ್ಳಬೇಡಿ –ಅವರು ಒತ್ತಡದಲ್ಲಿರಬಹುದು ಮತ್ತು ಅವರಿಗೆ ನಿಮ್ಮ ಸಹಾನುಭೂತಿ ಮತ್ತು ತಿಳುವಳಿಕೆಯ ಅಗತ್ಯವಿರುತ್ತದೆ.

### ಧನು ರಾಶಿ

ಮನೋಬಲದ ನಿಮ್ಮ ಕೊರತೆ ನಿಮ್ಮನ್ನು ಭಾವನಾತ್ಮಕ ಮತ್ತು ಮಾನಸಿಕ ವರ್ತನೆಯ ಬಲಿಪಶುವಾಗಿ ಮಾಡಬಹುದು. ನೀವು ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ, ಇಂದು ನೀವು ಈ ವಿಷಯವನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಬಹುದು. ಪತ್ನಿಯ ವ್ಯವಹಾರಗಳಲ್ಲಿ ನಿಮ್ಮ ಹಸ್ತಕ್ಷೇಪ ಅವಳಿಗೆ ಕಿರಿಕಿರಿ ಮಾಡಬಹುದು.

### ಮಕರ ರಾಶಿ

ಇಂದು ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ಇಂದು ಸಾಲಗಾರನು ನಿಮಗೆ ಹೇಳದೆ ನಿಮ್ಮ ಖಾತೆಗೆ ಹಣವನ್ನು ಸೇರಿಸಬಹುದು. ಇದರ ಬಗ್ಗೆ ತಿಳಿದು ನೀವು ಆಶ್ಚರ್ಯಚಕಿತರಾಗಬಹು ಮತ್ತು ಸಂತೋಷವು ಪಡೆಯಬಹುದು. ಕುಟುಂಬದ ಸದಸ್ಯರು ಅಥವಾ ಸಂಗಾತಿ ಕೆಲವು ಆತಂಕಗಳನ್ನು ಉಂಟುಮಾಡುತ್ತಾರೆ.

### ಕುಂಭ ರಾಶಿ

ಕೆಲವು ಅನಿವಾರ್ಯ ಸಂದರ್ಭಗಳು ನಿಮಗೆ ಅಹಿತಕರವೆನಿಸಬಹುದು. ಆದರೆ ನೀವು ನಿಮ್ಮ ಸಮತೋಲನ ಕಾಯ್ದುಕೊಳ್ಳಬೇಕು ಮತ್ತು ಪರಿಸ್ಥಿತಿಯನ್ನು ನಿಭಾಯಿಸಲು ತಕ್ಷಣವೇ ಪ್ರತಿಕ್ರಿಯಿಸಬಾರದು. ಇಂದು ಹೂಡಿಕೆಗಳನ್ನು ಮಾಡಬಾರದು. ಮನೆಯಲ್ಲಿನ ಕೆಲವು ಬದಲಾವಣೆಗಳು ನಿಮ್ಮನ್ನು ಭಾವುಕರನ್ನಾಗಿಸಬಹುದು– ಆದರೆ ನಿಮಗೆ ಮುಖ್ಯವಾದವರಿಗೆ ನೀವು ನಿಮ್ಮ ಭಾವನೆಗಳನ್ನು ಪರಿಣಾಮಕಾರಿಯಾಗಿ ಹೇಳಲು ಸಾಧ್ಯವಾಗುತ್ತದೆ.

### ಮೀನ ರಾಶಿ

ಲಕ್ಕವಿಲ್ಲದಷ್ಟು ಗಾಬರಿಗಳು ನಿಮ್ಮ ಪ್ರತಿರೋಧಕತೆ ಮತ್ತು ಆಲೋಚನಾ ಶಕ್ತಿಯನ್ನು ದುರ್ಬಲಗೊಳಿಸಬಹುದು. ಸಕಾರಾತ್ಮಕ ಚಿಂತನೆಯ ಜೊತೆ ಈ ರೋಗದ ವಿರುದ್ಧ ಹೋರಾಡಲು ಪ್ರಯತ್ನಿಸಿ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು.

# ಸ್ವಚ್ಛತೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡುವಂತೆ: ಇ.ಓ ಕರೆ



**ಹಾಸನ :** ಪ್ರತಿಯೊಬ್ಬರೂ ಸ್ವಚ್ಛತೆಕಡೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡುವ ಮೂಲಕ ಉತ್ತಮ ಪರಿಸರಕಾಪಾಡುವಂತೆ ಹಾಸನ ತಾಲ್ಲೂಕು ಪಂಚಾಯಿತಿಕಾರ್ಯನಿರ್ವಾಹಕಅಧಿಕಾರಿಗಿರೀಶ್ ಹೆಚ್. ಡಿ ಅವರು ತಿಳಿಸಿದ್ದಾರೆ.

ಹಾಸನ ತಾಲ್ಲೂಕು ಪಂಚಾಯಿತಿಕಾರ್ಯನಿವಾರ್ಹಕಅಧಿಕಾರಿಗಿರೀಶ್ ಹೆಚ್.ಡಿಅವರ ನೇತೃತ್ವದಲ್ಲಿ ಹಾಸನ ತಾಲ್ಲೂಕು ಪಂಚಾಯಿತಿ ಸಿಬ್ಬಂದಿಗಳು ಹೊನ್ನಾವರಗ್ರಾಮ ಪಂಚಾಯಿತಿಯ ಚಿಕ್ಕಮೇನಹಳ್ಳಿ ಗ್ರಾಮಕ್ಕೆ ಭೇಟಿ ನೀಡಿಕಲ್ಯಾಣಿ ಕೊಳವನ್ನು ಸ್ವಚ್ಛಗೊಳಿಸಿ ಸಾರ್ವಜನಿಕರಲ್ಲಿ ಸ್ವಚ್ಛತೆಯ ಬಗ್ಗೆ ಜಾಗೃತಿ ಮೂಡಿಸಿದ್ದಾರೆ.

ಹಿಂದಿನ ಕಾಲದಲ್ಲಿಕಲ್ಯಾಣಿ ಕೊಳಗಳು ಸಹ ಕುಡಿಯುವ ನೀರಿನ ಪ್ರಮುಖ ಮೂಲವಾಗಿತ್ತು, ಇಂದು ಕಲ್ಯಾಣಿಗಳ ಸಂಖ್ಯೆಕಡಿಮೆಯಾಗುತ್ತಿದ್ದು ಅವುಗಳನ್ನು ಉಳಿಸುವತ್ತ ಗಮನಹರಿಸಬೇಕಾಗಿದೆಎಂದರಲ್ಲದೆ, ಪ್ರತಿಯೊಬ್ಬರೂ ಕಸವನ್ನುಎಲ್ಲೆಂದರಲ್ಲಿ ಬಿಸಾಡದೆ ಒಣ ಕಸ ಮತ್ತು ಹಸಿ ಕಸ ವಿಂಗಡಣೆ ಮಾಡಿಗ್ರಾಮ ಪಂಚಾಯಿತಿ ವತಿಯಿಂದ ಬರುವಕಸದ ಆಟೋಗಳಿಗೆ ಹಾಕಬೇಕು ಎಂದು ತಿಳಿಸಿದ್ದಾರೆ.

ಸ್ವಚ್ಛತೆಯನ್ನುಕಾಪಾಡಿದರೆಡೆಂಗ್ಯೂ, ಮಲೇರಿಯಾ, ಕ್ಷಯ ಸೇರಿದಂತೆಇನ್ನಿತರ ಕಾಯಿಲೆಗಳನ್ನು ತಡೆಗಟ್ಟಬಹುದುಜೊತೆಗೆ ಉತ್ತಮಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಕಾರಿಯಾಗುತ್ತದೆಎಂದು ಹೇಳಿದ್ದಾರೆ.


ಈ ವೇಳೆ ಹಾಸನ ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ದಿನೇಶ್, ಸಿ.ಬಿ, ರಂಗಸ್ವಾಮಿ, ಹೊನ್ನಾವರಗ್ರಾಮ ಪಂಚಾಯಿತಿಅಭಿವೃದ್ಧಿಅಧಿಕಾರಿ ಪ್ರಭ, ತಾಲ್ಲೂಕು ಪಂಚಾಯಿತಿ ಸಿಬ್ಬಂದಿಗಳು, ಹೊನ್ನಾವರಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಹಾಗೂ ಮತ್ತಿತರು ಹಾಜರಿದ್ದರು.

# ಮಾಸಬ ಕಾಲೇಜಿನಲ್ಲಿ ಟೇಕ್ವಾಂಡೋ ಪಂದ್ಯಾವಳಿ

**ದಾವಣಗೆರೆ:** ಮಾ.ಸ.ಬ ಕಲಾ ಮತ್ತು ವಾಣಿಜ್ಯ ಕಾಲೇಜಿನ ಕ್ರೀಡಾ ವಿಭಾಗ ಮತ್ತು ಹಳೆಯ ವಿದ್ಯಾರ್ಥಿಗಳ ಸಂಘ ಇವರುಗಳ ಸಂಯುಕ್ತಾಶ್ರಯದಲ್ಲಿ 2025–26ನೇ ಸಾಲಿನ ದಾವಣಗೆರೆ ವಿಶ್ವವಿದ್ಯಾನಿಲಯದ ಅಂತರ ಕಾಲೇಜು ಪುರುಷ ಹಾಗೂ ಮಹಿಳೆಯರ ಟೇಕ್ವಾಂಡೋ ಪಂದ್ಯಾವಳಿ ಮತ್ತು ಆಯ್ಕೆ ಕಾರ್ಯಕ್ರಮ ಸೆ.26ರ ಬೆಳಗ್ಗೆ 10:30ಕ್ಕೆ ಕಾಲೇಜಿನ ಶ್ರೀಮತಿ ಪಾರ್ವತಮ್ಮ ಸಭಾಂಗಣದಲ್ಲಿ ಜರುಗಿದೆ.

ಕಾರ್ಯಕ್ರಮವನ್ನು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಉದ್ಘಾಟಿಸಲಿದ್ದು, ಮುಖ್ಯ ಅತಿಥಿಗಳಾಗಿ ಬಾಪೂಜಿ ವಿದ್ಯಾಸಂಸ್ಥೆಯ ನಿರ್ದಶಕ, ಪ್ರೊ. ಸಿ.ಹೆಚ್. ಮುರುಗೇಂದ್ರಪ್ಪ, ದೈಹಿಕ ಶಿಕ್ಷಕ ನಿರ್ದೇಶಕರ ಸಂಘದ ಅಧ್ಯಕ್ಷ ಡಾ. ಸಿ. ಶಂಕ್ರಪ್, ಡಾ. ವೀರೇಂದ್ರ ಕೆ.ಎಂ., ಡಾ. ಪಿ. ಚಂದ್ರಶೇಖರ್, ಹಳೆಯ ವಿದ್ಯಾರ್ಥಿಗಳ ಸಂಘದ ಇಂದುಧರ್ ನಿಶಾನಿಮಠ್, ಈ. ಬಸವರಾಜ ಪಾಲ್ಗೊಳ್ಳಲಿದ್ದಾರೆ. ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಜೆ. ಅನಿತಾಕುಮಾರಿ ಅಧ್ಯಕ್ಷತೆ ವಹಿಸಲಿದ್ದಾರೆ.ಐ.ಕ್ಯೂ.ಎ.ಸಿ. ಸಂಚಾಲಕ ಡಾ. ಎ.ಬಿ. ವಿಜಯಕುಮಾರ್, ದೈಹಿಕ ಶಿಕ್ಷಣ ನಿರ್ದೇಶಕ ಆರ್. ಧನಂಜಯ, ಡಾ. ಎಂ. ಮಂಜಪ್ಪ, ಡಾ. ಆರ್. ರಾಘವೇಂದ್ರ, ಎಂ.ಆರ್. ಏಕಾಂತಪ್ಪ ಉಪಸ್ಥಿತರಿರುವರು. ಸಿಂಡಿಕೇಟ್ ಸದಸ್ಯ ಹೆಚ್. ತಿಪ್ಪೇಸ್ವಾಮಿ ಬಹುಮಾನ ವಿತರಿಸುವರು.

# ಗ್ರಾಮ ಪಂಚಾಯತ್ ಮಹಿಳಾ ಅಧ್ಯಕ್ಷರಿಗೆ ಸಬಲೀಕರಣ ಕುರಿತು ತರಬೇತಿ ಉದ್ಘಾಟನೆ



**ದಾವಣಗೆರೆ:** ಗ್ರಾಮಗಳಲ್ಲಿ ಬದಲಾವಣೆ ತರಬೇಕೆಂಬ ಉದ್ದೇಶದಿಂದಲೇ ರಾಜ್ಯ ಸರ್ಕಾರ ಗ್ರಾಮ ಪಂಚಾಯತಿಗಳಲ್ಲಿ ಮಹಿಳೆಯರಿಗೆ ಅಧ್ಯಕ್ಷೆ ಮತ್ತು ಉಪಾಧ್ಯಕ್ಷೆ ಮೀಸಲಾತಿ ನಿಗದಿಪಡಿಸಿದೆ ಎಂದುತಾಲ್ಲೂಕು ತೋಟಗಾರಿಕೆ ಇಲಾಕೆ ಸಹಾಯಕ ನಿರ್ದೇಶಕಿ ರೇಷ್ಮಾ ಫರ್ವಿನ್ ಹೇಳಿದರು.

ಗುರುವಾರ ನಗರದ ಜಿಲ್ಲಾ ಪಂಚಾಯತ ಕಚೇರಿ ಆವರಣದಲ್ಲಿರುವ ಸಾಮರ್ಥ್ಯ ಸೌಧದಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ ಮೈಸೂರು ಮತ್ತು ತಾಲೂಕು ಪಂಚಾಯಿತಿ ದಾವಣಗೆರೆ ಇವರ ಸಹಭಾಗಿತ್ವದಲ್ಲಿ ಸ್ಥಳೀಯ ಆಡಳಿತದಲ್ಲಿ ಮಹಿಳಾ ನಾಯಕರ ಸಬಲೀಕರಣ ಶೀರ್ಷಿಕೆಯಡಿ ಗ್ರಾಮ ಪಂಚಾಯಿತಿ ಮಹಿಳಾ ಅಧ್ಯಕ್ಷರಿಗೆ ಹಮ್ಮಿಕೊಂಡಿದ್ದ ಮೂರು ದಿನಗಳ ತರಬೇತಿ ಕಾರ್ಯಕ್ರಮದಲ್ಲಿ ಅವರು ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿದರು.

ಈ ತರಬೇತಿಯು ವಿವಿಧ ಚಟುವಟಿಕೆಯನ್ನು ಒಳಗೊಂಡಿದ್ದು ವಿಷಯ ವಿಶ್ಲೇಷಣೆ ಕೂಡ ಅಡಗಿದೆ. ತರಬೇತಿಯಲ್ಲಿ ಪ್ರಮುಖವಾಗಿ ಲಿಂಗ, ಲಿಂಗತ್ವ. 73ನೇ ತಿದ್ದುಪಡಿಯ ಪ್ರಮುಖ ಅಂಶಗಳು. ಮಹಿಳಾ ಮೀಸಲಾತಿ. 3 ಎಫ್‌ಗಳ ಬಗ್ಗೆ ( ಅನುದಾನ, ಕಾರ್ಯಕ್ರಮ ಮತ್ತು ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು ) ಸಂವಹನ ಕೌಶಲ್ಯ ಮತ್ತು ನಾಯಕತ್ವದ ಗುಣಗಳು, ಗ್ರಾಮ ಸಭೆ, ಸ್ಥಾಯಿ ಸಮಿತಿ ರಚನೆ ಮತ್ತು ಪ್ರಕಾರಗಳ ಕುರಿತು ತಿಳಿಸಿಕೊಡಲಾಯಿತು.

# ಕರ್ತವ್ಯದಿಂದ ಅಮಾನತುಗೊಂಡ ಪಿಎಸ್ಸೈ ಪಿ.ಡಿ.ನಿತ್ಯಾ ನಂದಗೌಡ


**ಚಿಕ್ಕಮಗಳೂರು:** ಜಿಲ್ಲೆಯ ಕಳಸ ಪೊಲೀಸ್ ಠಾಣೆಯಲ್ಲಿ ಪಿಎಸ್ಸೈ ಆಗಿ ಕಾರ್ಯನಿರ್ವಹಿಸುತ್ತಿದ್ದ ವೇಳೆ ಪತ್ನಿಗೆ ಕಿರುಕುಳ ನೀಡಿದ್ದ ಆರೋಪದ ಮೇರೆಗೆ ಕರ್ತವ್ಯದಿಂದ ಅಮಾನತುಗೊಂಡಿದ್ದ ಪಿಎಸ್ಸೈ ಪಿ.ಡಿ.ನಿತ್ಯಾನಂದಗೌಡ ಮೇಲೆ ಮತ್ತೊಂದು ಗಂಭೀರ ಆರೋಪ ಕೇಳಿ ಬಂದಿದೆ. 2005–06ನೇ ಸಾಲಿನಲ್ಲಿ ಪಿಎಸ್ಸೈ ಹುದ್ದೆಗಳ ನೇಮಕಾತಿ ಪರೀಕ್ಷೆಯಲ್ಲಿ ನಿತ್ಯಾನಂದಗೌಡ ಅವರು ಪರೀಕ್ಷೆಗೂ ಮುನ್ನ ಪ್ರಶ್ನೆ ಪತ್ರಿಕೆ ಪಡೆದು ಅಕ್ರಮವಾಗಿ ಸರಕಾರಿ ಹುದ್ದೆ ಗಿಟ್ಟಿಸಿಕೊಂಡಿದ್ದಾರೆ ಈ ಸಂಬಂಧ ತನಿಖೆ ನಡೆಸಿ ಆರೋಪಿಯನ್ನು ಸೇವೆಯಿಂದ ವಜಾ ಮಾಡುವುದರೊಂದಿಗೆ ಕಾನೂನು ಕ್ರಮಕೈಗೊಳ್ಳಬೇಕೆಂದು ಕಾಂಗ್ರೆಸ್ ಮುಖಂಡ ಮುಹಮ್ಮದ್ ರಫೀಕ್ ಎಂಬವರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ದೂರು ನೀಡಿದ್ದಾರೆ.

ಗುರುವಾರ ಮಧ್ಯಾಹ್ನ ಎಸ್ಪಿಗೆ ಕಚೇರಿಗೆ ಆಗಮಿಸಿ ಈ ಸಂಬಂಧ ದೂರು ನೀಡಿರುವ ಮುಹಮ್ಮದ್ ರಫೀಕ್, ನಿತ್ಯಾನಂದಗೌಡ ಅವರು ಪಿಎಸ್ಸೈ ಹುದ್ದೆಗಳ ನೇಮಕಾತಿ ಪರೀಕ್ಷೆಯಲ್ಲಿ ಪಶ್ನೆ ಪತ್ರಿಕೆ ಪಡೆದು ಪರೀಕ್ಷೆ ಬರೆದು ಸರಕಾರಿ ಹುದ್ದೆ ಗಿಟ್ಟಿಸಿಕೊಂಡಿರುವುದು, ಭ್ರಷ್ಟಾಚಾರ ನಡೆಸಿರುವುದು, ಮಹಿಳೆಯವರಿಗೆ ಲೈಂಗಿಕ ಕಿರುಕುಳ ನೀಡಿರುವ ಬಗ್ಗೆ ನಿತ್ಯಾನಂದಗೌಡ ಅವರ ಪತ್ನಿ ಈ ಹಿಂದೆಯೇ ಕಳಸ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ. ಈ ದೂರಿನ ಮೇರೆಗೆ ನಿತ್ಯಾನಂದಗೌಡ ಅವರನ್ನು ಕರ್ತವ್ಯದಿಂದ ಅಮಾನತು ಮಾಡಲಾಗಿದೆ. ಸದ್ಯ ನಿತ್ಯಾನಂದಗೌಡ ಅವರು ಪಿಎಸ್ಸೈ ಪರೀಕ್ಷೆಯಲ್ಲಿ ಅಕ್ರಮ ನಡೆಸಿ ಸರಕಾರಿ ಹುದ್ದೆ ಗಿಟ್ಟಿಸಿಕೊಂಡಿರುವ ಬಗ್ಗೆ ನಿತ್ಯಾನಂದಗೌಡ ಅವರು ದಿವ್ಯಾ ಎಂಬವರ ಜೊತೆ ನಡೆಸಿರುವ ಮೊಬೈಲ್ ಸಂಭಾಷಣೆಯಲ್ಲಿ ಬೆಳಕಿಗೆ ಬಂದಿದೆ. ಈ ಮೊಬೈಲ್ ಸಂಭಾಷಣೆ ಸಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳು ಈ ಮೊಬೈಲ್ ಸಂಭಾಷಣೆ ಆಧಾರದ ಮೇಲೆ ನಿತ್ಯಾನಂದಗೌಡ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿ ಆರೋಪಿ ವಿರುದ್ಧ ಕಾನೂನು ಕ್ರಮಕೈಗೊಳ್ಳಬೇಕು, ಅಲ್ಲದೇ ಸೇವೆಯಿಂದ ವಜಾ ಮಾಡಬೇಕು ಎಂದು ದೂರಿನಲ್ಲಿ ತಿಳಿಸಿದ್ದಾರೆ.

ನಿತ್ಯಾನಂದಗೌಡ ಅವರು ದಿವ್ಯಾ ಎಂಬವರೊಂದಿಗೆ ಮಾತನಾಡಿರುವ ಆಡಿಯೋ ಕ್ಲಿಪ್ ಅನ್ನು ದೂರಿನೊಂದಿಗೆ ಪೊಲೀಸರಿಗೆ ನೀಡಿದ್ದು, ದಿವ್ಯಾ ಎಂಬ ಮಹಿಳೆಯೊಂದಿಗೆ ಮೊಬೈಲ್‌ನಲ್ಲಿ ಮಾತನಾಡುವ ವೇಳೆ, ಪ್ರಶ್ನೆ ಪತ್ರಿಕೆಯ ವಿಚಾರದ ಬಗ್ಗೆ ಪ್ರಸ್ತಾಪಿಸಿ, ಈ ವಿಚಾರದ ಬಗ್ಗೆ ನಿತ್ಯಾನಂದಗೌಡ ಪತ್ನಿ ಎಲ್ಲರಿಗೂ ಹೇಳುತ್ತಿದ್ದು, ಇದರಿಂದ ತಮಗೆ ತೊಂದರೆಯಾಗುವುದಲ್ಲದೇ, ಕೆಲಸಕ್ಕೂ ಕುತ್ತು ಬರುವ ಸಾಧ್ಯತೆ ಇದೆ, ಪ್ರಶ್ನೆ ಪತ್ರಿಕೆ ಪಡೆದು ನೇಮಕಾತಿ ಪರೀಕ್ಷೆ ಬರೆದಿರುವ ವಿಚಾರ ಎಲ್ಲೂ ಹೊರಗೆ ಬಾರದಂತೆ ನೋಡಿಕೊಳ್ಳಬೇಕು ಎಂದು ದಿವ್ಯಾ ಎಂಬ ಮಹಿಳೆ ನಿತ್ಯಾನಂದಗೌಡ ಬಳಿ ಹೇಳುತ್ತಿರುವುದು ಹಾಗೂ ಇದರಿಂದ ಯಾವುದೇ ಸಮಸ್ಯೆ ಆಗುವುದಿಲ್ಲ ಎಂದು ನಿತ್ಯಾನಂದಗೌಡ ಮಹಿಳೆ ಬಳಿ ಹೇಳುತ್ತಿರುವ ಆಡಿಯೋ ಸಂಭಾಷಣೆ ಸದ್ಯ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ.

> ಕಳಸದಲ್ಲಿ ಪಿಎಸ್ಸೈ ಆಗಿದ್ದ ಪಿ.ಡಿ.ನಿತ್ಯಾನಂದಗೌಡ ಅವರು ತನ್ನ ಪತ್ನಿ ಮೇಲೆ ದೌರ್ಜನ್ಯ ನಡೆಸಿರುವುದಲ್ಲದೇ, ಭ್ರಷ್ಟಾಚಾರ, ಅನೈತಿಕ ಸಂಬಂಧ ಹೊಂದಿದ್ದ ಆರೋಪದ ಮೇರೆಗೆ ಸದ್ಯ ಕರ್ತವ್ಯದಿಂದ ಅಮಾನತುಗೊಂಡಿದ್ದಾರೆ. ಸದ್ಯ ನಿತ್ಯಾನಂದಗೌಡ ಅವರು ಪಿಎಸ್ಸೈ ಹುದ್ದೆಗಳ ನೇಮಕಾತಿ ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ಪಡೆದು ಅಕ್ರಮವಾಗಿ ಪರೀಕ್ಷೆ ಬರೆದು ಸರಕಾರಿ ಹುದ್ದೆ ಗಿಟ್ಟಿಸಿಕೊಂಡಿರುವ ಬಗ್ಗೆ ದಿವ್ಯಾ ಎಂಬ ಮಹಿಳೆಯೊಂದಿಗೆ ಮಾತನಾಡಿರುವ ಆಡಿಯೋ ಸಂಭಾಷಣೆಯಲ್ಲಿ ಪ್ರಶ್ನೆ ಪತ್ರಿಕೆ ವಿಚಾರ ಪ್ರಸ್ತಾಪಿಸಿದ್ದಾರೆ. ನಿತ್ಯಾನಂದಗೌಡ ಅವರು ಪ್ರಶ್ನೆ ಪತ್ರಿಕೆ ಪಡೆದು ಅಕ್ರಮ ನಡೆಸಿ ಸರಕಾರಿ ಹುದ್ದೆ ಗಿಟ್ಟಿಸಿಕೊಂಡಿರುವುದು ಈ ಆಡಿಯೋ ಸಂಭಾಷಣೆಯಲ್ಲಿ ಸ್ಪಷ್ಟವಾಗುತ್ತಿದೆ. ಈ ಸಂಬಂಧ ಎಸ್ಪಿಗೆ ದೂರು ನೀಡಿದ್ದು, ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳು ಈ ಆಡಿಯೋ ಸಂಭಾಷಣೆ ಆಧರಿಸಿ ತನಿಖೆ ನಡೆಸಬೇಕು. ನಿತ್ಯಾನಂದಗೌಡರನ್ನು ಸೇವೆಯಿಂದ ಅಮಾನತು ಮಾಡಿ ಕಾನೂನು ಕ್ರಮಕೈಗೊಳ್ಳಬೇಕು. ಈ ಸಂಬಂಧ ಶೀಘ್ರ ಗೃಹ ಸಚಿವರಿಗೂ ದೂರು ನೀಡಲಾಗುವುದು.
>
> **– ಮುಹಮ್ಮದ್ ರಫೀಕ್, ಜಿಪಂ ಕೆಡಿಪಿ ಸದಸ್ಯ, ಕಳಸ ಬ್ಲಾಕ್ ಕಾಂಗ್ರೆಸ್ ಮುಖಂಡ**

# ಸಮಸ್ಯೆಗಳನ್ನು ಸರಿಪಡಿಸಿ ಸಮೀಕ್ಷೆಗೆ ಕ್ರಮ: ಸಹಕರಿಸಲು ಜಿಲ್ಲಾಧಿಕಾರಿ ಮನವಿ



**ಶಿವಮೊಗ್ಗ :** ರಾಜ್ಯದಾದ್ಯಂತ ಕೈಗೊಳ್ಳಲಾಗಿರುವ ಸಾಮಾಜಿಕ ಆರ್ಥಿಕ ಗಣತಿ ಕಾರ್ಯಕ್ಕೆ ನಿಯೋಜಿತರಾಗಿರುವ ಶಿಕ್ಷಕರಿಗೆ ಗುರುತಿನ ಸಂಖ್ಯೆ ದೊರೆಯದಿರುವುದು, ಸೂಚನಾ ಪತ್ರದಲ್ಲಿ ಸೂಚಿಸಿರುವ ಪ್ರದೇಶ ಒಂದಾದರೆ, ಗಣತಿ ಮಾಡಬೇಕಾದ ಪ್ರದೇಶವೇ ಮತ್ತೊಂದು, ಆನ್ಲೈನ್ನಲ್ಲಿ ನಿರಂತರವಾಗಿರುವ ಸಮಸ್ಯೆ, ಇಂತಹ ಅನೇಕ ಸಮಸ್ಯೆಗಳು ಇರುವುದನ್ನು ಗುರುತಿಸಲಾಗಿದ್ದು, ಅವುಗಳನ್ನು ಪರಿಹರಿಸಿ, ಸಮೀಕ್ಷೆಗೆ ಕ್ರಮ ವಹಿಸಲಾಗುವುದು. ಗಣತಿ ಕಾರ್ಯಕ್ಕೆ ನಿಯೋಜಿತ ಶಿಕ್ಷಕರು ಜಿಲ್ಲಾಡಳಿತದೊಂದಿಗೆ ಸಹಕರಿಸುವಂತೆ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಹೇಳಿದರು.

ಅವರು ಇಂದು ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಆರ್. ಮೋಹನ್ಕುಮಾನವರ ನೇತೃತ್ವದಲ್ಲಿ ಶಿಕ್ಷಕರ ಸಂಘಗಳ ಜಿಲ್ಲಾ ಮತ್ತು ತಾಲೂಕುಗಳ ಅಧ್ಯಕ್ಷರು ಹಾಗೂ ವಿವಿಧ ವೃಂದ ಸಂಘಗಳ ಪದಾಧಿಕಾರಿಗಳೊಂದಿಗೆ ಮಾನ್ಯ ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಿ, ಗಣತಿ ಕಾರ್ಯದಲ್ಲಿ ಶಿಕ್ಷಕರು ಅನುಭವಿಸುತ್ತಿರುವ ನೋವು ಸಂಕಟಗಳ ವಾಸ್ತವ ಸ್ಥಿತಿಗತಿಗಳ ಕುರಿತು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಆರ್.ಮೋಹನ್ಕುಮಾನವರು ಮಾತನಾಡಿ, ಈವರೆಗೂ ನಿಯೋಜಿತ ಶಿಕ್ಷಕರಿಗೆ ಆದೇಶದ ಪ್ರತಿಯೇ ತಲುಪಿಲ್ಲ. ಸಮೀಕ್ಷೆ ಮಾಡಬೇಕಾದ ಮನೆಪಟ್ಟಿಯನ್ನೂ ಸಹ ನೀಡಿಲ್ಲ. ನೆರೆಯ ಅನೇಕ ಜಿಲ್ಲೆಗಳಲ್ಲಿ ಎಲ್ಲಾ ಮಾಹಿತಿ ಶಿಕ್ಷಕರಿಗೆ ದೊರೆತಿದ್ದು, ಕಾರ್ಯಾರಂಭ ಮಾಡಿದ್ದಾರೆ. ಆದರೆ ಈ ಜಿಲ್ಲೆಯಲ್ಲಿ ಮಾಹಿತಿ ನೀಡುವಿಕೆಯಲ್ಲಿಯೇ ಲೋಪಗಳು ಕಂಡುಬರುತ್ತಿವೆ.

ಇವುಗಳನ್ನು ಕೂಡಲೇ ಸರಿಪಡಿಸಿ, ಶಿಕ್ಷಕರ ಗಣತಿ ಕಾರ್ಯಕ್ಕೆ ಸಹಕರಿಸುವಂತೆ ಮನವಿ ಮಾಡಿದ್ದು, ಮಾನ್ಯ ಜಿಲ್ಲಾಧಿಕಾರಿಳು ಸಕಾರಾತ್ಮಕವಾಗಿ ಸ್ಪಂದಿಸಿರುವುದಾಗಿ ಅವರು ತಿಳಿಸಿದ್ದಾರೆ.

ಇಲಾಖೆ ವತಿಯಿಂದ ನೀಡಲಾಗಿರುವ ಗಣತಿಯ ಆಪ್ನು ಪದೇಪದೇ ಕಾರಣವಿಲ್ಲದೇ ಬದಲಾವಣೆ ಆಗುತ್ತಿದೆ. ಶಿಕ್ಷಕರು ಲಾಗಿನ್ಮಾಡಿಕೊಳ್ಳಲು ಸಾಧ್ಯವೇ ಆಗುತ್ತಿಲ್ಲ. ಗ್ರಾಮೀಣ ಪ್ರದೇಶಗಳ ಅನೇಕ ಕಡೆಗಳಲ್ಲಿ ನೆಟ್ವರ್ಕ್ಸಮಸ್ಯೆ, ಕೆಲವು ಕಡೆಗಳಲ್ಲಿ ಲಾಗಿನ್ನಂತರದಲ್ಲಿ ಓಟಿಪಿ ಬರುತ್ತಿಲ್ಲ ಇವುಗಳನ್ನು ತ್ವರಿತವಾಗಿ ಸರಿಪಡಿಸಿಕೊಟ್ಟಲ್ಲಿ ಗಣತಿ ಕಾರ್ಯವನ್ನು ನಿರೀಕ್ಷಿತ ಅವಧಿಯಲ್ಲಿ ಪೂರ್ಣಗೊಳಿಸಬಹುದಾಗಿದೆ ಎಂದರು.

ಕೆಲವು ಶಿಕ್ಷಕರಿಗೆ 55+ ವಯೋಮಾನದ ಶಿಕ್ಷಕರಿಗೆ ವಯೋಸಹಜ ಅನಾರೋಗ್ಯದಿಂದಾಗಿ ಸಮೀಕ್ಷೆ ಕಾರ್ಯದಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವುದು ಸಾಧ್ಯವಾಗುತ್ತಿಲ್ಲ. ಅಂತಹ ಶಿಕ್ಷಕರಿಗೆ ವಿನಾಯಿತಿ ನೀಡಬೇಕು. ಅಲ್ಲದೇ ನಾಡಹಬ್ಬ ದಸರಾ ನಡೆಯುವ ಮೂರು ದಿನಗಳ ಕಾಲ ಸಮೀಕ್ಷೆಯಿಂದ ವಿನಾಯಿತಿ ನೀಡುವಂತೆಯೂ ಮನವಿ ಮಾಡಿರುವುದಾಗಿ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳಿಗೆ ಮನವಿ ನೀಡುವ ಸಂದರ್ಭದಲ್ಲಿ ಶಿಕ್ಷಕರ ಸಂಘದ ಅಧ್ಯಕ್ಷ ಡಿ.ಬಿ.ರುದ್ರಪ್ಪ, ತಾಲೂಕು ಶಿಕ್ಷಕರ ಸಂಘದ ಅಧ್ಯಕ್ಷ ದಿನೇಶ್, ಎಂ.ರವಿ., ಪ್ರಸಾದ್ಬಾಬು ಮತ್ತಿತರರು ಉಪಸ್ಥಿತರಿದ್ದರು.

# ರಾಜ್ಯ ಮಟ್ಟದ ಅಣಕು ಸಂಸತ್ತು ಸ್ಪರ್ಧೆಗೆ ಆಯ್ಕೆ

**ಗದಗ :** ಜಗದ್ಗುರು ತೋಂಟದಾರ್ಯ ಪದವಿ ಪೂರ್ವ ಕಾಲೇಜ ಗದಗನಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆಯವರು ಏರ್ಪಡಿಸಿದ ಜಿಲ್ಲಾಮಟ್ಟದ ಅಣಕು ಸಂಸತ್ತು ಸ್ಪರ್ಧೆಯಲ್ಲಿ ಎಫ್ ಬಿ ಪೂಜಾರ್ ಸರ್ಕಾರಿ ಪದವಿ ಪೂರ್ವ ಕಾಲೇಜ ಶಿರಹಟ್ಟಿಯ ಕುಮಾರಿ ಮರಿಯಮ್ಮ ರಣತೂರ ಪ್ರಥಮ ಸ್ಥಾನ ಹಾಗೂ ಪ್ರಿಯಾಂಕ ಮಾನೆ ದ್ವಿತೀಯ ಸ್ಥಾನವನ್ನು ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.ಸದರಿ ವಿದ್ಯಾರ್ಥಿಗಳಿಗೆ ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಕಾಲೇಜು ಅಭಿವೃದ್ಧಿ ಸಮಿತಿಯ ಸರ್ವ ಸದಸ್ಯರು ಹಾಗೂ ಪ್ರಾಚಾರ್ಯರಾದ ಬಿ.ಜಿ ಗಿರತಿಮಣ್ಣವರ್ ಮತ್ತು ಸಿಬ್ಬಂದಿಯವರು ಅಭಿನಂದನೆಗಳನ್ನು ಸಲ್ಲಿಸಿ ಶುಭ ಹಾರೈಸಿರುವರು.

# ಆಹಾರ ದಸರಾ ಸಮಿತಿ ವತಿಯಿಂದ ವಿವಿಧ ಕಾರ್ಯಕ್ರಮಗಳು

**ಶಿವಮೊಗ್ಗ:** ಶಿವಮೊಗ್ಗ ದಸರಾ ಪ್ರಯುಕ್ತ ಆಹಾರ ದಸರಾ ಸಮಿತಿ ವತಿಯಿಂದ ನಗರದಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.

ಸೆ.28 ರಂದು ಸಂಜೆ 6 ಗಂಟೆಗೆ, ಅಲ್ಲಮಪ್ರಭು ಮೈದಾನ(ಫ್ರೀಡಂ ಪಾರ್ಕ್)ನಲ್ಲಿ ಆಹಾರ ಮೇಳ – ಸುಮಾರು 40 ಸ್ಟಾಲ್‌ಗಳನ್ನು ನಿರ್ಮಿಸಿ ಜಿಲ್ಲೆಯ ವಿವಿಧ ಖಾದ್ಯಗಳ ಪ್ರದರ್ಶನ ಮತ್ತು ಮಾರಾಟಕ್ಕೆ ವ್ಯವಸ್ಥೆ ಮಾಡಲಾಗಿದೆ. ಸೆ.29 ರಂದು ಬೆಳಗ್ಗೆ 10.30ಕ್ಕೆ ಶಿವಪ್ಪ ನಾಯಕ ಸರ್ಕಲ್‌ನಲ್ಲಿ ಮೆಸ್ಕಾಂ ಇಲಾಖೆ ಹಾಗೂ ಸಾರ್ವಜನಿಕರಿಗೆ ಇಡ್ಲಿ ಸಾಂಬಾರ್ ಮತ್ತು ಹಣ್ಣು ತಿನ್ನುವ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ಸೆ.30ರಂದು ಬೆಳಿಗ್ಗೆ 10.30ಕ್ಕೆ ವೀರಶೈವ ಕಲ್ಯಾಣ ಮಂಟಪದಲ್ಲಿ ಆರೋಗ್ಯಕರ ತಿನಿಸನ್ನು ತಯಾರಿಸುವ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ ಎಂದು ಆಹಾರ ದಸರಾ ಸಮಿತಿ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೀರ್ ಪರಿವಾರ್ ಸಹಾಯತಾ ಯೋಜನಾ 2025 ಯ ಆನ್ ಲೈನ್ ತರಬೇತಿ

**ಶಿವಮೊಗ್ಗ:** "ವೀರ್ ಪರಿವಾರ್ ಸಹಾಯತಾ ಯೋಜನಾ 2025" ರ ಅಡಿಯಲ್ಲಿ ಉಚಿತ ಕಾನೂನು ನೆರವು ಸೇವಾ ಕೇಂದ್ರ (ಕ್ಲಿನಿಕ್)ವನ್ನು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಛೇರಿ, ಬಾಲರಾಜ್ ಅರಸ್ ರಸ್ತೆ, ಶಿವಮೊಗ್ಗ ಇಲ್ಲಿ ಆರಂಭಿಸಲಾಗಿದೆ.

ರಕ್ಷಣಾ ಇಲಾಖೆಯ ಸಿಬ್ಬಂದಿಗಳು, ವೀರ ನಾರಿಯರು, ಮಾಜಿ ಸೈನಿಕರು ಮತ್ತು ಅವರ ಅವಲಂಬಿತರಿಗೆ ಉಂಟಾಗಬಹುದಾದ ಕಾನೂನು ಸಮಸ್ಯೆಗಳಿಗೆ ನೆರವು ಮತ್ತು ಅರಿವುಗಳನ್ನು ಉಚಿತವಾಗಿ ನೀಡುವ ಯೋಜನೆ ಇದಾಗಿದ್ದು,

ಈ ಯೋಜನೆಯ ಸುಗಮ ಅನುಷ್ಠಾನಕ್ಕಾಗಿ ನ್ಯಾಯಾಧೀಶ ಅಡ್ವಕೇಟ್ ಜನರಲ್ (ಜೆ.ಎ.ಜಿ) ಇಲಾಖೆಯಿಂದ ಆನ್ ಲೈನ್ ತರಬೇತಿ ನೀಡಲಾಗುತ್ತಿದ್ದು,

ಪ್ಯಾರಾ–ಲೀಗಲ್–ಸ್ವಯಂಸೇವಕರ ತರಬೇತಿಯನ್ನು ಒರಿಯಂಟೇಶನ್–ಇಂಡಕ್ಷನ್–ರೆಫ್ರೆಶರ್ ಕೋರ್ಸ್ಗಳಿಗೆ ಮೃತ ರಕ್ಷಣಾ ಸಿಬ್ಬಂದಿ ಪತ್ನಿಯರು, ಮಾಜಿ ಸೈನಿಕರು ಮತ್ತು ಅವರ ಅವಲಂಬಿತರು ಹಾಗೂ ಪ್ರಸ್ತುತ ಸೇವೆ ಸಲ್ಲಿಸುತ್ತಿರುವ ರಕ್ಷಣಾ ಸಿಬ್ಬಂದಿಯ ಪತ್ನಿಯರು ಅಥವಾ ಅವರ ವಯಸ್ಕ ಮಕ್ಕಳುಗಳು ಪಡೆಯಬಹುದಾಗಿದೆ.

ಈ ಯೋಜನೆಯ ತರಬೇತಿ ಪಡೆದು ಸ್ವಯಂ ಸೇವಕರಾಗಿ ಸೇವೆ ಸಲ್ಲಿಸಲು ಇಚ್ಛೆಯುಳ್ಳ ಮೃತ ರಕ್ಷಣಾ ಸಿಬ್ಬಂದಿ ಪತ್ನಿಯರು, ಮಾಜಿ ಸೈನಿಕರು ಮತ್ತು ಅವರ ಅವಲಂಬಿತರು ಹಾಗೂ ಪ್ರಸ್ತುತ ಸೇವೆ ಸಲ್ಲಿಸುತ್ತಿರುವ ರಕ್ಷಣಾ ಸಿಬ್ಬಂದಿಯ ಪತ್ನಿಯರು ಅಥವಾ ಅವರ ವಯಸ್ಕ

ಮಕ್ಕಳುಗಳು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಇಲ್ಲಿ ತಮ್ಮ ಹೆಸರನ್ನು ನೋಂದಯಿಸಿಕೊಳ್ಳಬಹುದಾಗಿಯೆಂದು ಉಪನಿರ್ದೇಶಕರು(ಪ್ರಭಾರ), ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಇವರು ತಮ್ಮ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಕಛೇರಿಗೆ ಭೇಟಿ ನೀಡಬಹುದು ಅಥವಾ ದೂರವಾಣಿ ಸಂಖ್ಯೆ: 08182 220925ಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

# ಉಚಿತ ಕೌಶಲ್ಯ ತರಬೇತಿಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಕೈಗಾರಿಕೆ ತರಬೇತಿ ಮತ್ತು ಉದ್ಯೋಗ ಇಲಾಖೆಯು ಯುವನಿಧಿ ಫಲಾನುಭವಿಗಳಿಗೆ ಸಿಎಂಕೆಕೆವೈ ಯೋಜನೆಯಡಿ ಉಚಿತ ಕೌಶಲ್ಯ ತರಬೇತಿಯನ್ನು ಪಡೆಯಲು ಆನ್‌ಲೈನ್ ಅರ್ಜಿ ಆಹ್ವಾನಿಸಿದೆ.

ಜಿಟಿಟಿಸಿ, ಕೆಜಿಟಿಟಿಐ, ಸಿಡಾಕ್, ಮೋಕ್ಷಗುಂಡಂ ಮತ್ತು ಸರ್ಕಾರಿ ಕೈಗಾರಿಕ ತರಬೇತಿ ಸಂಸ್ಥೆಗಳ ಮುಖಾಂತರ ತರಬೇತಿ ನೀಡಲಾಗುತ್ತಿದ್ದು, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವೆಬ್‌ಸೈಟ್ ಮೂಲಕ ನೊಂದಾಯಿಸಿಕೊಳ್ಳುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಪಂಡಿತ್ ದೀನದಯಾಳ ಉಪಾಧ್ಯಾಯ ಜಯಂತಿ ಕಾರ್ಯಕ್ರಮ : ಮಾಜಿ ಕೇಂದ್ರ ಸಚಿವರಾದ ಡಾ. ಜಿ.ಎಂ. ಸಿದ್ದೇಶ್ವರ.



**ದಾವಣಗೆರೆ** : ದಿನಾಂಕ: 25.09.2025ರ ಗುರುವಾರದಂದು ದಾವಣಗೆರೆ ನಗರದ ವಿನೋಬನಗರದ 4ನೇ ಮುಖ್ಯ ರಸ್ತೆ, 4ನೇ ಕ್ರಾಸ್‌ನ ಬೂತ್ ಅಧ್ಯಕ್ಷರಾದ ಶ್ರೀಮತಿ ಪ್ರಮೀಳಾ ಬಾಯಿಯವರ ಅಧ್ಯಕ್ಷತೆಯಲ್ಲಿ ಅವರ ಮನೆಯಲ್ಲಿ ಪಂಡಿತ್ ದೀನದಯಾಳ ಉಪಾಧ್ಯಾಯರವರ ಜಯಂತಿಯನ್ನು ಆಚರಿಸಲಾಯಿತು ಈ ಸಂಧರ್ಭದಲ್ಲಿ ಮಾಜಿ ಕೇಂದ್ರ ಸಚಿವರಾದ ಜಿ.ಎಂ. ಸಿದ್ದೇಶ್ವರರವರು ಪಂಡಿತ್ ದೀನದಯಾಳ ಉಪಾಧ್ಯಾಯರವರು ರಾಜಕೀಯ ಮುಖಂಡರು ಎನ್ನುವುದಕ್ಕಿಂತ ಹೆಚ್ಚಾಗಿ ಓರ್ವ ತತ್ವಜ್ಞಾನಿ, ಮೇಧಾವಿ, ಅರ್ಥಶಾಸ್ತ್ರಜ್ಞ, ಕುಶಲ ಸಂಘಟಕ, ಪ್ರಭಾವಿ ವಕ್ತಾರ ಹಾಗೂ ಸಮರ್ಥ ಲೇಖಕ. ಅವರೊಬ್ಬ ಆದರ್ಶ ರಾಷ್ಟ್ರಸೇವಕ. ಜೀವನದ ಸರ್ವಸ್ವವನ್ನೂ ಸಮರ್ಪಿಸಿಕೊಂಡ ತಾಯ್ನೆಲದ ಉಪಾಸಕ. ಸ್ಪಟಿಕ ಶುಭ್ರ ಚಾರಿತ್ರ್ಯವುಳ್ಳ ಭಾರತಾಂಬೆಯ ಅನನ್ಯ ಆರಾಧಕ. ದೇಶ ಸೇವೆಗೆ ಬದ್ಧರಾದ ಎಲ್ಲ ಪಕ್ಷ-ಪಂಗಡದವರಿಗೂ ಅವರ ಜೀವನ ಮಾರ್ಗದರ್ಶಕ.

ಪ್ರಸ್ತುತ ದೇಶದ ಉನ್ನತಿಗೆ ಕಾರಣಿಭೂತರಾದ ನಮ್ಮೆಲ್ಲರ ನೆಚ್ಚಿನ ಪ್ರಧಾನಿ ಶ್ರೀ ನರೇಂದ್ರ ಮೋದಿಜೀರವರು ಪಂಡಿತ್ ದೀನದಯಾಳ ಉಪಾಧ್ಯಾಯರ ನಡೆ-ನುಡಿಯನ್ನು ಅನುಸರಿಸುತ್ತಿದ್ದಾರೆ ಎಂದು ಮಾತನಾಡಿದರು.

ಈ ಸಂಧರ್ಭದಲ್ಲಿ ಬಿ.ಜೆ.ಪಿ. ಮುಖಂಡರಾದ ಶ್ರೀಮತಿ ಗಾಯಿತ್ರಿ ಸಿದ್ದೇಶ್ವರ, ಮಾಜಿ ಜಿಲ್ಲಾಧ್ಯಕ್ಷರಾದ ಯಶವಂತರಾವ್ ಜಾಧವ್, ಮಾಜಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾದ ಬಿ.ಎಸ್. ಜಗದೀಶ್, ರಾಜ್ಯ ಎಸ್.ಟಿ. ಮೋರ್ಚಾ ಉಪಾಧ್ಯಕ್ಷರಾದ ಶ್ರೀನಿವಾಸ್ ದಾಸಕರಿಯಪ್ಪ, ಮಾಜಿ ದೂಢಾ ಅಧ್ಯಕ್ಷರಾದ ಶಿವಕುಮಾರ್ ರಾಜನಹಳ್ಳಿ, ಎ.ವೈ. ಪ್ರಕಾಶ್, ಮಾಜಿ ಮೇಯರ್ ವಸಂತಕುಮಾರ್, ವೀರೇಶ್ ದೊಗ್ಗಳ್ಳಿ, ಜಯಪ್ರಕಾಶ್, ಎಸ್.ಟಿ. ಯೋಗೇಶ್, ಗುಡ್ಯಪ್ಪ, ಹನುಮಂತರಾವ್, ಗಣೇಶ್‌ರಾವ್, ಯಲ್ಲಪ್ಪ ಪವಾರ್, ರಘು, ಶಾರದ ರಾಯ್ಕರ್, ಮಮತಗೌಡ, ರೂಪಾ, ಗಾಯಿತ್ರಮ್ಮ, ಸಂಗೀತಾ ಮಂಜುನಾಥ್ ಹಾಗೂ ಇನ್ನೂ ಆನೇಕ ಕಾರ್ಯಕರ್ತರು ಭಾಗವಹಿಸಿದ್ದರು.

# ಸಂಘ ಸಂಸ್ಥೆಗಳು ಯಶಸ್ವಿಯಾಗಿ ನಡೆಯಲು ಸದಸ್ಯರು, ನಿರ್ದೇಶಕರೇ ಪಿಲ್ಲರ್: ಬಿ.ಕೆ ರುದ್ರಪ್ಪ



**ಹಾಸನ:** ಒಂದು ಸಂಘ ಅಥವಾ ಸಂಸ್ಥೆಗಳು ಯಶಸ್ವಿಯಾಗಿ ಮುನ್ನಡೆಯಲು ಆ ಸಂಘದ ನಿರ್ದೇಶಕರು ಮತ್ತು ಸದಸ್ಯರೇ ಶಕ್ತಿ ಎಂದು ಹೊಯ್ಸಳ ರಾಜ್ಯ ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘದ ಅಧ್ಯಕ್ಷ ಬಿ.ಕೆ ರುದ್ರಪ್ಪ ಹೇಳಿದರು.

ನಗರದ ಎಂ.ಜಿ ರಸ್ತೆಯಲ್ಲಿ ಇರುವ ವಿಶ್ವೇಶ್ವರಯ್ಯ ಭವನದಲ್ಲಿ ಇಂದು ಆಯೋಜಿಸಲಾಗಿದ್ದ ಹೊಯ್ಸಳ ರಾಜ್ಯ ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಹಾಗೂ ಪ್ರತಿಭಾ ಪುರಸ್ಕಾರ ಮತ್ತು ಉತ್ತಮ ಸೇವೆ ಸಲ್ಲಿಸಿದ ನೌಕರರಿಗೆ ಸನ್ಮಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಕಳೆದ ಮೂರು ವರ್ಷಗಳಿಂದ ಸಂಘ ಸ್ಥಾಪನೆಯಾದ ಉದ್ದೇಶದಂತೆ ಪಾರದರ್ಶಕ ಆಡಳಿತ ಮಾಡಿಕೊಂಡು ಸಂಘದ ಪದಾಧಿಕಾರಿಗಳಿಗೆ ಕಡಿಮೆ ಬೆಲೆಯಲ್ಲಿ ಗುಣಮಟ್ಟದ ಕಾಮಗಾರಿಯ ಮೂಲಕ ಸುಸಜ್ಜಿತ ಬಡಾವಣೆ ನಿರ್ಮಾಣ ಮಾಡಿ ನಿವೇಶನಗಳನ್ನು ಒದಗಿಸುತ್ತಾ ಬಂದಿದೆ ಮುಂದಿನ ದಿನಗಳಲ್ಲಿಯೂ ಇದೇ ರೀತಿ ಮುಂದುವರೆಯಲು ಎಲ್ಲರ ಸಹಕಾರ ಅಗತ್ಯ ಎಂದರು.

ಈ ಮೂರು ವರ್ಷಗಳ ಕಾಲ ಸಂಘ ಯಶಸ್ವಿಯಾಗಿ ಮುನ್ನಡೆಯಲು ಎಲ್ಲಾ ಸದಸ್ಯರು ಹಾಗೂ ನಿರ್ದೇಶಕರು ಹೆಗಲಿಗೆ ಹೆಗಲುಕೊಟ್ಟ ಪರಿಣಾಮ ಇಂದು ಸಂಘ ಉತ್ತಮವಾಗಿ ನಡೆದುಕೊಂಡು ಬರುತ್ತಿದೆ ಮುಂದಿನ ದಿನಗಳಲ್ಲಿಯೂ ಸಂಘದ ನೇತೃತ್ವ ವಹಿಸುವವರು ಇದೇ ರೀತಿ ಯಶಸ್ವಿಯಾಗಿ ಪಾರದರ್ಶಕ ಆಡಳಿತ ನಡೆಸಿಕೊಂಡು ಹೋಗಲಿ ಎಂದು ಹಾರೈಸಿದರು.

ಸಂಘದ ಉಪಾಧ್ಯಕ್ಷ ಡಾ. ಲಕ್ಷ್ಮಿಕಾಂತ್ ಮಾತನಾಡಿ ಸಂಘದ ಆಯವ್ಯಯ, ಲಾಭ - ನಷ್ಟ, ಮುಂದಿನ

ಕಾರ್ಯಯೋಜನೆಗಳ ಬಗ್ಗೆ ವಿವರಿಸಿ ಮುಂದಿನ ದಿನಗಳಲ್ಲಿಯೂ ಇನ್ನಷ್ಟು ಹೊಸ ಬಡಾವಣೆ ನಿರ್ಮಿಸಿ ಸಂಘದ ಸದಸ್ಯರಿಗೆ ಹಸ್ತಾಂತರ ಮಾಡಲು ಎಲ್ಲರ ಸಹಕಾರ ಅಗತ್ಯ ಎಂದರು.

ಕಾರ್ಯಕ್ರಮದಲ್ಲಿ ಹೊಯ್ಸಳ ರಾಜ್ಯ ಸರ್ಕಾರಿ ನೌಕರರ ಗ್ರಹ ನಿರ್ಮಾಣ ಸಹಕಾರ ಸಂಘದ ಸದಸ್ಯರು ಹಾಗೂ ನಿರ್ದೇಶಕರ ಪ್ರತಿಭಾನ್ವಿತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು, ಜೊತೆಗೆ ಉತ್ತಮ ಸೇವೆ ಸಲ್ಲಿಸಿದ ನೌಕರರಿಗೆ ಸನ್ಮಾನಿಸಿ ಗೌರವಿಸಲಾಯಿತು ಮತ್ತು ಐಡಿ ಕಾರ್ಡ್ ವಿತರಣೆಯನ್ನು ಮಾಡಲಾಯಿತು.

ಕಾರ್ಯಕ್ರಮದಲ್ಲಿ ಕಂಚಮಾರನಹಳ್ಳಿ ಕಾಂತರಾಜ್, ವಿನೇಶ್, ಪದ್ಮರಾಜ್, ಕೆ.ಆರ್ ಮಂಜೇಗೌಡ, ರುದ್ರೇಶ್, ಗೋಪಾಲ್, ಶಿವಾನಂದ್ ನಾಯಕ್, ಸತ್ಯನಾರಾಯಣ, ಕೆ.ಪಿ ಮಂಜುನಾಥ್, ಮುಷ್ತಾಕ್ ಅಹಮ್ಮದ್ ಶೇಕ್, ವಾಸೀಮ್ ಷರೀಫ್, ಚನ್ನಕೇಶವ, ಕೃಷ್ಣಮೂರ್ತಿ, ತಮ್ಮಣ್ಣ ಶೆಟ್ಟಿ, ಶಿವಸ್ವಾಮಿ, ಸಿ.ಎನ್ ಉಷಾ, ರಘು ಇತರರು ಉಪಸ್ಥಿತರಿದ್ದರು.

## ವಿಶ್ವರೇಬೀಸ್ ದಿನಾಚರಣೆ-2025 ರ ಅಂಗವಾಗಿ ಪಶುವೈದ್ಯಕೀಯ ಕಾಲೇಜು, ಹಾಸನದಲ್ಲಿ ಸಾಕುಪ್ರಾಣಿಗಳಿಗೆ ಉಚಿತ ರೇಬೀಸ್ ಲಸಿಕಾ ಕಾರ್ಯಕ್ರಮ

"ರೇಬೀಸ್" ಅಥವಾ ಹುಚ್ಚುನಾಯಿ ರೋಗ ಅತ್ಯಂತ ಮಾರಣಾಂತಿಕ ರೋಗವಾಗಿದ್ದು, ವಿಶ್ವದಾದ್ಯಂತ ಪ್ರತಿ ವರ್ಷ 55 ಸಾವಿರಕ್ಕೂ ಹೆಚ್ಚು ಜನರು ಈ ರೋಗಕ್ಕೆ ಬಲಿಯಾಗುತ್ತಿದ್ದಾರೆ. ಈ ರೋಗದ ವಿರುದ್ಧ ಪ್ರಪ್ರಥಮವಾಗಿ ಲಸಿಕೆ ಕಂಡು ಹಿಡಿದು ಮನುಕುಲಕ್ಕೆ ಶ್ರೇಷ್ಠ ಕೊಡುಗೆ ನೀಡಿದ ಜಗದ್ವಿಖ್ಯಾತ ವಿಜ್ಞಾನಿ ಲೂಯಿ ಪ್ಯಾಶ್ಚರ್‌ರವರ ಸ್ಮರಣಾರ್ಥವಾಗಿ ಪ್ರತಿವರ್ಷ ಸೆಪ್ಟೆಂಬರ್ 28 ರಂದು ವಿಶ್ವರೇಬೀಸ್ ದಿನವನ್ನು ಆಚರಿಸಲಾಗುತ್ತದೆ. ಹಾಸನ ಪಶುವೈದ್ಯಕೀಯ ಮಹಾವಿದ್ಯಾಲಯವು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ, ಹಾಸನ ಇವರ ಸಹಯೋಗದೊಂದಿಗೆ ದಿನಾಂಕ: 29.09.2025 ರಂದು ವಿಶ್ವ ಹುಚ್ಚು ನಾಯಿ ರೋಗ ದಿನಾಚರಣೆಯನ್ನು ಆಯೋಜಿಸಲಾಗಿದ್ದು, ನಾಯಿ, ಬೆಕ್ಕು ಮತ್ತಿತರ ಸಾಕುಪ್ರಾಣಿಗಳಿಗೆ ಉಚಿತ ರೇಬೀಸ್ ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಹಾಸನ ಜಿಲ್ಲೆಯ ಪ್ರಾಣಿಪ್ರಿಯರು ಈ ಕಾರ್ಯಕ್ರಮವನ್ನು ಸದುಪಯೋಗ ಪಡೆದುಕೊಳ್ಳಲು ಮಹಾವಿದ್ಯಾಲಯದ ಡೀನ್ ಪ್ರೊ. ಓ.ಆರ್. ನಟರಾಜುರವರು ಕರೆನೀಡಿದ್ದಾರೆ.

## ಜಾಗತಿಕ ವಿಜ್ಞಾನಿಗಳ ಪಟ್ಟಿಯಲ್ಲಿ ಸಂಜಯ್

**ಹಾಸನ:** ಸದ್ಯಥೈಲ್ಯಾಂಡ್‌ನಕಿಂಗ್ ಮಾಂಗ್‌ಕುಟ್ಸ್‌ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಸಂಶೋಧನಾ ವಿಜ್ಞಾನಿ ಹಾಗೂ ಸಹ ಪ್ರಾಧ್ಯಾಪಕರಾಗಿಕಾರ್ಯನಿರ್ವಹಿಸುತ್ತಿರುವಚನ್ನರಾಯಪಟ್ಟಣ ಮೂಲದಡಾ.ಸಂಜಯ್ ಎಂ ಆರ್‌ಅವರು, ನೆದರ್‌ಲ್ಯಾಂಡ್ ಮೂಲದ ಪ್ರಕಾಶನ ಸಂಸ್ಥೆ ಎಲ್ಸ್‌ವಿಯರ್ ಹೊರತರುವಅತಿ ಹೆಚ್ಚು ಉಲ್ಲೇಖಿಸಲ್ಪಟ್ಟ ವಿಶ್ವದಅಗ್ರ 2 ಪ್ರತಿಶತ ವಿಜ್ಞಾನಿಗಳ ಪಟ್ಟಿಯ ಮೆಟೀರಿಯಲ್ ವಿಭಾಗದಲ್ಲಿ ಸ್ಥಾನ ಪಡೆದಿದ್ದಾರೆ.

ಕಾಂಪೋಸಿಟ್ಸ್ ಕ್ಷೇತ್ರದಲ್ಲಿ ಸಂಶೋಧನೆ ನಡೆಸುತ್ತಿರುವಡಾ.ಸಂಜಯ್ ಎಂ ಆರ್‌ಅವರ 425ಕ್ಕೂ ಹೆಚ್ಚು ಸಂಶೋಧನಾ ಪ್ರಬಂಧಗಳು ಅಂತಾರಾಷ್ಟ್ರೀಯ ಮನ್ನಣೆ ಪಡೆದ ಸಂಶೋಧನಾ ಪತ್ರಿಕೆಗಳಲ್ಲಿ ಪ್ರಕಟಗೊಂಡಿವೆ. ಸಂಪಾದಕರಾಗಿತಮ್ಮ ಸಂಶೋಧನಾಕ್ಷೇತ್ರಕ್ಕೆ ಸಂಬಂಧಿಸಿದ 60 ಪುಸ್ತಕಗಳನ್ನು ರೂಪಿಸಿದ್ದಾರೆ. ಈ ಪಟ್ಟಿಯಲ್ಲಿ ಕಳೆದ ಆರು ವರ್ಷಗಳಿಂದ ಸತತವಾಗಿ ಸ್ಥಾನ ಪಡೆಯುತ್ತಿದ್ದಾರೆ.

## ತೋಟಗಾರಿಕೆ ಬೆಳೆಗಳ ಅಭಿವೃದ್ಧಿಗೆ ಹೆಸರು ನೋಂದಣಿ ಕಡ್ಡಾಯ

**ಚಿಕ್ಕಬಳ್ಳಾಪುರ:** 2026-27ನೇ ಸಾಲಿನ ಮಹಾತ್ಮಾ ಗಾಂಧಿ ಉದ್ಯೋಗ ಖಾತರಿ ಯೋಜನೆಯಡಿ ತಮ್ಮ ಜಮೀನಿನಲ್ಲಿ ಹೊಸದಾಗಿ ಗುಲಾಬಿ, ದ್ರಾಕ್ಷಿ ಮತ್ತು ದಾಳಿಂಬೆ ಹಾಗೂ ಇತರೆ ಬಹುವಾರ್ಷಿಕ ತೋಟಗಾರಿಕೆ ಬೆಳೆಗಳನ್ನು ಅಭಿವೃದ್ಧಿಪಡಿಸಲು ಇಚ್ಚಿಸುವ ಫಲಾನುಭವಿಗಳು ಅಕ್ಟೋಬರ್ 2 ರಿಂದ ಗ್ರಾಮ ಪಂಚಾಯತಿಗಳಲ್ಲಿ ಆರಂಭವಾಗುವ ಗ್ರಾಮ ಸಭೆಗಳಲ್ಲಿ ತಮ್ಮ ಹೆಸರುಗಳನ್ನು ನೊಂದಾಯಿಸುವುದು ಕಡ್ಡಾಯವಾಗಿರುತ್ತದೆ,ನಂತರ ಹೆಸರುಗಳನ್ನು ಸೇರ್ಪಡೆ ಮಾಡಲು ಅವಕಾಶವಿರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಇಲಾಖೆಯ ಅಧಿಕಾರಿಗಳಾದ ಲಕ್ಷ್ಮೀಪತಿ.ಎನ್ (ಕಸಬಾ & ಮಂಡಿಕಲ್ಲು ಹೋಬಳಿ) 9742697571, ಸೋಫಿಯಾ ಸುಲ್ತಾನ (ನಂದಿ ಹೋಬಳಿ) 9844365534, ನಿತಿನ್ .ಡಿ.ವಿ (ಸಹಾಯಕ ತೋಟಗಾರಿಕೆ ನಿರ್ದೇಶಕರು) 9620069249, ರಮೇಶ್ ಎನ್ (ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು) 8073334003 ಗೆ ಸಂಪರ್ಕಿಸಬಹುದೆಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೈದ್ಯಕೀಯ ಚಿಕಿತ್ಸೆ ನೊಂದಣಿ

**ಚಿತ್ರದುರ್ಗ:** ಸಮಾಜ ಕಲ್ಯಾಣ ಇಲಾಖೆ ವಸತಿ ನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಡುಗೆ ಸಹಾಯಕರು ಹಾಗೂ ರಾತ್ರಿ ಕಾವಲುಗಾರರಿಗೆ ವೈದ್ಯಕೀಯ ಚಿಕಿತ್ಸೆ ಸೌಲಭ್ಯ ನೀಡಲಾಗುತ್ತಿದೆ. ಈ ಹಿನ್ನಲೆಯಲ್ಲಿ ನಗರದ ಸರ್ಕಾರಿ ಮೆಟ್ರಿಕ್ ನಂತರ ಬಾಲಕಿಯರ ಎ ವಸತಿ ನಿಲಯದಲ್ಲಿ ಸೆ.27 ರಂದು ಬೆಳ್ಳಿಗೆ 10:30 ರಿಂದ ಚಿತ್ರದುರ್ಗ ತಾಲ್ಲೂಕು ವ್ಯಾಪ್ತಿಯ ಅಡುಗೆ ಸಹಾಯಕರು ಹಾಗೂ ರಾತ್ರಿ ಕಾವಲುಗಾರರಿಗೆ ವೈದ್ಯಕೀಯ ಚಿಕಿತ್ಸೆಗೆ ನೊಂದಣಿ ಅವಕಾಶ ಕಲ್ಪಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಸ್ವ ಸ್ಥನಾರಿ ಸಶಕ್ತ ಪರಿವಾರ ಅಭಿಯಾನದ ಸದುಪಯೋಗ ಪಡೆಯಲು ಡಾ. ಮುಕುಂದ ಗಲಗಲಿ ಮಹಿಳಾ ಸಂಕುಲಕ್ಕೆ ಕರೆ

**ಗದಗ:** ಸ್ವ ಸ್ಥನಾರಿ ಸಶಕ್ತ ಪರಿವಾರ ಒಂದು ಉಪಯುಕ್ತ ಆರೋಗ್ಯ ಅಭಿಯಾನ ಆಗಿದ್ದು ಇದರ ಸದುಪಯೋಗವನ್ನ ಮಹಿಳಾ ಸಂಕುಲ ಪಡೆಯಬೇಕೆಂದು ವಿಶ್ವ ಆರೋಗ್ಯ ಸಂಸ್ಥೆಯ ವಿಜಯಪುರ ವಲಯದ ಸಮೀಕ್ಷಾ ಆರೋಗ್ಯ ಅಧಿಕಾರಿಗಳಾದ ಡಾ. ಮುಕುಂದ ಗಲಗಲಿ ಅವರು ಕರೆ ನೀಡಿದರು. ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ ತಾಲೂಕ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಮುದಾಯ ಆರೋಗ್ಯ ಕೇಂದ್ರ ಬೆಟಗೇರಿ ಇವುಗಳ ಸಂಯುಕ್ತ ಆಶ್ರಯದಲ್ಲಿ ಬೆಟಗೇರಿಯ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಏರ್ಪಡಿಸಲಾಗಿದ್ದ ಸ್ವಸ್ಥನಾರಿ ಶಸಕ್ತ ಪರಿವಾರ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ತಾಲೂಕ ಆರೋಗ್ಯ ಅಧಿಕಾರಿಗಳಾದ ಡಾ. ಪ್ರೀತ್ ಖೋನಾ ಅವರು ಮಾತನಾಡಿ ಇದೊಂದು ಉತ್ತಮ ಅವಕಾಶವಾಗಿದ್ದು, ಈ ಅಭಿಯಾನದಲ್ಲಿ ಮಹಿಳೆಯರ ಆರೋಗ್ಯ ಸಮಸ್ಯೆಗಳ ಜೊತೆಗೆ ಮಧುಮೇಹ ಕ್ಯಾನ್ಸರ್ ಕ್ಷಯರೋಗ ಮುಂತಾದ ರೋಗಗಳ ಕುರಿತು ಚಿಕಿತ್ಸೆ ನೀಡಲಾಗುತ್ತಿದೆ ಎಂದರು. ಉಪನ್ಯಾಸಕರಾಗಿ ಆಗಮಿಸಿದ್ದ ಗದಗ ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಡಾ. ರಾಜೇಂದ್ರ ಎಸ್ ಗಡಾದ ಅವರು ಮಾತನಾಡಿ ನಮ್ಮ ಭಾರತೀಯ ಸಂಸ್ಕೃತಿಯಲ್ಲಿ ಮಹಿಳೆಗೆ ಅತ್ಯುತ್ತಮ ಸ್ಥಾನವನ್ನು ಕಲ್ಪಿಸಲಾಗಿದ್ದು ಮಹಿಳೆ ಇಡೀ ಕುಟುಂಬದ ಆಧಾರ ಸ್ತಂಭವಾಗಿದ್ದು ಅವರ ಆರೋಗ್ಯವೇ ತುಂಬಾ ಮುಖ್ಯವಾದುದಾಗಿದೆ. ಕುಟುಂಬದ ಮಹಿಳೆಯರು ಆರೋಗ್ಯವಾಗಿದ್ದರೆ ಇಡೀ ಕುಟುಂಬವೇ ಆರೋಗ್ಯವಾಗಿರುತ್ತದೆ ಎಂದು ತಿಳಿಸುತ್ತಾ ಅಭಿಯಾನದ ಉದ್ದೇಶ ಮಹತ್ವವನ್ನ ವಿವರಿಸಿದರು. ಆರಂಭದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಸಿದ್ದಪ್ಪ ಲಿಂಗದಾಳ ಸರ್ವರನ್ನು ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು ಪ್ರವೀಣ್ ರಾಮಗಿರಿ ವಂದಿಸಿದರು ವೇದಿಕೆ ಮೇಲೆ ತಜ್ಞ ವೈದ್ಯರುಗಳಾದ ಡಾ. ಸಚಿನ್ ಡಾ. ರಾಘವೇಂದ್ರ ಡಾ॥ ಶ್ರೀದೇವಿ ಡಾ॥ ಓಂಕಾರ್, ಡಾ. ಮಂಜುನಾಥ್ ಡಾ ಪ್ರವೀಣ್ ಡಾ.ಸ್ಪರ್ಷಾ ಚನ್ನಪ್ಪಗೌಡರ ಉಪಸ್ಥಿತರಿದ್ದರು ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯ ವಾಯ್ ವಾಯ್ ಹಕ್ಕಿ ಶ್ರೀ ಎಸ್ ಬಿ ಗಡಾದ ಶ್ರೀಮತಿ ಶ್ವೇತಾ ದೇಸಾಯಿ ಮಂಜುನಾಥ್ ಭಂಡಾರಿ ಶ್ರೀಮತಿ ಸುನಂದ ಶಿಶುವಿನಹಳ್ಳಿ ಶಕುಂತಲಾ ಎನ್ ಹೊಸಮನಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು

## ಚಾಲುಕ್ಯನಗರದ ಶ್ರೀ ಚೌಡೇಶ್ವರಿ ಅಮ್ಮನವರಿಗೆ ತಾಂಬೂಲ ಅಲಂಕಾರ

**ಶಿವಮೊಗ್ಗ** : ನಗರದ ಚಾಲುಕ್ಯನಗರದಲ್ಲಿರುವ ಶ್ರೀ ಚೌಡೇಶ್ವರಿ ದೇವಿಗೆ

ಸೆ.26ರಂದು ಶ್ರೀಮತಿ ಗೀತಾ ಶ್ರೀ ನಾಗೇಶ್ ಕುಟುಂಬದವರಿಂದ ಲಕ್ಷ್ಮೀನಾರಾಯಣ ಹೃದಯ ಹೋಮ, ಶ್ರೀಮತಿ ಭವಾನಿ ಶ್ರೀ ಶಶಿಧರ ಕುಟುಂಬದವರಿಂದ ತಾಂಬೂಲ ಅಲಂಕಾರ ನೆರವೇರಿಸಲಾಯಿತು.

ಸೆ. 27ರಂದು ಶ್ರೀಮತಿ ಲಲಿತಾ ಶ್ರೀ ದ್ರೋಣಾಚಾರ್ಯ ಕುಟುಂಬದವರಿಂದ ಲಲಿತಾ ಹೋಮ, ಶ್ರೀಮತಿ ಲಲಿತಮ್ಮ ಶ್ರೀ ಯಲಪ್ಪ ಕುಟುಂಬದವರಿಂದ ರೇಣುಕಾದೇವಿ ಅಲಂಕಾರ ಏರ್ಪಡಿಸಲಾಗಿದೆ.

ಅದೇ ದಿನ ಸಂಜೆ 6.30 ರಿಂದ ಶ್ರೀ ಅನುಗ್ರಹ ನೃತ್ಯ ತಂಡ ಶ್ರೀಮತಿ ಸುಷ್ಮಾ ತಂಡದವರಿಂದ ಭರತನಾಟ್ಯ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರಾತ್ರಿ 8.00 ರಿಂದ ಶ್ರೀಮತಿ ಉಮಾ ಶ್ರೀ ಲೋಹಿತ ಕುಟುಂಬದವರಿಂದ ಉಯ್ಯಾಲೇ ಸೇವೆ ಹಮ್ಮಿಕೊಳ್ಳಲಾಗಿದೆ. 8.30ಕ್ಕೆ ಮಹಾಮಂಗಳಾರತಿ ತೀರ್ಥ ಪ್ರಸಾದ ವಿನಿಯೋಗ ವಿರುತ್ತದೆ

ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾಗಬೇಕಾಗಿ ಆಡಳಿತ ಮಂಡಳಿ ಕೋರಿದ್ದಾರೆ




ಹೆಚ್ಚಿನ ಮಾಹಿತಿಗಾಗಿ : ಚೇತನಭಟ್ 9980247081, ಕೆ. ಶೇಖರ 9448888129 ಸಂಪರ್ಕಿಸಬಹುದು.

## ದಕ್ಷ ಹಾಗೂ ಪ್ರಾಮಾಣಿಕ ಗದಗ ಪಿ.ಎಸ್.ಐ ಮಾರುತಿ ಜೋಗದಂಡ್ಕರ ಅವರಿಗೆ ಸವಿತಾ ಸಮಾಜದಿಂದ ಸನ್ಮಾನ



**ಗದಗ** : ದಕ್ಷ ಹಾಗೂ ಪ್ರಾಮಾಣಿಕ ಪೊಲೀಸ್ ಅಧಿಕಾರಿಗಳು ಮತ್ತು ಗದಗ ಪಿ.ಎಸ್.ಐ ಮಾರುತಿ ಜೋಗದಂಡ್ಕರ ಅವರು ಪೊಲೀಸ್ ಇಲಾಖೆಯಲ್ಲಿ ತನ್ನದೇ ಆದ ವೈಶಿಷ್ಟತೆಯನ್ನು ರೂಡಿಸಿಕೊಂಡು ಬಂದಿದ್ದಾರೆ ಇವರು ಒಬ್ಬ ಸಮರ್ಥ ಪೊಲೀಸ್ ಅಧಿಕಾರಿ ಎಂದರೆ ತಪ್ಪಲಾಗಲಾರದು ಎಂದು ಗದಗ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷರಾದ ಕೃಷ್ಣಾ ಎಚ್ ಹಡಪದ ಅಭಿಮಾನದಿಂದ ಮಾತನಾಡಿದರು ಅವರು ರಾಷ್ಟ್ರಪತಿ ಪದಕಕ್ಕೆ ಭಾಜನರಾದ ಗದಗ ಶಹರ ರಾಜೀವಗಾಂದಿ ನಗರ ಬಡಾವಣೆಯ ಪೊಲೀಸ್ ಸಬ್‌ಇನ್ಸಪೆಕ್ಟರ್ ಮಾರುತಿ ಜೋಗದಂಡ್ಕರ ರವರಿಗೆ ವಿ.ಡಿ.ಎಸ್.ಟಿ.ಸಿ. ಮೈಧಾನದಲ್ಲಿ ಗದಗ ಜಿಲ್ಲಾ ಸವಿತಾ ಸಮಾಜದಿಂದ ಹಮ್ಮಿಕೊಂಡ ಸಮಾಜದ ಗೌರವ ಸನ್ಮಾನ ಸಲ್ಲಿಸಿ ಮಾತನಾಡಿ ಸರ್ಕಾರಿ ಕೆಲಸ ದೇವರ ಕೆಲಸ ಎಂದು ನಂಬಿ ಕರ್ತವ್ಯ ನಿರ್ವಹಿಸುತ್ತಿರುವ ಪೋಲಿಸ್ ಸಬ್‌ಇನ್ಸಪೆಕ್ಟರ್ ಮಾರುತಿ ಜೋಗದಂಡ್ಕರ ಇವರ ವೃತ್ತಿಕಾರ್ಯ ಪ್ರತಿಯೊಬ್ಬ ಪೊಲೀಸರಿಗೆ ಹಿಡಿದ ಕೈಗನ್ನಡಿಯಂತಿದೆ ಎಂದರಲ್ಲದೆ ಇಗಾಗಲೇ ಗದಗನಲ್ಲಿ ಪಿ.ಎಸ್.ಐ ಆಗಿ, ಅತ್ಯಂತ ಪ್ರಾಮಾಣಿಕತೆ, ದಕ್ಷತೆಯಿಂದ ಸೇವೆ ಸಲ್ಲಿಸುತ್ತಾ ಸ್ಥಳಿಯ ಸವಿತಾ ಸಮಾಜ ಸೇರಿದಂತೆ ಗದಗ ಜಿಲ್ಲೆಯ ಸಮಸ್ತ ಸಾರ್ವಜನಿಕರ ಪ್ರಶಂಸೆಗೆ ಪಾತ್ರರಾಗಿ ಕರ್ತವ್ಯ ನಿರ್ವಹಿಸುತ್ತಿರುವುದಕ್ಕೆ ಮತ್ತು ರಾಷ್ಟಪತಿ ಪದಕಕ್ಕೆ ಭಾಜನರಾಗಿದ್ದಕ್ಕೆ ಪೋಲಿಸ್ ಸಬ್‌ಇನ್ಸಪೆಕ್ಟರ್ ಮಾರುತಿ ಜೋಗದಂಡ್ಕರ ರವರಿಗೆ ಪನಸ್ಪೂರ್ವಕವಾಗಿ ಅಭಿನಂದನಾರ್ಹ ಎಂದು ಗದಗ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷರಾದ ಕೃಷ್ಣಾ ಎಚ್ ಹಡಪದ ತಿಳಿಸಿದರು ಪಿ.ಎಸ್.ಐ. ಮಾರುತಿ ಜೋಗದಂಡ್ಕರ ಅವರು ಗದಗ ಜಿಲ್ಲಾ ಸವಿತಾ ಸಮಾಜದಿಂದ ಸಲ್ಲಿಸಿದ ಗೌರವ ಸನ್ಮಾನ ಸ್ವೀಕರಿಸಿ ಮಾತನಾಡಿ, ನಗರದ ಮಹಾಜನತೆಯ ಹಿತಕಾಯುವಂತಹ ಸೇವೆ ನಮ್ಮ ಆದ್ಯ ಕರ್ತವ್ಯ ಮತ್ತು ಪ್ರತಿಯೊಬ್ಬರಲ್ಲೂ ಪರೋಪಕಾರ, ತ್ಯಾಗ ಮನೋಭಾವನೆ. ಸೌಹಾರ್ದತೆಯಿಂದ ಬದುಕುವ ಗುಣಗಳ ಅಗತ್ಯವಿದೆ. ಅದೇ ರೀತಿ ಸವಿತಾ ಸಮಾಜ ಆರ್ಥಿಕವಾಗಿ, ಸಾಮಾಜಿಕ, ಹಾಗೂ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಬೇಕು. ಸಮಾಜದ ಪ್ರಗತಿಗೆ ಸದಾ ನನ್ನ ಸಹಕಾರ ಇರುತ್ತದೆ ಎಂದು ಪೋಲಿಸ್ ಸಬ್‌ಇನ್ಸಪೆಕ್ಟರ್ ಮಾರುತಿ ಜೋಗದಂಡ್ಕರ ಅವರು ಹೇಳಿದರು ಈ ಸದರ್ಭದಲ್ಲಿ ಹಿರಿಯರಾದ ಹನಮಂತಪ್ಪ ರಾಂಪೂರ. ನಾಸೀರ ಮುಲ್ಲಾ. ಪರಶುರಾಮ (ಬಜ್ಜಣ್ಣ) ರಾಂಪೂರ. ಖಜಾಂಚಿ ಅರೂಣ ರಾಂಪೂರ. ಬಾಲರಾಜ ಕೊಟೇಕಲ್ಲ. ದೀಪಕ ಮಾನೆ.ಪಾಂಡು ಕಾಳೆ. ಮರಾಠ ಕ್ಷೌರಿಕ ಸಮಾಜದ ಅಧ್ಯಕ್ಷರಾದ ವಿಕಾಸ ಕ್ಷೀರಸಾಗರ. ಸುಧೀರ ಮಾನೆ. ಗದಗ ಸವಿತಾ ಸಮಾಜ ಸುಧಾರಣಾ ಸಂಘದ ಅಧ್ಯಕ್ಷರಾದ ಪರಶುರಾಮ ಕೊಟೇಕಲ್ಲ. ಉಪಾಧ್ಯಕ್ಷರಾದ ಜಂಮ್ಮಣ್ಣ ಕಡಮೂರ. ಜಿಲ್ಲಾ ಸಲಹಾ ಸಮಿತಿ ಅಧ್ಯಕ್ಷರಾದ ರಮೇಶ ರಾಂಪೂರ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಮಂಜುನಾಥ ಮಾನೆ. ಹಿರಿಯ ಪದಾಧಿಕಾರಿಗಳಾದ ತುಕಾರಾಮ ಮಾನೆ.

ವಿಶಾಲ ಮಾನೆ. ಧಿನೇಶ ಕ್ಷೀರಸಾಗರ. ಹೇಮಂತ ವಡ್ಡೆಪಲ್ಲಿ. ಶ್ರೀನಿವಾಸ ಕೊಟೇಕಲ್ಲ. ಸುರೇಶ ಬುದೂರ. ಪರಶುರಾಮ ದಾವಣಗೇರಿ. ಯುವನಾಯಕರಾದ ವಿಕ್ರಮ ಕ್ಷೀರಸಾಗರ. ಗಣೇಶ ಕಡಮೂರ. ಪ್ರಕಾಶ ಬುದೂರ. ಸುನೀಲ ರಾಯಚೂರ. ಕೃಷ್ಣಾ ಬುದೂರ. ವೆಂಕಟೇಶ ಕೊಟೇಕಲ್ಲ. ವಿಜಯ ಬುದೂರ. ತುಕಾರಾಮ ವಡ್ಡೆಪಲ್ಲೆ. ರಾಹೂಲ ಕೊಟೊಕಲ್ಲ. ಆದರ್ಶ ಮಾನೆ. ರಾಹೂಲ ಮೋಮ್ಮಗ. ವಿನಾಯಕ ರಾಯಚೂರ. ಹಾಗೂ ಸಮಾಜದ ನೂರಾರು ಬಾಂಧವರು ಉಪಸ್ತಿತರಿದ್ದರು

## ಜಿಲ್ಲಾ ಯಾದವ ಗೊಲ್ಲರ ಸಂಘದ ಆಡಳಿತಾಧಿಕಾರಿಯಾಗಿ ಉಪವಿಭಾಗಾಧಿಕಾರಿ ನೇಮಕ

**ಚಿತ್ರದುರ್ಗ:** ಸರ್ಕಾರದ ಆದೇಶದಂತೆ ಚಿತ್ರದುರ್ಗ ಜಿಲ್ಲಾ ಯಾದವ ಗೊಲ್ಲರ ಸಂಘಕ್ಕೆ ಆಡಳಿತಾಧಿಕಾರಿಯನ್ನಾಗಿ ಉಪವಿಭಾಗಾಧಿಕಾರಿ ಮಹಬೂಬ್ ಜಿಲಾನಿ ಖುರೇಷಿ ಅವರನ್ನು 2025ರ ಸೆಪ್ಟೆಂಬರ್ 27 ರಿಂದ 6 ತಿಂಗಳ ಅವಧಿಗೆ ವಿಸ್ತರಿಸಿ ಆದೇಶಿಸಲಾಗಿದೆ.

ಕಚೇರಿಯ ಎಲ್ಲಾ ಪತ್ರ ವ್ಯವಹಾರಗಳು, ಸಭೆ-ಸಮಾರಂಭಗಳು ಮತ್ತು ಬ್ಯಾಂಕು ಹಾಗೂ ಹಣಕಾಸಿನ ಎಲ್ಲಾ ವ್ಯವಹಾರಗಳನ್ನು ಮತ್ತು ಕಚೇರಿ ವ್ಯವಹಾರಕ್ಕೆ ಸಂಬಂಧಿಸಿದಂತೆ ಆಡಳಿತಾಧಿಕಾರಿಗಳು, ಜಿಲ್ಲಾ ಯಾದವ (ಗೊಲ್ಲರ) ಸಂಘ (ರಿ), ರಂಗಯ್ಯನಬಾಗಿಲು ಬಳಿ, ಚಿತ್ರದುರ್ಗ ಹಾಗೂ ಉಪವಿಭಾಗಾಧಿಕಾರಿಗಳು, ಚಿತ್ರದುರ್ಗ ಉಪವಿಭಾಗ ಅವರನ್ನು ಸಂಪರ್ಕಿಸಬಹುದು ಎಂದು ಉಪವಿಭಾಗಾಧಿಕಾರಿಗಳು ತಿಳಿಸಿದ್ದಾರೆ.

## ವಿಶ್ವ ಪ್ರವಾಸೋದ್ಯಮ ದಿನಾಚರಣೆ ಕಾರ್ಯಕ್ರಮ

**ಬಳ್ಳಾರಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪ್ರವಾಸೋದ್ಯಮ ಇಲಾಖೆ ಹಾಗೂ ಹೋಟೆಲ್ ಮಾಲೀಕರ ಸಂಘ ಇವರ ಸಹಯೋಗದೊಂದಿಗೆ ಸೆ.27 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಐತಿಹಾಸಿಕ ಕೋಟೆ ಮುಂಭಾಗದಲ್ಲಿ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಸೆ.26 ರಂದು ಬೆಳಿಗ್ಗೆ 07 ಗಂಟೆಗೆ ನಗರದ ಐತಿಹಾಸಿಕ ಕೋಟೆ ಪ್ರವೇಶ ದ್ವಾರದಿಂದ ಬಳ್ಳಾರಿ ಕೋಟೆಯ ಪಾರಂಪರಿಕಾ ನಡಿಗೆ ಆಯೋಜಿಸಲಾಗಿದೆ.

ವಸತಿ ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಹಾಗೂ ಬಳ್ಳಾರಿ ಉಸ್ತುವಾರಿ ಸಚಿವರಾದ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಬಳ್ಳಾರಿ ಗ್ರಾಮೀಣ ಕ್ಷೇತ್ರದ ಶಾಸಕ ಬಿ.ನಾಗೇಂದ್ರ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ವಿಧಾನಪರಿಷತ್ ಶಾಸಕ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ನಾರಾ ಭರತ್ ರೆಡ್ಡಿ, ಈ.ಅನ್ನಪೂರ್ಣ, ವಿಧಾನ ಪರಿಷತ್ ಶಾಸಕರಾದ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್. ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

## ಭಾಗ್ಯಲಕ್ಷ್ಮೀ ಯೋಜನೆಯಡಿ ಹಣ ಪಡೆಯಲು ಮನವಿ

ಚಿಕ್ಕಬಳ್ಳಾಪುರ, ಸೆ 25: ಗೌರಿಬಿದನೂರು ತಾಲ್ಲೂಕು ವ್ಯಾಪ್ತಿಗೆ ಬರುವ 2006ರ ಏಪ್ರಿಲ್ 1 ರಿಂದ 2007ರ ಮಾರ್ಚ್ 31 ರ ಅವಧಿಯಲ್ಲಿ ಜನಿಸಿದ ಹೆಣ್ಣು ಮಕ್ಕಳಿಗೆ ನೀಡಿರುವ ಭಾಗ್ಯಲಕ್ಷ್ಮೀ ಬಾಂಡ್ ಗಳ ಪೈಕಿ 1082 ಅರ್ಹ ಫಲಾನುಭವಿಗಳಲ್ಲಿ 1056 ಫಲಾನುಭವಿಗಳು ಕಚೇರಿಗೆ ಬಂದು ಅರ್ಜಿಗಳನ್ನು ಸಲ್ಲಿಸಿ ಭಾಗ್ಯಲಕ್ಷ್ಮೀ ಯೋಜನೆಯಡಿ ಪರಿಪಕ್ವ ಸೌಲಭ್ಯವನ್ನು ಪಡೆದಿರುತ್ತಾರೆ. ಉಳಿದ 26 ಫಲಾನುಭವಿಗಳು ಸಂಪರ್ಕಕ್ಕೆ ದೊರೆತಿರುವುದಿಲ್ಲ. ಆದ್ದರಿಂದ 2006ರ ಏಪ್ರಿಲ್ 1 ರಿಂದ 2007ರ ಮಾರ್ಚ್ 31 ರ ಅವಧಿಯಲ್ಲಿ ಜನಿಸಿ ಭಾಗ್ಯಲಕ್ಷ್ಮೀ ಬಾಂಡ್ ಹೊಂದಿದ್ದು, ಪರಿಪಕ್ವ ಮೊತ್ತ ಪಡೆಯದೇ ಇರುವ ಫಲಾನುಭವಿಗಳು ಕೂಡಲೇ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಗಣೇಶ ಸೈಕಲ್ ಮಾರ್ಟ್ ಹತ್ತಿರ, ಗೌರಿಬಿದನೂರು ಇಲ್ಲಿ ಸಂಪರ್ಕಿಸಿ ಅರ್ಜಿಗಳನ್ನು ಸಲ್ಲಿಸಬೇಕೆಂದು ಗೌರಿಬಿದನೂರು ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬ್ಯಾಂಕ್ ಗಳು ಮಹಿಳೆಯರ ಸ್ವಾವಲಂಬಿ ಬದುಕಿಗೆ ಆಸರೆಯಾಗಿ ಆರ್ಥಿಕ ಸಬಲೀಕರಣಕ್ಕೆ ಒತ್ತು ನೀಡಿ




**ದಾವಣಗೆರೆ:** ಜಿಲ್ಲೆಯ ರಾಷ್ಟ್ರೀಕೃತ ಬ್ಯಾಂಕ್ ಗಳು ಸೇರಿದಂತೆ ಎಲ್ಲಾ ಬ್ಯಾಂಕ್ ಗಳು ಮಹಿಳೆಯರ ಸ್ವಾವಲಂಬಿ ಬದುಕಿಗೆ ಆಸರೆಯಾಗಲು ಸ್ವಸಹಾಯ ಗುಂಪಿನ ಮಹಿಳೆಯರು ಸೇರಿದಂತೆ ಉತ್ಪಾದಕ ಚಟುವಟಿಕೆಗಳನ್ನು ಕೈಗೊಳ್ಳುವ ಮಹಿಳೆಯರಿಗೆ ಬ್ಯಾಂಕ್ ಸಾಲ ಕಲ್ಪಿಸುವ ಮೂಲಕ ಆರ್ಥಿಕ ಸಬಲೀಕರಣಕ್ಕೆ ಆದ್ಯತೆ ನೀಡಬೇಕೆಂದು ದಾವಣಗೆರೆ ಸಂಸದರಾದ ಡಾ: ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಗುರುವಾರ ಜಿಲ್ಲಾ ಪಂಚಾಯತ್ ಎಸ್.ಎಸ್.ಮಲ್ಲಿಕಾರ್ಜುನ ಸಭಾಂಗಣದಲ್ಲಿ ವಿವಿಧ ಬ್ಯಾಂಕ್‌ಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಬ್ಯಾಂಕ್‌ಗಳು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿವೆ. ಆದರೂ ಇನ್ನಷ್ಟು ಫಲಾನುಭವಿಗಳು, ಗ್ರಾಹಕರು ಸಾಲ ಕೇಳಿ ಬಂದಾಗ ಸಕಾರಾತ್ಮಕವಾಗಿ ಸ್ಪಂದಿಸಿ ಸೂಕ್ತ ಮಾರ್ಗದರ್ಶನ ನೀಡಬೇಕು. ಸುಖಾ ಸುಮ್ಮನೆ ಅರ್ಜಿಗಳನ್ನು ತಿರಸ್ಕರಿಸದೇ ಸಮಗ್ರವಾಗಿ ಪರಿಶೀಲಿಸಿ ಸಾಲ ಸೌಲಭ್ಯಗಳನ್ನು ನೀಡಬೇಕು. ಶೈಕ್ಷಣಿಕ ಸಾಲ, ಮನೆ ಸಾಲ, ಸ್ವ-ಸಹಾಯ ಸಂಘದ ಮಹಿಳೆಯರಿಗೆ, ಇನ್ನಿತರೆ ಸಾಲ ಸೌಲಭ್ಯಗಳನ್ನು ಒದಗಿಸಬೇಕು. ಜಿಲ್ಲೆಯಲ್ಲಿರುವ ಶಾಲಾ ಕಾಲೇಜುಗಳಲ್ಲಿ ಬ್ಯಾಂಕ್‌ಗಳಿಂದ ದೊರೆಯುವ ಸಾಲ ಸೌಲಭ್ಯಗಳ ಬಗ್ಗೆ ಕಾರ್ಯಾಗಾರ ಏರ್ಪಡಿಸಿ ವಿದ್ಯಾರ್ಥಿಗಳನ್ನು ಉತ್ತೇಜಿಸುವ ಕಾರ್ಯ ಆಗಬೇಕು. ಅದರಲ್ಲೂ ವಿಶೇಷವಾಗಿ ಶೈಕ್ಷಣಿಕ ಸಾಲ ಕೋರಿ ಬಂದಾಗ ಹೆಚ್ಚಿನ ಸಾಲ ಸೌಲಭ್ಯಗಳನ್ನು ನೀಡಿ ಪ್ರತಿಯೊಬ್ಬರೂ ಉನ್ನತ ಶಿಕ್ಷಣ ಪಡೆದು ಉತ್ತಮ ಬದುಕು ಕಟ್ಟಿಕೊಳ್ಳಲು ಅನುವು ಮಾಡಿಕೊಡಬೇಕು. ಸಭೆ ಸಮಾರಂಭಗಳಲ್ಲಿ ಅತಿಥಿಗಳಿಗೆ ಸ್ವ-ಸಹಾಯ ಸಂಘದ ಮಹಿಳೆಯರು, ಗುಡಿ ಕೈಗಾರಿಕೆಗಳಿಂದ ತಯಾರಿಸಿದ ಕರಕುಶಲ ವಸ್ತುಗಳನ್ನು ಉಡುಗೊರೆಯಾಗಿ ನೀಡಬೇಕು. ಇದರಿಂದ ಅವರಿಗೆ ಆರ್ಥಿಕ ಬೆಂಬಲ ನೀಡುವುದರ ಜೊತೆಗೆ ವೃತ್ತಿಗೆ ಉತ್ತೇಜನ ನೀಡಬೇಕು ಎಂದರು.

ಪ್ರಸ್ತುತ ಜಿಲ್ಲೆಯಲ್ಲಿ ನೆರೆ ಜಿಲ್ಲೆಗಳಿಗೆ ಹೋಲಿಸಿದಲ್ಲಿ ಬ್ಯಾಂಕ್‌ಗಳ ಪ್ರಗತಿ ಉತ್ತಮವಾಗಿದೆ. ಆದರೂ ಇನ್ನಷ್ಟು ಸಾಲ ಸೌಲಭ್ಯಗಳನ್ನು ಒದಗಿಸಿ ನೆರೆ ಜಿಲ್ಲೆಗಳು ಜಿಲ್ಲೆಯ ಪ್ರಗತಿಯನ್ನು ಅನುಕರಣೆ ಮಾಡುವಂತಾಗಬೇಕು. ಹಾಗೆಯೇ ಸಾರ್ವಜನಿಕರಲ್ಲಿ ಬ್ಯಾಂಕ್‌ಗಳಲ್ಲಿ ಸಿಗುವ ಸಾಲ ಸೌಲಭ್ಯಗಳ ಬಗ್ಗೆ ಮಾಹಿತಿ ಕೊರತೆ ಇದೆ. ಈ ಹಿನ್ನೆಲೆಯಲ್ಲಿ ಗ್ರಾಹಕರಿಗೆ ಸಿಗುವ ವಿವಿಧ ರೀತಿಯ ಸಾಲ ಸೌಲಭ್ಯಗಳ ಕುರಿತು ಅರಿವು ಮೂಡಿಸಬೇಕು ಎಂದರು.

**ನಬಾರ್ಡ್ ಕಾರ್ಯ ಪ್ರಗತಿ ಹೆಚ್ಚಿಸಿ:**

ನಬಾರ್ಡ್ ಸಂಸ್ಥೆಯಲ್ಲಿ ರೈತರಿಗೆ, ಸಾರ್ವಜನಿಕರಿಗೆ ಸಿಗುವ ಸಾಲ ಸೌಲಭ್ಯಗಳ ಕೃಷಿ ಚಟುವಟಿಕೆ ಸಂಬಂಧಿತ ಸಾಲ, ವಿವಿಧ ರೀತಿಯ ಉಪಕರಣ, ಯೋಜನೆಗಳ ಬಗ್ಗೆ ಹಲವರಿಗೆ ಮಾಹಿತಿಯೇ ಇಲ್ಲ. ಈ ಬಗ್ಗೆ ಗ್ರಾಮೀಣ ಪ್ರದೇಶ, ತಾಂತ್ರಿಕ ವಿಷಯ ಅಭ್ಯಸಿಸುವಂತಹ ವಿದ್ಯಾರ್ಥಿಗಳಿಗೆ ಮತ್ತು ವೃತ್ತಿಪರ ತರಬೇತಿ ನೀಡುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿ ನಬಾರ್ಡ್ ನಿಂದ ಸಿಗುವ ವಿವಿಧ ರೀತಿಯ ಯೋಜನೆ ಸೌಲಭ್ಯಗಳ ಕುರಿತು ಹೆಚ್ಚಿನ ಜಾಗೃತಿ ಮೂಡಿಸಬೇಕು. ಅಗತ್ಯಕ್ಕನುಸಾರ ಅರಿವು ಕಾರ್ಯಗಾರ ಆಯೋಜನೆ ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿದ ಅವರು, ವಿದ್ಯಾರ್ಥಿಗಳಿಗೆ, ನಿರುದ್ಯೋಗಿಗಳಿಗೆ, ವಿಶೇಷವಾಗಿ

ಮಹಿಳೆಯರಿಗೆ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ವಿವಿಧ ರೀತಿಯ ವೃತ್ತಿ ಆಧಾರಿತ ಕೌಶಲ್ಯ ತರಬೇತಿ ನೀಡಬೇಕು. ಜವಾಬ್ದಾರಿಯುತ ಸ್ಥಾನದಲ್ಲಿರುವ ಪ್ರತಿಯೊಬ್ಬರು ಆತ್ಮಸಾಕ್ಷಿಯಾಗಿ ಸರಿಯಾದ ರೀತಿಯಲ್ಲಿ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಅಗತ್ಯತೆಯನ್ನರಿತು ಸರ್ಕಾರದ ಯೋಜನೆ ಹಾಗೂ ಸೌಲಭ್ಯ ಒದಗಿಸಿ ಆರ್ಥಿಕವಾಗಿ ಸಾಮಾಜಿಕ, ಶೈಕ್ಷಣಿಕವಾಗಿ ಸಮಾಜದ ಮುನ್ನೆಲೆಗೆ ತರಲು ಪ್ರಯತ್ನಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠ್ಠಲ ರಾವ್, ಆರ್.ಬಿ.ಐ ಮ್ಯಾನೇಜರ್ ಪ್ರಿಯಾ ಗೌತಮ್, ನಬಾರ್ಡ್ ಡಿಡಿಎಂ ರಶ್ಮಿ ರೇಖಾ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಹಿರೇಮಠ್,

ಎಸ್‌ಬಿಐನ ಪ್ರಾದೇಶಿಕ ಮುಖ್ಯಸ್ಥ ಮನವ್ ಕುಮಾರ್, ಕೆನರಾ ಬ್ಯಾಂಕ್ ಶಾಖಾ ವ್ಯವಸ್ಥಾಪಕ ತನ್ಮಯ್ ದಾಸ್ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಕ್ಷಯರೋಗದ ಔಷಧಿಗಳ ಕೊರತೆಯಾಗದಂತೆ ನಿರ್ವಹಿಸಿ: ಡಿಹೆಚ್ಓ ಡಾ.ಯಲ್ಲಾ ರಮೇಶ್ ಬಾಬು



**ಬಳ್ಳಾರಿ:** ನಿಕ್ಷಯ ತಂತ್ರಾಂಶ ಡಿವಿಡಿಎಮ್‌ಎಸ್ ನಲ್ಲಿ ಕ್ಷಯರೋಗಿಗಳಿಗೆ ನೀಡುವ ಔಷಧಿಗಳನ್ನು ದಾಖಲಿಸಿ ಕ್ಷಯರೋಗಿಗಳಿಗೆ ನಿಗದಿತ ಸಮಯಕ್ಕೆ ಔಷಧಿಗಳನ್ನು ತಲುಪಿಸಬೇಕು. ಡಿಎಸ್‌ಟಿಬಿ, ಡಿಆರ್‌ಟಿಬಿ ಹಾಗೂ ಟಿಪಿಟಿ ಔಷಧಿಗಳ ದಾಸ್ತಾನುಗಳನ್ನು ನಿರ್ವಹಣೆ ಮಾಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಇಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲೆಯ ಫಾರ್ಮಸಿ ಅಧಿಕಾರಿಗಳಿಗೆ ಹಾಗೂ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದ ಸಿಬ್ಬಂದಿ ವರ್ಗದವರೊಂದಿಗೆ ಏರ್ಪಡಿಸಿದ್ದ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಅಗತ್ಯವಿರುವ ಎಲ್ಲಾ ಔಷಧಿಗಳನ್ನು ಸಮಯಕ್ಕೆ ತಕ್ಕಂತೆ ಲಭ್ಯವಾಗುವಂತೆ ಮಾಡಬೇಕು.

ಪ್ರತಿದಿನ/ವಾರದ ಕೋಷ್ಟಕ ಪರಿಶೀಲನೆ ಮಾಡಬೇಕು. ಬೇಡಿಕೆ ಮತ್ತು ಬಳಕೆ ಆಧಾರದ ಮೇಲೆ ಮುಂಚಿತವಾಗಿ ಬೇಡಿಕೆ ಕುರಿತು ಪತ್ರ ಬರೆಯಬೇಕು ಎಂದರು.

ಅವಧಿ ಮುಗಿಯುವ ಔಷಧಿಗಳನ್ನು ಗಮನಿಸಿ, ಮೊದಲು ಬಳಸುವ ವ್ಯವಸ್ಥೆ ಅನುಸರಿಸಬೇಕು. ಔಷಧಿ ಕೊರತೆ ಸಂಭವಿಸುವ ಮುಂಚೆ ಎಚ್ಚರಿಕೆ ವ್ಯವಸ್ಥೆ ಇರಬೇಕು. ಸಮೀಪದ ಆರೋಗ್ಯ ಕೇಂದ್ರಗಳೊಂದಿಗೆ ಸಮನ್ವಯ ಸಾಧಿಸಿ ತುರ್ತು ಪೂರೈಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ದಾಸ್ತಾನು ಕುರಿತು ನಿಯಮಿತ ವರದಿ ಮತ್ತು ಹಂತಗೊಳಿಸಿದ ಮೇಲ್ವಿಚಾರಣೆ ನಡೆಸುವುದು, ಕೋಷ್ಟಕದ ಸ್ಥಿತಿ ಬಗ್ಗೆ ನಿಯಮಿತ ವರದಿ ಸಲ್ಲಿಸಬೇಕು. ನಿಯಮಿತವಾಗಿ ಪರಿಶೀಲನೆ ನಡೆಸಬೇಕು.

ಇ-ಔಷಧ ಪೋರ್ಟಲ್‌ನಲ್ಲಿ ಪ್ರತಿ ದಾಸ್ತಾನು ನಿರ್ವಹಣೆ ಮಾಡಲು ತಿಳಿಸಿದರು.

ಅಂತರಾಷ್ಟ್ರೀಯ ಫಾರ್ಮಸಿ ಅಧಿಕಾರಿಗಳ ದಿನಾಚರಣೆ ಅಂಗವಾಗಿ ಎಲ್ಲಾ ಫಾರ್ಮಸಿ ಅಧಿಕಾರಿಗಳಿಗೆ ತಮ್ಮ ಕರ್ತವ್ಯ ಶ್ಲಾಘಿಸಿ ಶುಭ ಕೋರಿದರು.

ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ, ಡಾ.ಹರೀಶ್, ಜಿಲ್ಲೆಯ ಎಲ್ಲಾ ಫಾರ್ಮಸಿ ಅಧಿಕಾರಿಗಳು, ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದ ಸಿಬ್ಬಂದಿ ವರ್ಗದವರು ಈ ಸಂದರ್ಭದಲ್ಲಿ ಹಾಜರಿದ್ದರು.

# ಇತರೆ ಸಹೋದರ ಜಾತಿಗಳನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವುದನ್ನು ಕೈಬಿಡಿ: ಜಿಲ್ಲಾ ವಾಲ್ಮೀಕಿ ಸಮಾಜದ ಮನವಿ

**ದಾವಣಗೆರೆ:** ಇತರೆ ಸಮಾಜದವರನ್ನು ಪರಿಶಿಷ್ಟ ಪಂಗಡಕ್ಕೆ (ಎಸ್.ಟಿ.) ಸೇರಿಸಲು ರಾಜ್ಯ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುವುದನ್ನು ಕೈಬಿಡಬೇಕು ಎಂದು ದಾವಣಗೆರೆ ಜಿಲ್ಲಾ ಹಾಗೂ ತಾಲೂಕು ವಾಲ್ಮೀಕಿ ನಾಯಕ ಸಮಾಜವು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಗುರುವಾರ ಮನವಿ ಸಲ್ಲಿಸಿತು.ಈ ವೇಳೆ ವಾಲ್ಮೀಕಿ ನಾಯಕ ಸಮಾಜದ ಜಿಲ್ಲಾಧ್ಯಕ್ಷ ಬಿ.ವೀರಣ್ಣ ಮಾತನಾಡಿ, ಈಗಾಗಲೇ 52 ಜಾತಿಗಳು ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿವೆ. ರಾಜ್ಯದಲ್ಲಿ ಸಹೋದರ ಸಮಾಜಗಳ ಜೊತೆಗೆ ನಾವುಗಳು ಉತ್ತಮ ಬಾಂಧವ್ಯ ಹೊಂದಿದ್ದೇವೆ. ಆದ್ದರಿಂದ ಸರ್ಕಾರ ಇತರೆ ಸಮುದಾಯಗಳನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವುದನ್ನು ಕೈ ಬಿಡಬೇಕು. ಯಾವುದೇ ಕಾರಣಕ್ಕೂ ಕೇಂದ್ರಕ್ಕೆ ಶಿಫಾರಸ್ಸು ಮಾಡಬಾರದು ಎಂದರು.ಉಪಾಧ್ಯಕ್ಷ ಎನ್.ಎಂ.ಆಂಜನೇಯ ಗುರೂಜಿ ಮಾತನಾಡಿ, ನಿಯಮ ಬಾಹಿರವಾಗಿ ಯಾವುದೇ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರ್ಪಡೆಗೊಳಿಸುವುದನ್ನು ಸಮಸ್ತ ವಾಲ್ಮೀಕಿ ನಾಯಕ ಸಮುದಾಯ ವಿರೋಧಿಸುತ್ತದೆ ಎಂದರು.ಈ ಸಂದರ್ಭದಲ್ಲಿ ಸಮಾಜದ ಕಾರ್ಯದರ್ಶಿ ಶ್ಯಾಗಲೆ ಕೆ.ಆರ್.ಮಂಜುನಾಥ್, ಮಾಜಿ ಮೇಯರ್ ವಿನಾಯಕ ಪೈಲ್ವಾನ್, ಹೂವಿನ ಮಡು ಚಂದ್ರಪ್ಪ, ಶ್ಯಾಗಲೆ ಸತೀಶ್, ಸಿರಿಗೆರೆ ರಂಗಣ್ಣ, ಅಣ್ಣಾಪುರ ಹೇಮಣ್ಣ, ಮಲ್ಲಾಪುರ ದೇವರಾಜ್, ದೇವರಬೆಳಕೆರೆ ಮಹೇಶ್ವರಪ್ಪ, ಕೊಡಗನೂರು ಸುರೇಶ್, ವಕೀಲ ಎನ್.ಎ.ಆದರ್ಶ, ಹರಿಹರ ಕರಿಬಸಪ್ಪ, ಸಿರಗಾನಹಳ್ಳಿ ನಾಗರಾಜಪ್ಪ, ಅಳಗೋಡಿ ರಾಜು ಸೇರಿದಂತೆ ನಾಯಕ ಸಮಾಜ ಬಾಂಧವರು ಉಪಸ್ಥಿತರಿದ್ದರು.

# ಮೀನು ಮರಿಗಳ ಬಿತ್ತನೆ, ಫೈಬರ್ ದೋಣಿಗಳ ವಿತರಣೆ ಸಂಪನ್ನ








**ರಾಮನಗರ:** ಬೆಂಗಳೂರಿನ ಹೆಸರಘಟ್ಟದ ಕೇಂದ್ರಿಯ ಒಳನಾಡು ಮೀನುಗಾರಿಕಾ ಸಂಶೋಧನಾ ಸಂಸ್ಥೆಯಿಂದ ಮಾಗಡಿ ತಾಲ್ಲೂಕಿನ ಮಂಚನಬೆಲೆ ಜಲಾಶಯದಲ್ಲಿ ಮೀನು ಉತ್ಪಾದನೆ ಬಗ್ಗೆ ಸಂವೇದನೆ ಕಾರ್ಯಕ್ರಮ ಹಾಗೂ ಪರಿಶಿಷ್ಟ ಜಾತಿ ಉಪ ಯೋಜನೆಯಡಿ (ಎಸ್‌ಸಿ-ಎಸ್‌ಪಿ) ಮೀನು ಮರಿಗಳ ಬಿತ್ತನೆ ಮತ್ತು ಪರಿಶಿಷ್ಟ ಜಾತಿಯ ಮೀನುಗಾರರಿಗೆ ಫೈಬರ್ ದೋಣಿಗಳನ್ನು ವಿತರಿಸುವ ಕಾರ್ಯಕ್ರಮವನ್ನು ಸೆ.24ರಂದು ಹಮ್ಮಿಕೊಳ್ಳಲಾಗಿತ್ತು.

ಕೇಂದ್ರಿಯ ಒಳನಾಡು ಮೀನುಗಾರಿಕಾ ಸಂಶೋಧನಾ ಸಂಸ್ಥೆಯ ಮುಖ್ಯಸ್ಥರು ಹಾಗೂ ಪ್ರಧಾನ ವಿಜ್ಞಾನಿಗಳಾದ ಡಾ. ಎಲ್.ಎನ್. ಮೂರ್ತಿ ಅವರು, ದೇಶದ ಒಳನಾಡಿನ ಮೀನುಗಾರಿಕೆ ಕ್ಷೇತ್ರದ ಸುಧಾರಣೆಗಾಗಿ ಐಸಿಎಆರ್-ಸಿಐಎಫ್‌ಆರ್‌ಐ ಅಭಿವೃದ್ಧಿಪಡಿಸಿದ ಇತ್ತೀಚಿನ ತಂತ್ರಜ್ಞಾನಗಳನ್ನು ತಿಳಿಸಿ, ಎನ್‌ಎಫ್‌ಡಿಬಿಯ ಅನುದಾನಗಳ ಬಗ್ಗೆ ಮಾಹಿತಿ ನೀಡಿದರು.

ಮುಖ್ಯ ವಿಜ್ಞಾನಿ ಡಾ. ಪ್ರೀತಾ ಪಣಿಕ್ಕರ್ ಜಲಾಶಯಗಳಿಂದ ಮೀನು ಉತ್ಪಾದನೆ ಹೆಚ್ಚಿಸಲು ಪಂಜರಗಳಲ್ಲಿ ಮೀನು ಕೃಷಿ ತೊಡಗಿಸಿಕೊಳ್ಳುವ ಬಗ್ಗೆ ತಿಳಿಸಿಕೊಟ್ಟರು.

ಐಸಿಎಆರ್-ಸಿಐಎಫ್‌ಆರ್‌ಐ ನಿರ್ದೇಶಕ ಡಾ. ಬಿ.ಕೆ. ದಾಸ್ ಮತ್ತು ಬೆಂಗಳೂರಿನ ಐಸಿಎಆರ್-ಸಿಐಎಫ್‌ಆರ್‌ಐ ಪ್ರಾದೇಶಿಕ ಕೇಂದ್ರದ ಮುಖ್ಯಸ್ಥ ಡಾ. ಎಲ್. ನರಸಿಂಹಮೂರ್ತಿ ಅವರ ಮಾರ್ಗದರ್ಶನದಲ್ಲಿ ಕಾರ್ಯಕ್ರಮ ಸಂಪನ್ನಗೊಂಡಿತು. ಮಾಗಡಿ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕ ಯೋಗೇಶ್ ಎ.ಎಂ., ಸಂಘದ ಅಧ್ಯಕ್ಷ ಲೋಕೇಶ್ ಮಾತನಾಡಿದರು. ಕಾರ್ಯಕ್ರಮವನ್ನು ಐಸಿಎಆರ್-ಸಿಐಎಫ್‌ಆರ್‌ಐ ವಿಜ್ಞಾನಿಗಳಾದ ಡಾ. ವಿ.ಎಲ್. ರಮ್ಯಾ ಮತ್ತು ಡಾ. ಸೋನಾಲಿಕಾ ಸಾಹು ಸಂಯೋಜಿಸಿದರು. ಹಿರಿಯ ತಾಂತ್ರಿಕ ಅಧಿಕಾರಿ ಡಾ. ವಿಜಯ್‌ಕುಮಾರ್ ಸ್ವಾಗತಿಸಿದರು. ವಿಜ್ಞಾನಿ ಡಾ. ಜೆಸ್ನಾ ಪಿ.ಕೆ. ವಂದಿಸಿದರು.

ಅವ್ವೇರಹಳ್ಳಿ ಪುನರ್ವಸತಿ ಮೀನುಗಾರರ ಸಹಕಾರ ಸಂಘದ ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯದರ್ಶಿ, ನಿರ್ದೇಶಕರು ಹಾಗೂ ಪದಾಧಿಕಾರಿಗಳ ಭಾಗವಹಿಸಿದ್ದರು.

# ಜಿಎಂ ವಿಶ್ವವಿದ್ಯಾಲಯದಲ್ಲಿ "ಎಐ ಏಕೀಕರಣದೊಂದಿಗೆ ಯಾಂತ್ರಿಕ ಮತ್ತು ರೊಬೊಟಿಕ್ ವ್ಯವಸ್ಥೆಗಳು' ಕುರಿತು ರಾಷ್ಟ್ರೀಯ ಸಮ್ಮೇಳನ

**ದಾವಣಗೆರೆ:** ಜಿಎಂ ವಿಶ್ವವಿದ್ಯಾಲಯದ ಫ್ಯಾಕಲ್ಟಿ ಆಫ್ ಎಂಜಿನಿಯರಿಂಗ್ ಅಂಡ್ ಟೆಕ್ನಾಲಜಿ, ಸ್ಕೂಲ್ ಆಫ್ ಎಂಜಿನಿಯರಿಂಗ್ ನ ಎಂಜಿನಿಯರಿಂಗ್ ಡಿಸೈನ್, ಮೆಕ್ಯಾನಿಕಲ್ ಎಂಜಿನಿಯರಿಂಗ್ ಮತ್ತು ರೋಬೋಟಿಕ್ ಅಂಡ್ ಆಟೋಮೇಷನ್ ವಿಭಾಗಗಳ ಸಂಯುಕ್ತ ಆಶ್ರಯದಲ್ಲಿ ಸೆಪ್ಟೆಂಬರ್ 26, 2025 ರಂದು ಬೆಳಿಗ್ಗೆ 9:30 ಕ್ಕೆ ಜಿಎಂ ವಿಶ್ವವಿದ್ಯಾಲಯದ ಜಿಎಂ ಹಾಲಮ್ಮ ಸಭಾಂಗಣದಲ್ಲಿ "ಎಐ ಏಕೀಕರಣದೊಂದಿಗೆ ಯಾಂತ್ರಿಕ ಮತ್ತು ರೊಬೊಟಿಕ್ ವ್ಯವಸ್ಥೆಗಳು" ಕುರಿತು ರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಾಗಿದೆ ಎಂದು ವಿದ್ಯಾಲಯದ ಡೀನ್ ಡಾ.ವೀರಗಂಗಾಧರ್ ಸ್ವಾಮಿ ಟಿ.ಎಂ ಹೇಳಿದರು.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಉದ್ಘಾಟನಾ ಸಮಾರಂಭದಲ್ಲಿ ಪ್ರಖ್ಯಾತ ಶಿಕ್ಷಣ ತಜ್ಞರು, ಉದ್ಯಮ ಮುಖಂಡರು ಮತ್ತು ಸಂಶೋಧಕರ ಉಪಸ್ಥಿತಿ ಇರುತ್ತದೆ. ಮುಖ್ಯ ಅತಿಥಿ ಮತ್ತು ಮುಖ್ಯ ಭಾಷಣಕಾರರಾಗಿ ಬೆಂಗಳೂರಿನ ಟ್ರೈಡೆಂಟ್ ಟೆಕ್ಲ್ಯಾಬ್ಸ್ ಲಿಮಿಟೆಡ್‌ನ ಖಾತೆ ವ್ಯವಸ್ಥಾಪಕ ಅಜಿತ್ ಗೋಪಿನಾಥ್ ಭಾಗವಹಿಸುವರು ಎಂದು ಮಾಹಿತಿ ನೀಡಿದರು. ಆಹ್ವಾನಿತ ಭಾಷಣಕಾರರಾಗಿ ಆಕೃತಿ 3ಡಿ ಮತ್ತು ಆಕಾರ್ ಪ್ರಟೆಕ್ ಪ್ರೈ.ಲಿ.ನ ಸಂಸ್ಥಾಪಕ ಮತ್ತು ಸಿಇಒ ರಾಘವೇಂದ್ರ ಎಸ್., ಸ್ಕೈವರ್ಕ್ಸ್ ಸೊಲ್ಯೂಷನ್ಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್, ಬೆಂಗಳೂರು ವ್ಯವಸ್ಥಾಪಕ ಅಜಯ್ ಬಸ್ತಿ ಆಗಮಿಸುವರು. ಸಮ್ಮೇಳನದ ಅಧ್ಯಕ್ಷತೆಯನ್ನು ದಾವಣಗೆರೆಯ ಜಿಎಂ ವಿಶ್ವವಿದ್ಯಾಲಯದ ಸಹ ಕುಲಪತಿ ಡಾ.ಎಚ್.ಡಿ.ಮಹೇಶಪ್ಪ ವಹಿಸಲಿದ್ದಾರೆ. ಜಿಎಂಯು ಕುಲಪತಿಗಳಾದ ಡಾ.ಎಸ್.ಆರ್.ಶಂಕಪಾಲ್, ಕುಲಸಚಿವ ಡಾ.ಸುನಿಲ್‌ಕುಮಾರ್ ಬಿ.ಎಸ್., ಸಂಶೋಧನಾ ಸಲಹೆಗಾರ ಡಾ.ಸಿ.ಎಸ್.ರಮೇಶ್, ಸಂಶೋಧನೆ ಮತ್ತು ನಾವೀನ್ಯತೆ ವಿಭಾಗದ ಡೀನ್ ಡಾ.ಕೆ.ಎನ್.ಭರತ್ ಅತಿಥಿಗಳಾಗಿ ಉಪಸ್ಥಿತರಿರುವರು ಎಂದು ತಿಳಿಸಿದರು.ಈ ಕಾರ್ಯಕ್ರಮದ ಗೌರವಾನ್ವಿತ ಅತಿಥಿಗಳಾಗಿ ಜಿಎಂಯು ಸ್ಕೂಲ್ ಆಫ್ ಎಂಜಿನಿಯರಿಂಗ್ ನಿರ್ದೇಶಕ ಡಾ. ಪ್ರವೀಣ್ ಜೆ, ಕಂಪ್ಯೂಟರ್ ವಿಜ್ಞಾನ ಮತ್ತು ತಂತ್ರಜ್ಞಾನ ಶಾಲೆಯ ನಿರ್ದೇಶಕ ಡಾ. ಸಂಜಯ್ ಪಾಂಡೆ ಎಂ.ಬಿ ಭಾಗವಹಿಸುವರು. ಸಮ್ಮೇಳನದ ಸಹ ಅಧ್ಯಕ್ಷತೆಯನ್ನು ಎಂಜಿನಿಯರಿಂಗ್ ವಿನ್ಯಾಸ ವಿಭಾಗದ ಮುಖ್ಯಸ್ಥ ಡಾ. ಶ್ರೀನಿವಾಸ ಸಿ.ವಿ ಮತ್ತು ರೊಬೊಟಿಕ್ಸ್ ಮತ್ತು ಆಟೊಮೇಷನ್ ವಿಭಾಗದ ಮುಖ್ಯಸ್ಥ ಡಾ. ರಾಜಶೇಖರ್ ಬಿ. ಸೋಮಸಾಗರ್ ವಹಿಸಿದ್ದಾರೆ ಎಂದರು.

# ಕನಾಟಕ ರಾಜ್ಯ ದೂರಸಂವೇದಿ ಅನ್ವಯಿಕ ಕೇಂದ್ರಕ್ಕೆ ಭೇಟಿ ನೀಡಿದ ಇಟಾಲಿಯನ್ ಏರೋಸ್ಪೇಸ್ ಮತ್ತು ಬಾಹ್ಯಾಕಾಶ ನಿಯೋಗ



**ಬೆಂಗಳೂರು:** ಕನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರಕ್ಕೆ ಇಟಲಿ ಭಾರತ ಬಾಹ್ಯಾಕಾಶ, ಏರೋಸ್ಪೇಸ್ ಮತ್ತು ರಕ್ಷಣಾ ರೋಡ್ ಶೋ ಭಾಗವಾಗಿ ಇಟಾಲಿಯನ್ ಏರೋಸ್ಪೇಸ್ ಮತ್ತು ಬಾಹ್ಯಾಕಾಶ ನಿಯೋಗವು 2025 ನೇ ಸೆಪ್ಟೆಂಬರ್ 24 ರಂದು ಭೇಟಿ ನೀಡಿತು.

ಭೇಟಿಯ ಸಮಯದಲ್ಲಿ ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದ ನಿರ್ದೇಶಕರಾದ ಡಾ.ರಾಜೇಶ್ ಎನ್.ಎಲ್. ಅವರು ಕೇಂದ್ರದ ಧ್ಯೇಯ, ಮುಂದುವರೆದ ಸಾಮರ್ಥ್ಯಗಳು, ಬೆಳೆ ಮೇಲ್ವಿಚಾರಣೆ ಹಾಗೂ ವಿಪತ್ತು ನಿರ್ವಹಣೆಯಿಂದ ನಗರ ಯೋಜನೆ ಮತ್ತು ನೈಸರ್ಗಿಕ ಸಂಪನ್ಮೂಲ ನಿರ್ವಹಣೆವರೆಗೆ ಬಾಹ್ಯಾಕಾಶ ಆಧಾರಿತ ಆಡಳಿತ ಮತ್ತು ಸುಸ್ಥಿರ ಅಭಿವೃದ್ಧಿಯಲ್ಲಿ ವೈವಿಧ್ಯಮಯ ಅನ್ವಯಿಕೆಗಳನ್ನು ಪ್ರಸ್ತುತಪಡಿಸಿದರು.

ಕಿಟ್ಸ್ ಸಂಸ್ಥೆಯ ಪ್ರಧಾನ ವ್ಯವಸ್ಥಾಪಕರಾದ ಪ್ರಮೋದ್ ಎಲ್.ಪಾಟೀಲ್ ಅವರು, ಕರಡು ಕರ್ನಾಟಕ ಬಾಹ್ಯಾಕಾಶ ನೀತಿಯ ಪ್ರಮುಖ ಅಂಶಗಳನ್ನು ಹಂಚಿಕೊಂಡು ಜಾಗತಿಕ ಸಾಮರ್ಥ್ಯ ಕೇಂದ್ರಗಳಲ್ಲಿ ಕರ್ನಾಟಕವು ಮುಂಚೂಣಿಯಲ್ಲಿರುವುದನ್ನು ತಿಳಿಸಿದರು.

ಕರ್ನಾಟಕ ಸರ್ಕಾರದ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಗ್ಲೋಬಲ್ ಇನ್ನೋವೇಶನ್ ಅಲೈಯನ್ಸ್ (ಜಿಐಎ) ಅಡಿಯಲ್ಲಿ ಸುಗಮಗೊಳಿಸಲಾದ ಈ ಕಾರ್ಯಕ್ರಮವು ಬಾಹ್ಯಾಕಾಶ ಅನ್ವಯಿಕೆಗಳು, ಏರೋಸ್ಪೇಸ್ ತಂತ್ರಜ್ಞಾನಗಳು ಮತ್ತು ರಕ್ಷಣಾ ನಾವೀನ್ಯತೆಗಳಲ್ಲಿ ಸಹಯೋಗವನ್ನು ಬಲಪಡಿಸುವ ಗುರಿಯನ್ನು ಹೊಂದಿದೆ.

ಜಂಟಿ ಸಂಶೋಧನೆ, ಶೈಕ್ಷಣಿಕ ಸಂಪರ್ಕಗಳು ಮತ್ತು ಪ್ರತಿಭಾ ವಿನಿಮಯದಲ್ಲಿ ಭಾರತ ಇಟಲಿ ಸಹಕಾರವನ್ನು ವೃದ್ಧಿಸುವುದು, ಮಾರುಕಟ್ಟೆ ಪ್ರವೇಶ, ಸಹ ಅಭಿವೃದ್ಧಿ, ಕೈಗಾರಿಕೆ ಸಂಶೋಧನೆ ಮತ್ತು ಅಭಿವೃದ್ಧಿಗಾಗಿ ಅವಕಾಶಗಳನ್ನು ತೆರೆಯುವುದು ಹಾಗೂ ಬಾಹ್ಯಾಕಾಶ, ನಾವೀನ್ಯತೆ ಮತ್ತು ತಂತ್ರಜ್ಞಾನ ನೇತೃತ್ವದ ಬೆಳವಣಿಗೆಯಲ್ಲಿ ಕರ್ನಾಟಕವನ್ನು ಇಟಲಿಗೆ ಕಾರ್ಯತಂತ್ರದ ಪಾಲುದಾರರನ್ನಾಗಿ ಸ್ಥಾನೀಕರಿಸುವುದಕ್ಕೆ ಸಂಬಂಧಿಸಿದ ಪ್ರಮುಖ ಅಂಶಗಳ ಬಗ್ಗೆ ಪ್ರಸ್ತಾಪಿಸಲಾಯಿತು.

ಈ ಭೇಟಿಯು ಭಾರತ ಇಟಲಿಯ ಪಾಲುದಾರಿಕೆಯನ್ನು ಮುನ್ನಡೆಸುವಲ್ಲಿ ಒಂದು ಪ್ರಮುಖ ಮೈಲಿಗಲ್ಲನ್ನು ಗುರುತಿಸುವುದಲ್ಲದೇ ಬಾಹ್ಯಾಕಾಶ ಮತ್ತು ಬಾಹ್ಯಾಕಾಶ ನಾವೀನ್ಯತೆಯಲ್ಲಿ ಜಾಗತಿಕ ಕೇಂದ್ರವಾಗಿ ಕರ್ನಾಟಕದ ಪಾತ್ರವನ್ನು ಬಲಪಡಿಸಲಿದೆ.

ನಿಯೋಗದಲ್ಲಿ ಇಟಾಲಿಯನ್ ಬಾಹ್ಯಾಕಾಶ ಸಂಸ್ಥೆಯ ಉಪನಿರ್ದೇಶಕರಾದ ಮಾರಿಯಾ ಚಿಯಾರಾ ನೊಟೊ, ನವದೆಹಲಿಯ ಇಟಲಿಯ ವ್ಯಾಪಾರ ಆಯುಕ್ತರಾದ ಆಂಟೋನಿಯೆಟ್ಟಾ ಬಕ್ಕನಾರಿ, ಬೆಂಗಳೂರಿನಲ್ಲಿನ ಇಟಲಿಯ ಕಾನ್ಸುಲ್ ಜನರಲ್ ಜಿಯಾಂಡೊಮೆನಿಕೊ ಮಿಲಾನೊ ಹಾಗೂ ಇಟಲಿಯ ಬಾಹ್ಯಾಕಾಶ ಮತ್ತು ಬಾಹ್ಯಾಕಾಶ ಕ್ಷೇತ್ರದ ಪ್ರತಿಷ್ಠಿತ ಕಂಪನಿಗಳು ಭಾಗವಹಿಸಿದ್ದವು ಎಂದು ಕನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದ ನಿರ್ದೇಶಕರಾದ ಡಾ.ರಾಜೇಶ್ ಎನ್.ಎಲ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಎಸ್‌ಟಿ ಇಳಿಕೆ ನಿರ್ಧಾರ ಮುಂದಿನ ಪೀಳಿಗೆಯ ಐತಿಹಾಸಿಕ ಆರ್ಥಿಕ ಮೈಲಿಗಲ್ಲು ರಾಜಶೇಖರ್

**ದಾವಣಗೆರೆ:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಕೈಗೊಂಡಿರುವ ಜಿಎಸ್‌ಟಿ ಇಳಿಕೆ ನಿರ್ಧಾರ ಮುಂದಿನ ಪೀಳಿಗೆಯ ಐತಿಹಾಸಿಕ ಆರ್ಥಿಕ ಮೈಲಿಗಲ್ಲಾಗಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ರಾಜಶೇಖರ ನಾಗಪ್ಪ ಅಭಿಪ್ರಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಅಗತ್ಯ ವಸ್ತುಗಳ ಬೆಲೆಯನ್ನು ಇಷ್ಟು ಕಡಿಮೆ ಮಾಡಿರುವ ಇತಿಹಾಸ ಯಾವ ಸರ್ಕಾರದ ಅವಧಿಯಲ್ಲೂ ಆಗಿಲ್ಲ. ಮೋದಿ ಸರ್ಕಾರ ದೇಶದ ಶೇ. 90ರಷ್ಟು ದಿನ ಬಳಕೆ ವಸ್ತುಗಳ ಬೆಲೆ ಇಳಿಸಿದ್ದು ಇದರಿಂದ 2 ಲಕ್ಷ ಕೋಟಿಯಷ್ಟು ದೇಶೀಯ ಬಳಕೆ ಹೆಚ್ಚಳವಾಗುವ ನಿರೀಕ್ಷೆ ಇದೆ ಎಂದು ತಿಳಿಸಿದರು.

ಮೋದಿಯವರು ಪ್ರಧಾನಿ ಆದಾಗಿನಿಂದ ಬಡವರು, ರೈತರು, ಯುವಕರು ಮಹಿಳೆಯರ ಪರವಾಗಿ ಆಡಳಿತ ನಡೆಸುತ್ತಿದೆ. 12 ಲಕ್ಷ ರೂ.,ವರೆಗೆ ಆದಾಯ ತೆರಿಗೆಯಿಂದ ವಿನಾಯಿತಿ ನೀಡಲಾಗಿದ್ದು, ಜಿಎಸ್‌ಟಿ ಸುಧಾರಣೆ ಕ್ರಮದಿಂದಾಗಿ ಕಡಿಮೆ ತೆರಿಗೆಗಳು ಹೆಚ್ಚಿನ ಖರ್ಚಿಗೆ ಕಾರಣವಾಗಲಿದೆ ಇದು ಉತ್ಪಾದನೆ ಹೆಚ್ಚಿಸಲಿದೆ. ತೆರಿಗೆ ಮೂಲವನ್ನು ವಿಸ್ತರಿಸಲಿದೆ. ಈಗಾಗಲೆ ವಾಹನ ತಯಾರಕರು ಬೆಲೆ ಕಡಿತಗಳನ್ನು ಘೋಷಿಸಿದ್ದಾರೆ ಎಂದು ವಿವರಿಸಿದರು.

ಜಾತಿಗಣತಿ ವಿಚಾರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಿಂದು ಧರ್ಮದಲ್ಲಿ ಒಡಕು ತರಲು 48ಕ್ಕೂ ಹೆಚ್ಚು ಹೊಸ ಜಾತಿಗಳನ್ನು ಸೇರ್ಪಡೆ ಮಾಡಿ ಧರ್ಮದ್ರೋಹಿ ಆಗಿದ್ದಾರೆ. ಜನರು ಧರ್ಮದ ಕಾಲಂನಲ್ಲಿ ತಪ್ಪದೇ ಹಿಂದು ಎಂದು ಬರೆಸಬೇಕು. ಈಗಾಗಲೆ ತರಳಬಾಳು ಶ್ರೀಗಳು, ಪಂಚಪೀಠ ಇತರೆ ಸ್ವಾಮೀಜಿಗಳು ಕೂಡ ಹಿಂದು ಎಂದು ಬರೆಸಲು ಘೋಷಿಸಿದ್ದಾರೆ.

ರೈತ ಮೋರ್ಚಾ ಮುಖಂಡ ಬಿ.ಎಂ. ಸತೀಶ್ ಕೊಳೇನಹಳ್ಳಿ ಮಾತನಾಡಿ, ಜಿಎಸ್‌ಟಿ ಪರಿಷ್ಕರಣೆಯಿಂದಾಗಿ ಸೋಮವಾರದಿಂದಲೇ ಹಾಲು ಉತ್ಪನ್ನಗಳು ಮತ್ತು ಕೃಷಿ ಯಂತ್ರೋಪಕರಣಗಳ ಬೆಲೆರ ಕಡಿಮೆಯಾಗಿದೆ. ಇದು ಕೇಂದ್ರ ಸರ್ಕಾರ ರೈತಸ್ನೇಹಿ ಎಂಬುದಕ್ಕೆ ನಿದರ್ಶನ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಧನಂಜಯ ಕಡ್ಲೇಬಾಳು, ಎಚ್. ಶ್ರೀನಿವಾಸ್, ಪಿ.ಸಿ. ಶ್ರೀನಿವಾಸ ಭಟ್, ಅನಿಲ್‌ಕುಮಾರ್, ತಾರೇಶನಾಯ್ಕ, ಮಂಜುನಾಥ ಗುತ್ತೂರು, ಜಯರುದ್ರಪ್ಪ, ಹಾಲೇಶನಾಯ್ಕ, ರೇವಣಸಿದ್ದಪ್ಪ, ಎಚ್.ಪಿ.ವಿಶ್ವಾಸ್, ಬಿ.ಜಿ.ಅಜಯಕುಮಾರ್ ಇದ್ದರು.

# ಸರ್ಕಾರಿ ವಿಜ್ಞಾನ ಕಾಲೇಜು ವಿದ್ಯಾರ್ಥಿನಿಯರು ರಾಜ್ಯಮಟ್ಟದ ದಸರಾ ಸಿಎಂ ಕಪ್ ಗೆ ಆಯ್ಕೆ




**ಚಿತ್ರದುರ್ಗ:** ಚಿತ್ರದುರ್ಗ ನಗರದ ಸರ್ಕಾರಿ ವಿಜ್ಞಾನ ಕಾಲೇಜು ವಿದ್ಯಾರ್ಥಿನಿಯರು ರಾಜ್ಯಮಟ್ಟದ ದಸರಾ ಸಿಎಂ ಕಪ್ 2025 ಮೈಸೂರ್ ನಲ್ಲಿ ನಡಿಯುತಿರುವ ಬೆಂಗಳೂರು ಗ್ರಾಮಾಂತರ ವಿಭಾಗ ವನ್ನು ನೆಟ್ ಬಾಲ್ ತಂಡವನ್ನು ಪ್ರತಿನಿದಿಸಲು ಆಯ್ಕೆ ಆಗಿರುತ್ತಾರೆ ಎಂದು ಕಾಲೇಜಿನ ಪ್ರಾಚಾರ್ಯರದ ಪ್ರೊಫೆಸರ್‌ರವಿಕಾಂತ ಎಂ.ಎನ್ ರವರು ತಿಳಿಸಿರುತಾರೆ.

ಆಯ್ಕೆಯಾಗಿರುವ ಕಾಲೇಜಿನ ವಿದ್ಯಾರ್ಥಿನಿಯರಾದ ಪಲ್ಲವಿ, ರೇಣು, ಅರ್ಚನಾ, ಮನು, ಸುಚಿತ್ರ, ಹರ್ಷಿತ, ಮಾನ್ಯ, ವಿದ್ಯಾಶ್ರೀ, ಚೈತನ್ಯ ಸಿಂಚನ ಆಯ್ಕೆಯಾಗಿರೋ ಎಲ್ಲಾ ಕ್ರೀಡಾಪಟುಗಳಿಗೂ ಸಿಡಿಸಿ ಸದಸ್ಯರು ಅಭಿನಂದಿಸಿರುತ್ತಾರೆ ಎಂದು ಡಾ. ರಾಘವೇಂದ್ರ. ಕೆ. ಶಿಕ್ಷಣ ನಿರ್ದೇಶಕರು ತಿಳಿಸಿರುತ್ತಾರೆ. ಕಾಲೇಜಿನ ಎಲ್ಲಾ ಸರ್ವ ಸಿಬ್ಬಂದಿ ವರ್ಗದವರು ಕ್ರೀಡಾಪಟುಗಳನ್ನು ಅಭಿನಂದಿಸಿರುತ್ತಾರೆ.

# ಧರ್ಮಸ್ಥಳದ 20 ವರ್ಷದ ಪ್ರಕರಣ ತನಿಖೆಯಾಗಲಿ

**ಬೆಂಗಳೂರು:** ಧರ್ಮಸ್ಥಳದ ಸುತ್ತಮುತ್ತ 20 ವರ್ಷಗಳಲ್ಲಿ ನಡೆದಿರುವ ಅತ್ಯಾಚಾರ, ಅಸಹಜ ಸಾವು, ಕೊಲೆ ಪ್ರಕರಣಗಳನ್ನು ಎಸ್‌ಐಟಿ ರಚನೆಯ ಸಂಬಂಧ ಹೊರಡಿಸಲಾದ ಆದೇಶದಲ್ಲಿ ಇರುವಂತೆಯೇ ಪೂರ್ಣ ತನಿಖೆಗೆ ಒಳಪಡಿಸಬೇಕು ಎಂದು ಆಗ್ರಹಿಸಿ ಧರ್ಮಸ್ಥಳ ದೌರ್ಜನ್ಯ ವಿರೋಧಿ ವೇದಿಕೆ ನೇತೃತ್ವದಲ್ಲಿ ಗುರುವಾರ ಸ್ವಾತಂತ್ರ್ಯ ಉದ್ಯಾನದಲ್ಲಿ 'ನ್ಯಾಯ ಸಮಾವೇಶ' ನಡೆಯಿತು.

ಪದ್ಮಲತಾ, ವೇದವಲ್ಲಿ ಮಾವುತ ನಾರಾಯಣ, ಯಮುನಾ, ಸೌಜನ್ಯ ಕೊಲೆ ಪ್ರಕರಣಗಳು, ಭೂಕಬಳಿಕೆ, ಮೈಕ್ರೋ ಫೈನಾನ್ಸ್ ದೌರ್ಜನ್ಯಗಳು, ದಲಿತರ ಮೀಸಲು ಭೂಮಿ ಕಬಳಿಕೆ. ಆರ್ಥಿಕ ಅಪರಾಧದ ಆರೋಪ ಪ್ರಕರಣಗಳನ್ನು ಈಗ ರಚಿಸಲಾಗಿರುವ ಎಸ್‌ಐಟಿಗೆ ವಹಿಸಲು ಸಮಸ್ಯೆಗಳಿ. ದಲ್ಲಿ ಪ್ರತ್ಯೇಕವಾಗಿ ವಿಶೇಷ ತನಿಖಾ ತಂಡ ರಚಿಸಿ ತನಿಖೆಗೆ ಒಳಪಡಿಸಬೇಕು ಆಗ್ರಹಿಸಲಾಯಿತು. ಸಮಾವೇಶದಲ್ಲಿ

ಹೋರಾಟಗಾರರನ್ನು ಗುರಿಯಾಗಿ ಸುವುದನ್ನು ಕೈಬಿಡಬೇಕು ಎಂಬುದು ಸೇರಿದಂತೆ ವಿವಿಧ ಪ್ರಕರಣಗಳಲ್ಲಿ ನ್ಯಾಯ ಕೊಡಿಸುವಂತೆ ಆಗ್ರಹಿಸಿ ಮುಖ್ಯಮಂತ್ರಿ. ಯವರಿಗೆ ಮನವಿ ಸಲ್ಲಿಸಲಾಯಿತು.

ಮಾಜಿ ಸಂಸದೆ ಸುಭಾಷಿಣಿ ಅಲಿ ಮಾತನಾಡಿ, 'ನಾವು ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ಹಾಸನದಲ್ಲಿ ಹೋರಾಟ ನಡೆಸಿದವು.

ಪ್ರಜ್ವಲ್ ಜೈಲು ಪಾಲಾಗುವಂತೆ ಮಾಡಿದೆವು. ಹಾಸನದಲ್ಲಿ ಒಬ್ಬ ಅಪರಾಧಿಯಾದರೆ, ಧರ್ಮಸ್ಥಳದಲ್ಲಿ ಇಡೀ ವ್ಯವಸ್ಥೆಯೇ ಅಪರಾಧದಲ್ಲಿ ಭಾಗಿಯಾಗಿದೆ' ಎಂದು ಆರೋಪಿಸಿದರು.

ವಕೀಲ ಬಾಲನ್ ಮಾತನಾಡಿ, 'ಸೌಜನ್ಯ ಪ್ರಕರಣದಲ್ಲಿ ಮಾತ್ರ ದೋಷಾರೋಪ ಪಟ್ಟ ಸಲ್ಲಿಸಲಾಗಿದೆ. ಪದ್ಮಲತಾ, ವೇದದಲ್ಲಿ ಸಹಿತ ಉಳಿದೆಲ್ಲ ಪ್ರಕರಣಗಳಲ್ಲಿ ಸಿ ರಿಪೋರ್ಟ್ ಹಾಕಲಾಗಿದೆ. ಸೌಜನ್ಯ ಪ್ರಕರಣದಲ್ಲಿಯೂ ಮೃತದೇಹ ಸಿಕ್ಕಿದ ಜಾಗವನ್ನಷ್ಟೇ ಮಹಜರು ನಡೆಸಲಾಗಿದೆ. ಅಪಹರಣವಾದ ಸ್ಥಳ, ಅತ್ಯಾಚಾರವಾದ ಸ್ಥಳ, ಕೊಲೆಯಾದ ಸ್ಥಳಗಳನ್ನು ಮಹಜರು ನಡೆಸಿಲ್ಲ. ಆ ನಂತರ ಮರಣೋತ್ತರ ಪರೀಕ್ಷೆ ನಡೆಸುವಾಗ ಪ್ರಾಥಮಿಕ ಸಾಕ್ಷ್ಯಗಳನ್ನೂ ಕಾಪಾಡಿಲ್ಲ. ಹಾಗಾಗಿ ಮಹಜರು ನಡೆಸಿದವರನ್ನು, ಮರಣೋತ್ತರ ಪರೀಕ್ಷೆ ನಡೆಸಿದವರನ್ನು ಜೈಲಿಗೆ ಕಳುಹಿಸಬೇಕು' ಎಂದು ಒತ್ತಾಯಿಸಿದರು.ಕವಿ ಮೂಡ್ನಾಕೂಡು ಚಿನ್ನಸ್ವಾಮಿ, ಹೋರಾಟಗಾರಾದ ಮಟ್ಟಣ್ಣವರ್, ಜ್ಯೋತಿ ಎಸ್., ವಿಮಲಾ ಕೆ.ಎಸ್., ದಸಂಸ ಮುಖಂಡ ಮಾವಳ್ಳಿ ಶಂಕರ್, ಜಾಣಗೆರೆ ವೆಂಕಟರಾಮಯ್ಯ, ವಕೀಲ ಸೂರ್ಯ ಮುಕುಂಧಾರಾಜ ಇತರರು ಮಾತನಾಡಿದರು.ಅನ್ಯಾಯದ ವಿರುದ್ಧ ಹೋರಾಡಿದರೆ ಧರ್ಮದ ವಿರುದ್ಧ ಪಿತೂರಿ ಎಂದು ಸುಳ್ಳು ಆರೋಪ ಹೊರಿಸಿ, ಹೋರಾಟವನ್ನು ಹತ್ತಿಕ್ಕಿ ಎಸ್‌ಐಟಿಯನ್ನು ವಿರೋಧಿಸುತ್ತಿದ್ದಾರೆ

**-ಸಿದ್ದನಗೌಡ ಪಾಟೀಲ, ಲೇಖಕ**

## ಬೆಂಬಲ ಬೆಲೆಯಡಿ ಭತ್ತ ಖರೀದಿ

**ಶಿವಮೊಗ್ಗ:** 2025-26 ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಟ ಬೆಂಬಲಬೆಲೆ ಯೋಜನೆಯಡಿ ರಾಜ್ಯದ ರೈತರಿಂದ ಕೇಂದ್ರ ಸರ್ಕಾರವು ಭತ್ತವನ್ನು ಖರೀದಿಸಲು ಮುಂದಾಗಿದ್ದು, ಸಾಮಾನ್ಯ ಭತ್ತ ಪ್ರತಿ ಕ್ವಿಂಟಾಲ್‌ಗೆ ರೂ.2369 ಹಾಗೂ ಗ್ರೇಡ್ ಎ ಭತ್ತ ಪ್ರತಿ ಕ್ವಿಂಟಾಲ್‌ಗೆ ರೂ. 2389 ದರವನ್ನು ನಿಗದಿಪಡಿಸಲಾಗಿದೆ.

ಜಿಲ್ಲಾ ರೈತರಿಂದ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ಭತ್ತ ಖರೀದಿಸಲು ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ಮತ್ತು ನಿಗಮದ ವತಿಯಿಂದ ಖಿಂಕಅಒಖ/ಕಂಅಖ/ಈಕಭಿ/ಉಪ ಏಜೆನ್ಸಿಗಳನ್ನು ನೇಮಿಸಲಾಗಿದೆ. ರೈತರಿಂದ ಪ್ರತಿ ಎಕರೆಗೆ 25 ಕ್ವಿಂಟಾಲ್ ನಂತೆ ಗರಿಷ್ಟ 50 ಕ್ವಿಂಟಾಲ್ ಭತ್ತವನ್ನು ಖರೀದಿಸಲಿದ್ದು, ಜಿಲ್ಲೆಯ ಎಲ್ಲಾ 7 ತಾಲ್ಲೂಕುಗಳ ಎಪಿಎಂಸಿ ಯಾರ್ಡ್ ಗಳಲ್ಲಿರುವ ಕೆಎಫ್‌ಸಿಎಸ್‌ಸಿ (ಏಈಅಖಅ) ಸಗಟು ಮಳಿಗೆಗಳಲ್ಲಿ ಭತ್ತ ಖರೀದಿ ಕೇಂದ್ರ ತೆರೆಯಲಾಗಿದೆ.

ಭತ್ತವನ್ನು ನೊಂದಾಯಿಸಿಕೊಳ್ಳಲು ಅ.31 ಕೊನೆಯ ದಿನಾಂಕವಾಗಿದ್ದು, ರೈತರು ಕೃಷಿ ಇಲಾಖೆಯಿಂದ ಜಾರಿಗೊಳಿಸಿರುವ ಫ್ರೂಟ್ಸ್ ಐಡಿಯೊಂದಿಗೆ ಖರೀದಿ ಕೇಂದ್ರಗಳಲ್ಲಿ ನೊಂದಾಯಿಸಬೇಕು. ನ.1 ರಿಂದ ಫೆ 28 ರವರೆಗೆ ಭತ್ತವನ್ನು ಖರೀದಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಪ್ರಕಟಣೆಯಲ್ಲಿ ತಿಳಸಿದ್ದಾರೆ.

## ಪ್ರವಾಸಿ ತಾಣಗಳ ಲೋಗೋ, ವೆಬ್‌ಸೈಟ್, ಟ್ಯಾಗ್‌ಲೈನ್, ವಿಡಿಯೋ ಲೋಕಾರ್ಪಣೆ ಜಿಲ್ಲೆಯ ಪ್ರವಾಸಿ ತಾಣಗಳ ಛಾಯಾಚಿತ್ರ ಮತ್ತು ವಿಡಿಯೋ ಪ್ರದರ್ಶನ

**ಶಿವಮೊಗ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತ್ ಹಾಗೂ ಪ್ರವಾಸೋದ್ಯಮ ಇಲಾಖೆ ಸಹಯೋಗದೊಂದಿಗೆ ಸೆ. 27 ರಂದು ಬೆಳಗ್ಗೆ 11.00ಕ್ಕೆ ನಗರದ ಕುವೆಂಪು ರಂಗಮಂದಿರದಲ್ಲಿ ವಿಶ್ವ ಪ್ರವಾಸೋದ್ಯಮ ದಿನಾಚರಣೆಯನ್ನು ಪ್ರವಾಸೋದ್ಯಮ ಹಾಗೂ ಸುಸ್ಥಿರ ಪರಿವರ್ತನೆ ಎಂಬ ಘೋಷವಾಕ್ಯದೊಂದಿಗೆ ಆಚರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಶಿವಮೊಗ್ಗ ಜಿಲ್ಲೆಯ ಪ್ರವಾಸೋದ್ಯಮ ಕುರಿತು ವಿಶೇಷವಾಗಿ ಲೋಗೋ, ವೆಬ್‌ಸೈಟ್, ಟ್ಯಾಗ್‌ಲೈನ್, ವಿಡಿಯೋಗಳನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಎಸ್. ಮಧು ಬಂಗಾರಪ್ಪರವರು ಲೋಕಾರ್ಪಣೆಗೊಳಿಸುವರು.ಈ ಕಾರ್ಯಕ್ರಮದ ಅಂಗವಾಗಿ ಕುವೆಂಪು ರಂಗಮಂದಿರದಲ್ಲಿ ಸೆ.27 ರಿಂದ ಅ.2 ರವರೆಗೆ ಜಿಲ್ಲೆಯ ವಿವಿಧ ಪ್ರವಾಸಿ ತಾಣಗಳ ಛಾಯಾಚಿತ್ರ ಮತ್ತು ವಿಡಿಯೋ ಪ್ರದರ್ಶನವನ್ನು ಉಚಿತವಾಗಿ ಏರ್ಪಡಿಸಲಾಗಿದ್ದು, ಪ್ರವಾಸೋದ್ಯಮ ಪ್ರಿಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೀರಶೈವ-ಲಿಂಗಾಯತ ಸಮಾಜವು ಹಿಂದೂ ಧರ್ಮದ ಅಡಿಯಲ್ಲಿಯೇ ಬರಲಿದೆ ಎಂ.ಪಿ.ಆರ್

**ದಾವಣಗೆರೆ :** ನಾಡಿನ ಎಲ್ಲಾ ಮಠಾಧೀಶರು ವೀರಶೈವ-ಲಿಂಗಾಯತ ಸಮಾಜವು ಹಿಂದೂ ಧರ್ಮದ ಅಡಿಯಲ್ಲಿಯೇ ಬರಲಿದೆ ಎಂಬುದನ್ನು ಸಮಾಜದವರಿಗೆ ತಿಳಿಸಿ ಹೇಳಬೇಕು ಎಂದು ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವೀರಶೈವ-ಲಿಂಗಾಯತ ಸಮಾಜದವರು ಧರ್ಮದ ಕಾಲಂನಲ್ಲಿ 'ಹಿಂದೂ' ಎಂದು ಜಾತಿ ಮತ್ತು ಉಪಜಾತಿ ಕಾಲಂನಲ್ಲಿ ನಿಮ್ಮ ಸಮುದಾಯದ ಹೆಸರನ್ನು ಬರೆಸುವಂತೆ ಈಗಾಗಲೇ ಹರಿಹರ ಪಂಚಮಸಾಲಿ ಪೀಠದ ವಚನಾನಂದ ಸ್ವಾಮೀಜಿ, ಸಿರಿಗೆರೆ ಶ್ರೀಗಳು ತಿಳಿಸಿದ್ದು, ಅವರ ಸೂಚನೆಯಂತೆ ಸಮುದಾಯದವರು ಮುಂದುವರೆಯಬೇಕು. ಇದೇ ರೀತಿ ಸಮಾಜದ ಉಳಿದ ಮಠಾಧೀಶರುಗಳು ತಿಳಿ ಹೇಳಬೇಕು ಎಂದು ವಿನಂತಿಸಿದರು.

ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸಮೀಕ್ಷೆ ನೆಪದಲ್ಲಿ ರಾಜ್ಯದ ಕಾಂಗ್ರೆಸ್ ಸರಕಾರ ಧರ್ಮ, ಜಾತಿಗಳ ನಡುವೆ ಒಡಕನ್ನುಂಟು ಮಾಡುತ್ತಿದೆ. ಸಿಎಂ ಸಿದ್ಧರಾಮಯ್ಯ ಸಮಾಜಗಳ ನಡುವೆ ಬೆಂಕಿ ಹಚ್ಚಿ, ತಮ್ಮ ಬೇಲೆ ಬೇಯಿಸಿಕೊಳ್ಳಲು ಯತ್ನಿಸುತ್ತಿದ್ದಾರೆ ಎಂದು ಕಿಡಿಕಾರಿದರು.2013ರಲ್ಲಿಯೂ ಕೋಟ್ಯಾಂತರ ಹಣ ವಿನಿಯೋಗಿಸಿ ನಡೆಸಿದ ಕಾಂತರಾಜ್ ಆಯೋಗದ ವರದಿ ಕಸದಬುಟ್ಟಿಗೆ ಸೇರಿದೆ. ಈಗಲೂ ತರಾತುರಿಯಲ್ಲಿ ಕೇವಲ ಹದಿನೈದು ದಿನಗಳಲ್ಲಿ ನಡೆಸುತ್ತಿರುವ ಸಮೀಕ್ಷೆಯೂ ಅವೈಜ್ಞಾನಿಕವಾಗಿ ನಡೆದರೆ, ವ್ಯಯಿಸಿದ್ದ ನೂರಾರು ಕೋಟಿ ಹಣ ಮಣ್ಣಪಾಲಾಗುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.ಮತಬ್ಯಾಂಕ್ ಗಟ್ಟಿಗೊಳಿಸಿಕೊಳ್ಳಲು ಜಾತಿಗಣತಿಯಲ್ಲಿ 46 ಹೆಚ್ಚುವರಿ ಜಾತಿಗಳನ್ನು ಸೇರಿಸಿ ಹಿಂದೂ ಧರ್ಮವನ್ನು ಒಡೆಯಲು ಯತ್ನಿಸುತ್ತಿರುವ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರಕ್ಕೆ ಮುಂದೊಂದು ದಿನ ಇದೇ ಮಾರಕವಾಗಿ ಪರಿಣಮಿಸಲಿದೆ ಎಂದು ಭವಿಷ್ಯ ನುಡಿದರು.ಸುದ್ದಿಗೋಷ್ಠಿಯಲ್ಲಿ ಲೋಕಿಕೆರೆ ನಾಗರಾಜ್, ಬಿ.ಜಿ. ಅಜಯಕುಮಾರ್, ಮಾಡಾಳು ಮಲ್ಲಿಕಾರ್ಜುನ್, ಪಂಜು ಪೈಲ್ವಾನ್, ರಾಜು ವೀರಣ್ಣ, ಸುಮಂತ್ ಮತ್ತಿತರರಿದ್ದರು.

## ನೇತ್ರ ಸಹಾಯಕರ ತಾತ್ಕಾಲಿಕ ಹುದ್ದೆಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು ಜಿಲ್ಲಾ ಅಂಧತ್ವ ನಿಯಂತ್ರ ಕಾರ್ಯಕ್ರಮದಡಿ ನೇತ್ರ ಸಹಾಯಕರ 5 ಖಾಲಿ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಜಿ ಆಹ್ವಾನಿಸಿದೆ.ಎರಡು ವರ್ಷದ ಡಿಪ್ಲೋಮಾ ಇನ್ ಅಪ್ಟೋಮೆಟ್ರಿ ಅಥವಾ ನೇತ್ರ ಸಹಾಯಕರಾಗಿ ಮಾನ್ಯತೆ ಪಡೆದ ಸರ್ಕಾರಿ ಆಸ್ಪತ್ರೆಗಳಲ್ಲಿ ಎನ್ಪಿಸಿಬಿ ನಿಯಮಾನುಸಾರ ತರಬೇತಿ ಪಡೆದಿರಬೇಕು. ಕಂಪ್ಯೂಟರ್ ಮತ್ತು ಇಂಟರ್ನೆಟ್ ಇತ್ಯಾದಿಗಳ ತರಬೇತಿಯಲ್ಲಿ ಉತ್ತೀರ್ಣರಾಗಿರಬೇಕು. 45 ವರ್ಷಗಳ ವಯೋಮಿತಿಯೊಳಗಿನವರಾಗಿರಬೇಕು. ನೇಮಕಾತಿಯು ಮೇರಿಟ್ ಕಂ ರೋಸ್ಟರ್ ಕಂ ಅನುಭವ ಕಂ ಅರ್ಹತೆ ಆಧಾರದ ಮೇಲೆ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.ಆಸಕ್ತರು ನಿಗದಿತ ನಮೂನೆ ಅರ್ಜಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಂಧತ್ವ ನಿಯಂತ್ರಣ ವಿಭಾಗದಿಂದ ಪಡೆದು, ಭರ್ತಿ ಮಾಡಿದ ಅರ್ಜಿಯೊಂದಿಗೆ ಸ್ವಯಂ ದೃಢೀಕರಿಸಿದ ದಾಖಲೆಗಳ ನಕಲು ಪ್ರತಿ, ಇತ್ತೀಚಿನ ಭಾವಚಿತ್ರ, ಗುರುತಿನ ಚೀಟಿ, ಜಾತಿ ಪ್ರಮಾಣ ಪತ್ರ, ಖಾಯಂ ವಿಳಾಸ ಮತ್ತು ಸ್ವವಿವರಗಳೊಂದಿಗೆ ಸೆ. 23 ರೊಳಗಾಗಿ ಸಲ್ಲಿಸುವಂತೆ ಜಿಲ್ಲಾ ಅಂಧತ್ವ ನಿಯಂತ್ರಣ ಕಾರ್ಯಕ್ರಮಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಸಮೀಕ್ಷಾ ಕಾರ್ಯ

**ದಾವಣಗೆರೆ :** ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಕರ್ನಾಟಕ ರಾಜ್ಯದ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ಸಮೀಕ್ಷಾ ಕಾರ್ಯವನ್ನು ಸೆ.22 ರಂದು ಅ.7 ರವರೆಗೆ ಆಯೋಜಿಸಲಾಗಿದೆ. ಪಾಲಿಕೆ ವ್ಯಾಪ್ತಿಯಲ್ಲಿ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷಾ ಕಾರ್ಯವನ್ನು ಯಶಸ್ವಿಯಾಗಿ ನಿರ್ವಹಿಸಬೇಕು. ನಗರ ವ್ಯಾಪ್ತಿಯಲ್ಲಿನ ಮನೆ ಮನೆಗೆ ಗಣತಿದಾರರು ಭೇಟಿ ನೀಡಿದಾಗ ಗಣತಿದಾರರು ಕೋರುವ ಮಾಹಿತಿಯನ್ನು ನೀಡಬೇಕೆಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ಸರ್ಕಾರಿ ನೌಕರರ ಮೇಲಿನ ಹಲ್ಲೆ ಮತ್ತು ದೌರ್ಜನ್ಯ ಖಂಡಿಸಿ ನೌಕರರಿಂದ ಮೌನ ಪ್ರತಿಭಟನೆ

# ಭಯಮುಕ್ತ ವಾತಾವರಣದಲ್ಲಿ ನೌಕರರು ಸೇವೆ ಸಲ್ಲಿಸಲು ಅವಕಾಶ ಮಾಡಿಕೊಡಿ

**ಚಿತ್ರದುರ್ಗ:** ಸರ್ಕಾರಿ ನೌಕರರ ಮೇಲಿನ ಹಲ್ಲೆ ಮತ್ತು ದೌರ್ಜನ್ಯ ಖಂಡಿಸಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ವತಿಯಿಂದ ಶುಕ್ರವಾರ ಮೌನ ಪ್ರತಿಭಟನೆ ನಡೆಸಲಾಯಿತು.

ನಗರದ ಪ್ರವಾಸಿ ಮಂದಿರದಿಂದ ಮೌನ ಪ್ರತಿಭಟನೆ ಮೂಲಕ ಜಿಲ್ಲಾಧಿಕಾರಿಗಳ ಕಚೇರಿಗೆ ಆಗಮಿಸಿದ ಸರ್ಕಾರಿ ನೌಕರರು, ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ, ಭಯಮುಕ್ತ ವಾತಾವರಣದಲ್ಲಿ ಸೇವೆ ಸಲ್ಲಿಸಲು ಅವಕಾಶ ಮಾಡಿಕೊಡಬೇಕು, ವಿನಾಕಾರಣ ಕಿರುಕುಳ ನೀಡುವ ವ್ಯಕ್ತಿಗಳ ಮೇಲೆ ಕಾನೂನು ರೀತ್ಯ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.




ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಮಾಲತೇಶ ಮುದಜ್ಜಿ ಅವರು ಅಪರ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ, ಸರ್ಕಾರಿ ನೌಕರರು ಈಗಲೇ ಒತ್ತಡದ ನಡುವೆ ಕೆಲಸ ಮಾಡುತ್ತಿದ್ದಾರೆ. ಕೆಲವು ಕಿಡಿಗೇಡಿಗಳು, ಸರ್ಕಾರಿ ನೌಕರರಿಗೆ ಬೆದರಿಕೆ ಹಾಕುವುದು, ಕಿರುಕುಳ ನೀಡುವಂತಹ ಕಾರ್ಯ ಜಿಲ್ಲೆಯಲ್ಲಿ ಹೆಚ್ಚಾಗಿದ್ದು, ಇದರಿಂದಾಗಿ ಸರ್ಕಾರಿ ನೌಕರರು ಭಯದ ವಾತಾವರಣದಲ್ಲಿಯೇ ಕೆಲಸ ಮಾಡುವಂತಹ ಸ್ಥಿತಿ ನಿರ್ಮಾಣವಾಗಿದೆ. ಅಕ್ರಮಗಳಿಗೆ ಸಹಕಾರ ನೀಡುವಂತೆ ಬೆದರಿಕೆ ಹಾಕುವ ದುಷ್ಕರ್ಮಿಗಳು, ಸಹಕರಿಸದೇ ಇದ್ದರೆ, ಅಂತಹ ನೌಕರರನ್ನು ವಿವಿಧ ರೀತಿಯಲ್ಲಿ ಹೆದರಿಸಿ, ಕಿರುಕುಳ ನೀಡುವುದು, ವಿನಾಕಾರಣ ನೂರಾರು ಸಂಖ್ಯೆಯಲ್ಲಿ ಮಾಹಿತಿ ಹಕ್ಕು ಅರ್ಜಿಗಳನ್ನು ಸಲ್ಲಿಸಿ ಕಾಯ್ದೆಯ ದುರುಪಯೋಗ ಮಾಡುವುದು, ನೌಕರರ ಮೇಲೆ ಹಲ್ಲೆ ಮಾಡುವಂತಹ ಪ್ರಕರಣಗಳು ಕೂಡ ಜಿಲ್ಲೆಯಲ್ಲಿ ಇತ್ತೀಚೆಗೆ ಹೆಚ್ಚಾಗುತ್ತಿವೆ. ಹೀಗಾಗಿ ಸರ್ಕಾರಿ ನೌಕರರು ಪ್ರಾಮಾಣಿಕತೆಯಿಂದ ಭಯಮುಕ್ತ ವಾತಾವರಣದಲ್ಲಿ ಕೆಲಸ ಮಾಡುವಂತಾಗಬೇಕು. ಈ ನಿಟ್ಟಿನಲ್ಲಿ ಬೆದರಿಕೆ ಒಡ್ಡುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಎಂದರು.

ಇತ್ತೀಚೆಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮೇಲೆ ಮಾರಣಾಂತಿಕ ಹಲ್ಲೆ ಮಾಡಲು ಯತ್ನಿಸಿ, ಸರ್ಕಾರಿ ಕರ್ತವ್ಯಕ್ಕೆ ಅಡ್ಡಿಪಡಿಸಿ ಸರ್ಕಾರಿ ದಾಖಲೆಗಳನ್ನು ಹರಿದು ಹಾಕಿರುವ ಎಂ.ಸತೀಶ್ ಕುಮಾರ್ ಎಂಬುವರನ್ನು ಬಂಧಿಸಿ, ಆತನಿಂದಾಗುವ ಮಾನಸಿಕ ಕಿರುಕುಳ ತಪ್ಪಿಸಲು ಹಾಗೂ ಸರ್ಕಾರಿ ಅಧಿಕಾರಿಗಳ ಹಾಗೂ ನೌಕರರ ತೇಜೋವಧೆ ಮಾಡುವುದನ್ನು ತಪ್ಪಿಸಲು ಜಿಲ್ಲೆಯಿಂದ ಗಡಿಪಾರು ಮಾಡುವಂತೆ ಒತ್ತಾಯಿಸಿದರು.

ಇದಕ್ಕೂ ಮುನ್ನ ರಾಜ್ಯ ಸರ್ಕಾರಿ ನೌಕರರು ನಗರದ ಪ್ರವಾಸಿ ಮಂದಿರದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೂ ಮೌನ ಮೆರವಣಿಗೆ ನಡೆಸಿ, ಪ್ರತಿಭಟನೆ ವ್ಯಕ್ತಪಡಿಸಿದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಡಾ. ರಂಗಸ್ವಾಮಿ, ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಅಧ್ಯಕ್ಷ ಮಾಲತೇಶ ಮುದ್ದಜ್ಜಿ, ಜಿಲ್ಲಾ ಕಾರ್ಯದರ್ಶಿ ಆರ್.ಶ್ರೀನಿವಾಸ್, ಖಜಾಂಚಿ ಮಲ್ಲಿಕಾರ್ಜುನ್, ರಾಜ್ಯ ಪರಿಷತ್ ಸದಸ್ಯ ಎಸ್.ರಾಜಪ್ಪ, ಉಪಾಧ್ಯಕ್ಷ ಪೂಜಾರ್ ಪ್ರಕಾಶ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಮಹಾಂತೇಶ್, ಪ್ರೌಢಶಾಲಾ ಶಿಕ್ಷಕರ ಸಂಘದ ಬಸವರಾಜಪ್ಪ, ಪಿಡಿಒ ಸಂಘದ ಜಿಲ್ಲಾ ಅಧ್ಯಕ್ಷ ನಯಾಜ್ ಸೇರಿದಂತೆ ವಿವಿಧ ಇಲಾಖೆಗಳ ಸರ್ಕಾರಿ ನೌಕರರು ಉಪಸ್ಥಿತರಿದ್ದರು.

## ಹಿರಿಯ ಕಾದಂಬರಿಕಾರ ಶ್ರೀ ಎಸ್.ಎಲ್. ಭೈರಪ್ಪನವರಿಗೆ ಶ್ರದ್ಧಾಂಜಲಿ ಸಮಾರಂಭ



**ಚಿಕ್ಕಮಗಳೂರು:** ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು, ಚಿಕ್ಕಮಗಳೂರು ಮತ್ತು ಜಿಲ್ಲಾ ಕಲಾವಿದರ ಸಂಘ, ಚಿಕ್ಕಮಗಳೂರು ಇವರ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ ನಿಧನ ಹೊಂದಿದ ಹಿರಿಯ ಕಾದಂಬರಿಕಾರ ಶ್ರೀ ಎಸ್.ಎಲ್. ಭೈರಪ್ಪನವರಿಗೆ ನಿನ್ನ (ಸೆ.25ರ ಗುರುವಾರ) ಶ್ರದ್ಧಾಂಜಲಿ ಸಮಾರಂಭ ಏರ್ಪಡಿಸಲಾಗಿತ್ತು.

ಸಮಾರಂಭ ಉದ್ಘಾಟಿಸಿ ಮಾತನಾಡಿದ ಸಾವಯವ ತಜ್ಞ ಡಾ. ಎಸ್.ಆರ್. ಶಿವುಪ್ರಸಾದ್‌ರವರು ಎಸ್.ಎಲ್. ಭೈರಪ್ಪನವರು ತಮ್ಮ ಕಾದಂಬರಿಗಳಲ್ಲಿ ಜೀವನದ ಏರಿಳಿತಗಳು ಮತ್ತು ಸಮಾಜದ ಅಂಕು ಡೊಂಕುಗಳನ್ನು ಯಶವತ್ತಾಗಿ ಚಿತ್ರಿಸಿ, ಓದುಗರನ್ನು ಸೆಳೆದಿಟ್ಟುಕೊಳ್ಳುವುದರಲ್ಲಿ ಯಶಸ್ವಿಯಾಗಿ ಬದುಕಿನಲ್ಲಿ ಸಮಾಜದ ಮೌಢ್ಯಗಳು, ಕಂದಾಚಾರಗಳು ಮತ್ತು ಬದುಕಿನ ದೌರ್ಬಲ್ಯಗಳನ್ನು ಅನಾವರಣಗೊಳಿಸುವಂತಹ ಸಾಕಷ್ಟು ಕಾದಂಬರಿಗಳನ್ನು ಕನ್ನಡ ಸಾಹಿತ್ಯ ಲೋಕಕ್ಕೆ ನೀಡಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ದಿಗ್ಗಜ ಪತ್ರಿಕೆಯ ಶ್ರೀ ಜಗದೀಶ್, ಹಲ್ಮಿಡಿ ಸಂದೇಶ ಪತ್ರಿಕೆಯ ಪುರುಷೋತ್ತಮ್, ಪಿ.ಸಿ.ಎ.ಆರ್.ಡಿ. ಬ್ಯಾಂಕ್‌ನ ಮಾಜಿ ಅಧ್ಯಕ್ಷರಾದ ಶ್ರೀ ಕೆಸವಿನಮನೆ ಭೈರೇಗೌಡ್ರು, ಆವುತಿ ಹೋಬಳಿ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಪೂರ್ಣೇಶ್ ಕಸ್ಕೆ, ವಸ್ತಾರೆ ಹೋಬಳಿ ಕ.ಸಾ.ಪ. ಅಧ್ಯಕ್ಷರಾದ ಡಾ. ಸತೀಶ್ ಜಕ್ಕನಹಳ್ಳಿ, ಕ.ಸಾ.ಪ. ಕಾರ್ಯದರ್ಶಿಗಳಾದ ಟಿ. ಸಂದೀಪ್, ಮೋಹನ್ ಭೈರಾಪುರ, ತೊಂಡವಳ್ಳಿ ನಿಂಗೇಗೌಡ ಮುಂತಾದವರು ಭಾಗವಹಿಸಿದ್ದರು.

ತಾಲ್ಲೂಕು ಕ.ಸಾ.ಪ. ಅಧ್ಯಕ್ಷರಾದ ಶ್ರೀ ಮಾವಿನಕೆರೆ ದಯಾನದ್‌ರವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾ ಕಲಾವಿದರ ಸಂಘದ ಅಧ್ಯಕ್ಷರಾದ ಶ್ರೀ ಜೆ.ಪಿ. ಕೂದುವಳ್ಳಿ ಮತ್ತು ಸದಸ್ಯರು ಭಾಗವಹಿಸಿ ಗೀತಗಾಯನ ನಡೆಸಿಕೊಟ್ಟರು.

### ಗದಗ ಎಸ್‌ಎಸ್‌ಕೆ ಸಮಾಜದಿಂದ ನಮ್ಮೂರ ದಸರಾ-2025

## ಹಿಂದೂ ಸಂಸ್ಕೃತಿಯನ್ನು ಅಳಿಸಲು ಯಾರಿಂದಲೂ ಸಾದ್ಯವಿಲ್ಲ



**ಗದಗ :** ನಮ್ಮ ದೇಶವನ್ನು ಬಹಳಷ್ಟು ಮುಸ್ಲಿಂ ರಾಜರು, ಬ್ರಿಟಿಷರು ನೂರಾರು ವರ್ಷಗಳ ಕಾಲ ಆಳಿ ಹೋದರೂ ನಮ್ಮ ಹಿಂದೂ ಸಂಸ್ಕೃತಿಯನ್ನು ಅಳಿಸಲು ಯಾರಿಂದಲೂ ಸಾದ್ಯವಾಗಲಿಲ್ಲ ಎಂದು ಖ್ಯಾತ ವೈದ್ಯ ಡಾ. ಪ್ರಕಾಶ ಸಂಕನೂರ ಅವರು ಹೇಳಿದರು.

ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಬಾಸ್ಕರಸಾ ಪವಾರ ಸಭಾಂಗಣದ ದಸರಾ ದರ್ಬಾರ ವೇದಿಕೆಯಲ್ಲಿ ಜರುಗಿದ ನಮ್ಮೂರ ದಸರಾ-2025ರ ನಾಲ್ಕನೆ ದಿನದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿ, ನಮ್ಮ ಅಖಂಡ ಭಾರತವನ್ನು ಒಂದು ಗೂಡಲು ನಮ್ಮ ಹಿಂದೂ ಸಂಸ್ಕೃತಿ ಮೂಲ ಕಾರಣವಾಗಿದೆ. ಇತ್ತೀಚಿನ ದಿನಗಳಲ್ಲಿ ನಮ್ಮ ಹಿಂದೂ ಸಂಸ್ಕೃತಿಯನ್ನು ವಿದೇಶಿಗರು ಹೆಚ್ಚಿನ ಸಂಖ್ಯೆಯಲ್ಲಿ ಅಪ್ಪಿಕೊಳ್ಳುತ್ತಿದ್ದಾರೆ. ಇದಕ್ಕೆ ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಶ್ರೇಷ್ಠವಾದ ನಮ್ಮ ಹಿಂದೂ ಸಂಸ್ಕೃತಿಯ ಆಚಾರ ವಿಚಾರಗಳು ಕಾರಣವಾಗಿವೆ ಎಂದು ಹೇಳಿದರು.

ಇನ್ನೋರ್ವ ಮುಖ್ಯ ಅತಿಥಿಗಳಾದ ಹಿರಿಯ ಮೋಟಾರ್ ವಾಹನ ನಿರೀಕ್ಷಕರಾದ ಅರುಣ ಕಟ್ಟಿಮನಿ ಅವರು ಮಾತನಾಡಿ, ಯಾರಾದರೂ ಸಂಪತ್ತನ್ನು ಹೊಂದಿದ್ದರೆ ಅವರು ಆರೋಗ್ಯವನ್ನು ಹುಡುಕುತ್ತಾ ಹೋಗುತ್ತಾರೆ. ಆದರೆ, ಯಾರಾದರೂ ಬಳಿ ಉತ್ತಮ ಆರೋಗ್ಯವಿದ್ದರೆ ಅವರ ಹತ್ತಿರ ಸಂಪತ್ತು ಹುಡುಕಿಕೊಂಡು ಬರುತ್ತದೆ. ಅದ್ದರಿಂದ ನಾವು ಸಂಪತ್ತು ಗಳಿಸುವ ಒತ್ತಡದಲ್ಲಿ ನೆಮ್ಮದಿಯನ್ನು ಕಳೆದುಕೊಳ್ಳುತ್ತಿದ್ದೆವೆ ಸಮಯ ಸಿಕ್ಕಾಗ ದೇವರ ಭಜನೆ, ಪ್ರಾರ್ಥನೆ ಮಾಡುವ ಮೂಲಕ ನೆಮ್ಮದಿ ಕಾಣಬಹುದು ಅಂತಹ ಶಕ್ತಿ ಪ್ರಾರ್ಥನೆಯಲ್ಲಿದೆ ಎಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ಎಸ್‌ಎಸ್‌ಕೆ ಸಮಾಜದ ಪಂಚ ಕಮೀಟಿ ಅಧ್ಯಕ್ಷ ಫಕೀರಸಾ ಬಾಂಡಗೆ ಅಧ್ಯಕ್ಷತೆ ವಹಿಸಿದ್ದರು.

ವೇದಿಕೆ ಮೇಲೆ ಉಪಾಧ್ಯಕ್ಷ ರಾಜು ಬದಿ, ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ, ರವಿ ಶಿದ್ಲಿಂಗ, ದಸರಾ ಕಮೀಟಿ ಚೇರಮನ್ ಅನಿಲ್ ಖಟವಟೆ ಉಪಸ್ಥಿತರಿದ್ದರು.

## ವಿಶ್ವ ಹೃದಯ ದಿನಚರಣೆಯ ಅಂಗವಾಗಿ ವಾಕಥಾನ್ ಫಾರ್ ಹೆಲ್ದಿ ಹಾರ್ಟ್ ಜಾಥಾ ಕಾರ್ಯಕ್ರಮ

**ಹಾಸನ:** ನಗರದ ಹೇಮಾವತಿ ಪ್ರತಿಮೆ ಬಳಿ ಜನಪ್ರಿಯ ಆಸ್ಪತ್ರೆ, ಹಾಸನ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಮತ್ತು ಐ.ಎಂ.ಎ ಹಾಸನ ಸಂಯುಕ್ತಾಶ್ರಯದಲ್ಲಿ ಶುಕ್ರವಾರದಂದು ವಿಶ್ವ ಹೃದಯ ದಿನದ ಅಂಗವಾಗಿ ಜಾಗೃತಿ ಮೂಡಿಸಲು ಹಮ್ಮಿಕೊಳ್ಳಲಾಗಿದ್ದ ವಾಕಥಾನ್ ಜಾಥವನ್ನು ಸಂಸದ ಶ್ರೇಯಸ್ ಎಂ. ಪಟೇಲ್ ಉದ್ಘಾಟಿಸಿದರು.

ನಂತರ ಸಂಸದ ಶ್ರೇಯಸ್ ಎಂ. ಪಟೇಲ್ ಮಾತನಾಡಿ, ಇಂತಹ ವಾಕಥಾನ್ ಕಾರ್ಯಕ್ರಮವು ಉತ್ತಮವಾದ ಆರೋಗ್ಯಕರ ಬೆಳವಣಿಗೆ. ಹೃದಯ ಬಡಿತ ಇದ್ದರಷ್ಟೆ ನಾವು ಬದುಕಲು ಸಾಧ್ಯ. ಎಷ್ಟೆ ಕೆಲಸದ ಒತ್ತಡ ಇದ್ದರೂ ಪ್ರತಿಯೊಬ್ಬರೂ ಹೃದಯ ಸಂಬಂಧಿತ ಖಾಯಿಲೆ ಬಗ್ಗೆ ಮತ್ತು ತಮ್ಮ ದಿನಚರಿ ಹಾಗೂ ತಮ್ಮ ಹವ್ಯಾಸಗಳ ಬಗ್ಗೆ ಗಮನಹರಿಸುವ ಕೆಲಸ ಮಾಡಬೇಕು.



ದಿನಬೆಳಕಾದರೇ ಚಿಕ್ಕಮಕ್ಕಳಿಂದ ಹಿಡಿದು ದೊಡ್ಡವರವರೆಗೂ ಹೃದಯ ಸಂಬಂಧಿತ ಖಾಯಿಲೆಗಳಿಂದ ಸಾವನಪ್ಪುತ್ತಿದ್ದಾರೆ. ಸರಿಯಾದ ಸಮಯಕ್ಕೆ ಹೃದಯ ಪರೀಕ್ಷೆ ಮಾಡಿಸಿಕೊಳ್ಳುವುದು, ಪ್ರತಿದಿನ ಕನಿಷ್ಠ 5 ಕಿ.ಮಿ. ಆದರೂ ವಾಕ್ ಮಾಡುವುದು, ಎಲ್ಲಾಕ್ಕಿಂತ ಮುಖ್ಯವಾಗಿ ಮದ್ಯಪಾನ, ದೂಮಪಾನವನ್ನು ಬಿಡುವಂತಹ ಕೆಲಸ ಮಾಡಬೇಕು ಎಂದು ಕಿವಿಮಾತು ಹೇಳಿದರು.

ವಿಶ್ವ ಒಕ್ಕಲಿಗರ ಮಠದ ಪೀಠಾಧ್ಯಕ್ಷರಾದ ನಿಶ್ಚಲನಂದನಾಥ ಮಹಾಸ್ವಾಮೀಜಿ ಮಾತನಾಡಿ, ಇಂತಹ ಜಾಥಾ ಕಾರ್ಯಕ್ರಮದ ಮೂಲಕ ಸಾರ್ವಜನಿಕರಿಗೆ ಹೃದಯದ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಆಸ್ಪತ್ರೆ ಮಾತ್ರ ಅಭಿವೃದ್ಧಿಯಾದರೇ ಸಾಕಾಗುವುದಿಲ್ಲ. ಜನಸಾಮಾನ್ಯರ ಆರೋಗ್ಯ ಕೂಡ ಉತ್ತಮವಾಗಿರಲಿ ಎಂದು ಒಳ್ಳೆಯ ಜನೋದ್ದೇಶವನ್ನಿಟ್ಟುಕೊಂಡು ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು. ಹೃದಯ ಚನ್ನಾಗಿದ್ದರೇ ಆರೋಗ್ಯ ಉತ್ತಮವಾಗಿರುತ್ತದೆ. ಒಬ್ಬ ವ್ಯಕ್ತಿಯ ಆರೋಗ್ಯ ದೇಶದ ಆರೋಗ್ಯವಾಗಿರುತ್ತದೆ ಎಂದು ಹೇಳಿದರು.

ಮೇಯರ್ ಗಿರೀಶ್ ಚನ್ನವೀರಪ್ಪ ಮಾತನಾಡಿ ಹೃದಯದ ಪ್ರಾಮುಖ್ಯತೆ ಬಗ್ಗೆ ಮೊದಲು ತಿಳಿದುಕೊಳ್ಳಬೇಕು. ಹೃದಯಕ್ಕೆ ಪೂರಕವಾದ ಆಹಾರ ಸೇವಿಸುವುದು ಉತ್ತಮ.

ಇಂದಿನ ತಾಂತ್ರಿಕ ಯುಗದಲ್ಲಿ ಆಹಾರದ ಸೇವಿಸುವ ಬಗ್ಗೆ ಬಹುತೇಕರು ಕಾಳಜಿವಹಿಸುತ್ತಿಲ್ಲ. ಎಷ್ಟೆ ಹಣ ಆಸ್ತಿ ಅಂತಸ್ತು ಇದ್ದರೂ ಆರೋಗ್ಯ ಚನ್ನಾಗಿ ಇಲ್ಲದಿದ್ದರೇ ಯಾವುದು ಪ್ರಯೋಜನಕ್ಕೆ ಬರುವುದಿಲ್ಲ. ಆರೋಗ್ಯವೇ ಭಾಗ್ಯ ಎನ್ನುವಂತೆ ಆರೋಗ್ಯದ ಕಡೆ ಪ್ರತಿಯೊಬ್ಬರೂ ಕಾಳಜಿವಹಿಸುವಂತೆ ಮನವಿ ಮಾಡಿದರು.

ತಮ್ಮ ದಿನಚರಿಯಲ್ಲಿ ಪ್ರತಿದಿನ ಕೆಲಸ ಸಮಯ ದೇಹಕ್ಕೆ ವ್ಯಾಯಮ ನೀಡಿ ತಮ್ಮ ಆರೋಗ್ಯವನ್ನು ರಕ್ಷಿಸಿಕೊಳ್ಳಿ ಎಂದು ಕರೆ ನೀಡಿದರು.

ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಛೇರ್ಮನ್ ಹೆಚ್.ಪಿ. ಮೋಹನ್ ಮಾತನಾಡಿ, ಹೃದಯಘಾತ ಎಂಬುದು ಸಮಾಜದಲ್ಲಿ ಬಹಳ ದೊಡ್ಡ ಆತಂಕ ಮೂಡಿಸಿದೆ. ಇದೊಂದು ಮಹಾಮಾರಿ ರೀತಿ ಪರಿಣಮಿಸಿದೆ. ಈ ಬಗ್ಗೆ ಅರಿವು ಮೂಡಿಸಲು ವಿವಿಧ ಸಂಸ್ಥೆ ಮೂಲಕ ಈ ವಾಕಾಥಾನ್ ಮಾಡಲಾಗುತ್ತಿದೆ. ಎಲ್ಲಾರೂ ಆಹಾರ ಶೈಲಿಯಲ್ಲಿ ಬದಲಾವಣೆ, ಪ್ರತಿದಿನ ಸರಳವಾದ ವ್ಯಾಯಾಮವನ್ನು ಜೀವನ ಪೂರ್ತಿ ಮಾಡಿದರೇ ಆರೋಗ್ಯವನ್ನು ಜೀವನ ಪೂರ್ತಿ ಉತ್ತಮವಾಗಿ ಇಟ್ಟುಕೊಳ್ಳಬಹುದು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಸಾಪ ಅಧ್ಯಕ್ಷ ಎಚ್.ಎಲ್. ಮಲ್ಲೇಶ್ ಗೌಡ, ರೆಡ್ ಕ್ರಾಸ್ ಕಾರ್ಯದರ್ಶಿ ಶಬೀರ್‌ಆಹಮದ್, ಖಜಾಂಚಿ ಹೆಚ್.ಡಿ.ಜಯೇಂದ್ರ ಕುಮಾರ್, ನಿದೇಶಕರಾದ ಎಸ್.ಎಸ್. ಪಾಷಾ, ಕೆ.ಟಿ. ಜಯಶ್ರೀ, ಮಹಾವೀರ್ ಬನ್ಸಾಲಿ, ಬಿ.ಆರ್. ಉದಯ ಕುಮಾರ್, ಡಾ. ರಂಗಲಕ್ಷ್ಮೀ, ಗಿರೀಶ್, ಜಯಪ್ರಕಾಶ್, ಭೀಮರಾಜ್, ಕಸಾಪ ಮಾಜಿ ಗೌರವಾಧ್ಯಕ್ಷ ರವಿನಾಕಲಗೂಡು, ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಚೈತ್ರ ನಾಯಕರಹಳ್ಳಿ, ಡಾ.ಯತೀಶ್ ಕುಮಾರ್, ಡಾ.ದಿನೇಶ್ ಭೈರೇಗೌಡ, ಡಾ.ಶ್ರೀರಂಗಡಾಂಗೆ, ಕಟ್ಟಾಯ ಶಿವಕುಮಾರ್, ಸಾರ್ವಜನಿಕರು, ವಿದ್ಯಾರ್ಥಿಗಳು ಮತ್ತು ಇತರರು ಜಾಥಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಿದರು.

